ಸಂಪುಟ: 22, ಸಂಚಿಕೆ: 50, ಪುಟಗಳು: 8, ಶನಿವಾರ, 30 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡವೇ ಸತ್ಯ, ಕನ್ನಡವೇ ನಿತ್ಯ
ವೇಣು ಸಾರಥ್ಯದಲ್ಲಿ...
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



# ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ನಿನ್ನ ಧನವನ್ನು ಜನರು ಗುರುತಿಸಿದರೆ, ನಿನ್ನ ದಾನವನ್ನು ದೇವರು ಗುರುತಿಸುತ್ತಾನೆ.

### ಪಂಚಾಂಗ

(ಶನಿವಾರ 30, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ
- ದಕ್ಷಿಣಾಯಣ,ಶರದೃತು, ಕಾರ್ತಿಕ ಮಾಸ, ಕೃಷ್ಣ ಪಕ್ಷ
- ಚತುರ್ದಶಿ (ಹಗಲು 10:32) ನಂತರ ಅಮಾವಾಸ್ಯೆ
- ವಿಶಾಖ ನಕ್ಷತ್ರ (ಹಗಲು 12:36) ನಂತರ ಅನುರಾಧ ನಕ್ಷತ್ರ
- ರಾಹುಕಾಲ: 09:20 ರಿಂದ 10:46
- ಗುಳಿಕಕಾಲ: 06:27 ರಿಂದ 07:54
- ಯಮಗಂಡಕಾಲ: 01:38 ರಿಂದ 03:04

## ಸಂಕ್ಷಿಪ್ತ ಸುದ್ದಿ

### ಮುಸ್ಲಿಮರಿಗೆ ಮತದಾನದ ಹಕ್ಕಿಲ್ಲದಂತೆ ಮಾಡ್ಬೇಕು!
## ಚಂದ್ರಶೇಖರ ಸ್ವಾಮೀಜಿಗೆ ನೋಟಿಸ್

**ಬೆಂಗಳೂರು:** ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡಬೇಕು ಎಂದು ಕರೆ ನೀಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿಗೆ ಉಪ್ಪಾರಪೇಟೆ ಪೊಲೀಸರಿಂದ ನೋಟಿಸ್ ಹೊರಡಿಸಿದ್ದಾರೆ. ಡಿಸೆಂಬರ್ 2 ರಂದು ಬೆಳಗ್ಗೆ 11 ಗಂಟೆಗೆ ಪೊಲೀಸ್ ಠಾಣೆಯಲ್ಲಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿಗೊಳಿಸಿದ್ದಾರೆ. ಸೈಯ್ಯದ್ ಅಬ್ಬಾಸ್ ಎಂಬವರು ಸ್ವಾಮೀಜಿ ಹೇಳಿಕೆಯನ್ನು ಖಂಡಿಸಿ ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬಿಎನ್‌ಎಸ್ ಸೆಕ್ಷನ್ 299 (ಯಾವುದೇ ಧರ್ಮವನ್ನು ಅಪಮಾನಗೊಳಿಸಿ ಅವರ ಧಾರ್ಮಿಕ ಭಾವನೆಗಳಿಗೆ ಆಘಾತ ಉಂಟುಮಾಡುವ ಉದ್ದೇಶದಿಂದ ಬುದ್ಧಿಪೂರ್ವಕವಾಗಿ ಮತ್ತು ದ್ವೇಷ ಭಾವನೆಯಿಂದ ಮಾಡಿದ ಕೃತ್ಯ) ಅಡಿ ಉಪ್ಪಾರಪೇಟೆ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.



ಪುಟ 2

### ಬಾಯ್ತಪ್ಪಿ ಆಡಿದ ಮಾತು ಅಪರಾಧದಂತೆ ಕಂಡಿರುವುದು
## ವಿಪರ್ಯಾಸ

**ಬೆಂಗಳೂರು:** ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಚಂದ್ರಶೇಖರನಾಥ ಸ್ವಾಮೀಜಿ ವಿರುದ್ಧ ಕಾಂಗ್ರೆಸ್ ನೀಚ ರಾಜಕಾರಣ ಮಾಡಲು ಹೊರಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕಿಡಿಕಾರಿದ್ದಾರೆ. ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ವಿಜಯೇಂದ್ರ, ತಮ್ಮ ಹೇಳಿಕೆಯ ಕುರಿತಂತೆ ಸೌಹಾರ್ದತೆಯನ್ನು ಪುಷ್ಠೀಕರಿಸಿ ಸೂಕ್ತ ಸ್ಪಷ್ಟನೆ ನೀಡಿ ವಿವಾದಕ್ಕೆ ಇತಿಶ್ರೀ ಹಾಡುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ಈ ಪ್ರಕರಣವನ್ನು ಇಷ್ಟಕ್ಕೇ ಕೈ ಬಿಡಬಹುದಾಗಿದ್ದ ಕಾಂಗ್ರೆಸ್ ಸರ್ಕಾರ ಸ್ವಾಮೀಜಿಗಳ ವಿರುದ್ಧ ದೂರು ದಾಖಲಾಗುವಂತೆ ನೋಡಿಕೊಂಡು ಅವರನ್ನು ವಿಚಾರಣೆಗಾಗಿ ಪೊಲೀಸ್ ಠಾಣೆಗೆ ಕರೆಯುವ ಮೂಲಕ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ನೀಚ ರಾಜಕಾರಣ ಮಾಡಲು ಹೊರಟಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ಪುಟ 2

### ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣ
# ಫೆಂಗಲ್ ಚಂಡಮಾರುತ

**ಚೆನ್ನೈ:** ಸುಮಾರು ಮೂರು ದಿನಗಳ ನಂತರ ನೈರುತ್ಯ ಬಂಗಾಳ ಕೊಲ್ಲಿಯಲ್ಲಿ 'ಫೆಂಗಲ್' ಚಂಡಮಾರುತ ರೂಪುಗೊಂಡಿದ್ದು, ಉತ್ತರ ತಮಿಳುನಾಡು-ಪುದುಚೇರಿ ಕರಾವಳಿಯತ್ತ ಸಾಗುತ್ತಿದ್ದು, ಇಂದು ಶನಿವಾರ ಮಧ್ಯಾಹ್ನ ಅಪ್ಪಳಿಸುವ ಸಾಧ್ಯತೆಯಿದೆ.

ಪುದುಚೇರಿಗೆ ಸಮೀಪದಲ್ಲಿರುವ ಕಾರೈಕಲ್ ಮತ್ತು ಮಹಾಬಲಿಪುರಂ ನಡುವೆ ಭೂಕುಸಿತ ಸಂಭವಿಸಲಿದೆ ಎಂದು ಪ್ರಾದೇಶಿಕ ಹವಾಮಾನ ಕೇಂದ್ರ ಮುಖ್ಯಸ್ಥ ಎಸ್.ಬಾಲಚಂದ್ರನ್ ಹೇಳಿದ್ದಾರೆ. ತೀವ್ರ ಚಂಡಮಾರುತವಾಗಿ ಗಂಟೆಗೆ 70ರಿಂದ 80 ಕಿಮೀ ವೇಗದಲ್ಲಿ ಗಾಳಿ ಬೀಸಲಿದೆ. ಚಂಡಮಾರುತ ನೆಲೆಯಾಗುವ ಸಮಯದಲ್ಲಿ ಗಂಟೆಗೆ 90 ಕಿಮೀ ವೇಗದಲ್ಲಿ ಗಾಳಿ ಬೀಸಬಹುದು ಎಂದು ಹೇಳುತ್ತಾರೆ.

ಹವಾಮಾನ ಅಧಿಕಾರಿಗಳ ಇತ್ತೀಚಿನ ಮಾಹಿತಿ ಪ್ರಕಾರ, ಚಂಡಮಾರುತವು ವಾಯುವ್ಯಕ್ಕೆ 15 ಕಿಮೀ ವೇಗದಲ್ಲಿ ಚಲಿಸುತ್ತಿದ್ದು, ನಾಗಪಟ್ಟಿಣಂನ ಪೂರ್ವ-ಈಶಾನ್ಯಕ್ಕೆ 240 ಕಿಮೀ, ಪುದುಚೇರಿಯ ಪೂರ್ವ-ಆಗ್ನೇಯಕ್ಕೆ 230 ಕಿಮೀ ಮತ್ತು ಚೆನ್ನೈನಿಂದ ಆಗ್ನೇಯಕ್ಕೆ 250 ಕಿಮೀ ಇದೆ.

ಪುಟ 2



## ರೆಡ್ ಅಲರ್ಟ್!

### ಭೂಕುಸಿತ ಸಾಧ್ಯತೆ

ಫೆಂಗಲ್ ಚಂಡಮಾರುತ ನೆರೆಯ ತಮಿಳು ನಾಡಿಗೆ ಅಪ್ಪಳಿಸಲು ಸಜ್ಜಾಗುತ್ತಿದ್ದಂತೆ ಬೆಂಗಳೂರಿನಲ್ಲಿ ಇಂದು ಬೆಳಗ್ಗೆಯಿಂದಲೇ ಮೋಡ ಕವಿದ ವಾತಾವರಣವಿದ್ದು, ತುಂತುರು ಮಳೆಯಾಗುವ ಲಕ್ಷಣ ಕಾಣುತ್ತಿದೆ.

### ತಮಿಳುನಾಡಿಗೆ ಇಂದು ಅಪ್ಪಳಿಸಲಿದೆ



### ಪಾಕ್ ಪ್ರಜೆಗಳ ಬಂಧನ ಕೇಸ್
## 1,350ಕ್ಕೂ ಹೆಚ್ಚು ಪುಟ ಚಾರ್ಜ್‌ಶೀಟ್



**ಬೆಂಗಳೂರು:** ನಗರದ ಹೊರವಲಯದಲ್ಲಿ ಪಾಕ್ ಪ್ರಜೆಗಳ ಬಂಧನ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಪೂರ್ಣಗೊಳಿಸಿದ ಜಿಗಣಿ ಪೊಲೀಸರು ಕೋರ್ಟ್‌ಗೆ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಸುಮಾರು 1,350ಕ್ಕೂ ಹೆಚ್ಚು ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದ್ದು.. 18 ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ. ಇನ್ನು ಪೊಲೀಸರ ತನಿಖೆ ವೇಳೆ ಹಲವು ಮಹತ್ವದ ವಿಚಾರಗಳು ಬೆಳಕಿಗೆ ಬಂದಿದೆ. ಹಣ ವರ್ಗಾವಣೆ, ಅಕ್ರಮವಾಗಿ ಭಾರತಕ್ಕೆ ಎಂಟ್ರಿ, ಉದ್ಯೋಗ, ಧರ್ಮ ಬೋಧನೆ ವಿಚಾರಗಳನ್ನು ಪೊಲೀಸರು ಬಯಲಿಗೆಳೆದಿದ್ದಾರೆ.

ಪುಟ 2

### ವಿದ್ಯುತ್ ಅವಘಡಕ್ಕೆ
## ಅಡಿಕೆ ತೋಟ ಸರ್ವನಾಶ

**ದಾವಣಗೆರೆ:** ವಿದ್ಯುತ್ ಅವಘಡಕ್ಕೆ ಒಂದೂವರೆ ಎಕರೆ ಅಡಿಕೆ ತೋಟ ಸುಟ್ಟು ಕರಕಲಾದ ಘಟನೆ ದಾವಣಗೆರೆ ಜಿಲ್ಲೆ ಜಗಳೂರು ತಾಲೂಕಿನ ಕಟ್ಟಿಗೆಹಳ್ಳಿಯಲ್ಲಿ ನಡೆದಿದೆ.

ಜಗಳೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ರೈತ ಬಸವನಗೌಡ ಹಾಗೂ ಶಾಂತಮ್ಮ ಎಂಬವರಿಗೆ ಸೇರಿದ 650 ಅಡಿಕೆ ಗಿಡಗಳು ಸಂಪೂರ್ಣ ನಾಶವಾಗಿದೆ. ಜಮೀನಿನಲ್ಲಿದ್ದ ಬೋರ್‌ವೆಲ್ ಆನ್ ಮಾಡಿದ ತಕ್ಷಣ ಬೆಂಕಿ ಕಾಣಿಸಿಕೊಂಡಿದೆ. ಅಡಿಕೆ ತೋಟದಲ್ಲಿ ಕಳೆ ನಾಶಕ ಹೊಡೆದಿದ್ದರಿಂದ ಒಣಗಿದ ಹುಲ್ಲಿಗೆ ಬೆಂಕಿ ತಗುಲಿದೆ. ನೋಡನೋಡುತ್ತಿದ್ದಂತೆಯೇ ಬೆಳೆದು ನಿಂತ ಅಡಿಕೆ ತೋಟ ಸಂಪೂರ್ಣ ಸುಟ್ಟು ಹೋಗಿದೆ.

ಪುಟ 2



### ಹೊಸ ವರ್ಷಕ್ಕೆ ಬೆಂಗಳೂರಿನಲ್ಲಿ ಸಂಚರಿಸಲಿವೆ
## 320 ಎಲೆಕ್ಟ್ರಿಕ್ ಎಸಿ ಬಸ್‌ಗಳು



**ಬೆಂಗಳೂರು:** ಹೊಸ ವರ್ಷಕ್ಕೆ ಜನವರಿಯಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ 320 ಹೊಚ್ಚ ಹೊಸ ಬಸ್‌ಗಳು ನಗರದಲ್ಲಿ ಸಂಚಾರ ಮಾಡಲಿವೆ. 320 ಎಸಿ ಎಲೆಕ್ಟ್ರಿಕ್ ಬಸ್ಸುಗಳಿಗೆ ಟೆಂಡರ್ ಕರೆಯಲಾಗಿತ್ತು. ಈ ಟೆಂಡರ್ ಅನ್ನ ಅಶೋಕ್ ಲೇಲ್ಯಾಂಡ್ ಕಂಪನಿಯ ಪಾಲುದಾರ ಸಂಸ್ಥೆಯಾದ ಓಂ ಕಂಪನಿ ಪಡೆದುಕೊಂಡಿದೆ. ಈಗಾಗಲೇ ವರ್ಕ್ ಆರ್ಡರ್ ಕೂಡ ನೀಡಲಾಗಿದೆ. 12 ವರ್ಷಕ್ಕೆ ಗುತ್ತಿಗೆ ಆಧಾರದಲ್ಲಿ 320 ಬಸ್ಸುಗಳನ್ನು ತೆಗೆದುಕೊಳ್ಳಲಾಗುತ್ತದೆ. ಒಂದು ಕಿಮೀ 65 ರೂ.ನಿಂದ 80 ಪೈಸೆಯಂತೆ ಬಿಎಂಟಿಸಿ ಈ ಬಸ್‌ಗಳಿಗೆ ಹಣ ನೀಡಲಿದೆ ಎಂದು ಬಿಎಂಟಿಸಿಯ ಚೀಫ್ ಟ್ರಾಫಿಕ್ ಮ್ಯಾನೇಜರ್ ಪ್ರಭಾಕರ್ ರೆಡ್ಡಿ ತಿಳಿಸಿದ್ದಾರೆ.

ಪುಟ 2

### ವಿಶೇಷ ಚೇತನರ ಅನುದಾನಕ್ಕೂ ಸರ್ಕಾರ ಕೊಕ್ಕೆ
## ಶೇ.80 ಅನುದಾನ ಕಡಿತ ಆರೋಪ!

**ಬೆಂಗಳೂರು:** ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹಣ ನೀಡೋ ಬರದಲ್ಲಿ ಉಳಿದ ಎಲ್ಲ ಅಭಿವೃದ್ಧಿ ಕಾರ್ಯಗಳ ಬಗ್ಗೆ ಗಮನವೇ ಹರಿಸುತ್ತಿಲ್ಲ ಅನ್ನೋ ಆರೋಪಗಳು ಮತ್ತೊಮ್ಮೆ ಕೇಳಿಬಂದಿದೆ.

ಈಗ ಸರ್ಕಾರ ಅಂಗವಿಕಲರ ಅನುದಾನಕ್ಕೂ ಕೊಕ್ಕೆ ಹಾಕಿದ್ದು ಕಳೆದ ವರ್ಷಕ್ಕಿಂತ 80% ರಷ್ಟು ಅನುದಾನ ಕಡಿತ ಮಾಡಿದೆ ಅಂತಾ ವಿಕಲಚೇತರ ಫೆಡರೇಷನ್ ಧ್ವನಿ ಎತ್ತಿದೆ. ನಮ್ಮ ಯೋಜನೆಗಳಿಗೆ ನೀಡಬೇಕಾದ ಅನುದಾನವನ್ನ ನೀಡಿ ಎಂದು ಮನವಿ ಮಾಡಿದ್ದಾರೆ. ಸರ್ಕಾರ ನಮ್ಮ ಮನವಿಯನ್ನ ಪೂರೈಸದೆ ಹೋದ್ರೆ, ಇದೇ ಡಿಸೆಂಬರ್ 2ರಿಂದ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ಸಹ ನೀಡಿದ್ದಾರೆ. ಈ ಕುರಿತು ರಾಷ್ಟ್ರೀಯ ವಿಕಲಚೇತನರ ಫೆಡರೇಷನ್ ಕರ್ನಾಟಕ ಶಾಖೆಯ ವ್ಯವಸ್ಥಾಪಕ ಹೇಮಂತ್ ಮಾಧ್ಯಮದೊಂದಿಗೆ ಮಾತನಾಡಿದ್ದಾರೆ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನ ನೀಡುವ ಬರದಲ್ಲಿ ಅಂಗವಿಕಲರಿಗೆ ಅನ್ಯಾಯ ಮಾಡ್ತಿದೆ. ರಾಜ್ಯದಲ್ಲಿರೋ ಅಂಗವಿಕಲರು ಸೇವಾಸಿಂಧು ಮೂಲಕ ಅನುದಾನಕ್ಕೆ ಅರ್ಜಿ ಹಾಕಿದ್ರೂ ಅನುಕೂಲವಾಗ್ತಿಲ್ಲ, ವ್ಹೀಲ್ ಚೇರ್ ಆಗಿರಬಹುದು, ಲ್ಯಾಪ್‌ಟ್ಯಾಪ್ ಆಗಿರಬಹುದು ಹೀಗೆ ಎಲ್ಲ ಸ್ಕೀಮ್‌ಗೂ ತೊಡಕಾಗಿದೆ.




ಪುಟ 2

### ಎನ್‌ಕೌಂಟರ್‌ಗೆ ಕಾಫಿನಾಡ ಕಾಡು ಬಿಟ್ರಾ ನಕ್ಸಲರು?
## ನಕ್ಸಲರು ಕೇರಳಕ್ಕೆ ಎಸ್ಕೇಪ್?

**ಚಿಕ್ಕಮಗಳೂರು:** ಕೇರಳದಲ್ಲಿ ಉಳಿಯೋದು ಕಷ್ಟ ಎಂದು ಕಾಫಿನಾಡಿಗೆ ಬಂದಿದ್ದ ಕೆಂಪು ಉಗ್ರರು ಒಂದೇ ಒಂದು ಎನ್ ಕೌಂಟರ್‌ಗೆ ಮತ್ತೆ ಕೇರಳ ಸೇರಿಕೊಂಡಿರುವ ಅನುಮಾನ ಮೂಡಿದೆ.



ಕಾಫಿನಾಡು-ಕೃಷ್ಣನಗರಿಯಲ್ಲಿ ನಕ್ಸಲರ ಹೆಜ್ಜೆಗುರುತು ಸಿಕ್ಕ 15-20 ದಿನದಲ್ಲೇ ನಕ್ಸಲ್ ನಾಯಕ ವಿಕ್ರಂಗೌಡ ಎಎನ್‌ಎಫ್ ಗುಂಡಿಗೆ ಕಾಡಲ್ಲೇ ಹತನಾದ. ಕಾಫಿನಾಡ ಕಾಡಲ್ಲಿ ಕಣ್ಮರೆಯಾದ ಮುಂಡಗಾರು ಲತಾ ಆಂಡ್ ಟೀಂ ಪತ್ತೆಯೇ ಇಲ್ಲ. ಇತ್ತ ಕಾಡಲ್ಲಿ ಓಡಿಹೋದ ವಿಕ್ರಂಗೌಡನ ಜೊತೆಗಿದ್ದ ಸಹಚರರ ಸುಳಿವೂ ಇಲ್ಲ. ಹಾಗಾದರೇ ನಕ್ಸಲರು ಜೀವಭಯದಲ್ಲಿ ಮತ್ತೆ ಕೇರಳ ಸೇರಿಕೊಂಡರಾ ಎಂಬ ಅನುಮಾನ ಬಲವಾಗಿದೆ. ಕಾಫಿನಾಡಲ್ಲಿ ಕಳೆದೊಂದು ದಶಕದಿಂದ ನಕ್ಸಲರ ಹೆಜ್ಜೆ ಗುರುತುಗಳೇ ಇರಲಿಲ್ಲ. ದಶಕಗಳ ಬಳಿಕ ಕೆಂಪು ಉಗ್ರರು ಕಾಫಿನಾಡು ಕಾಡಲ್ಲಿ ಓಡಾಡಿದ್ದರು. ಎರಡೇ ತಿಂಗಳಿಗೆ ಮತ್ತೆ ಇಲ್ಲದಂತಾಗಿರೋದು ನಿಜಕ್ಕೂ ಆಶ್ಚರ್ಯ. ಆದರೆ



ದಶಕದಿಂದ ನಕ್ಸಲರು ಇಲ್ಲದ ಕಾರಣ ಕಾರ್ಕಳದ ಎಎನ್‌ಎಫ್ ಕ್ಯಾಂಪನ್ನು ಮಡಿಕೇರಿಗೆ ವರ್ಗಾಯಿಸೋ ಮಾತುಗಳು ಕೇಳಿ ಬಂದಿದ್ದವು. ಆದರೆ ಹಿಟ್‌ಲಿಸ್ಟ್ ನಕ್ಸಲರು ಸಿಗದ ಕಾರಣ ಆ ಪ್ರಸ್ತಾವನೆ ಹಾಗೇ ಉಳಿದಿತ್ತು. ಒಂದೂವರೆ ತಿಂಗಳ ಹಿಂದೆ ಕೇರಳದಿಂದ ಬಂದ ನಕ್ಸಲರು 2 ತಂಡ ಮಾಡಿಕೊಂಡು ಉಡುಪಿ-ಚಿಕ್ಕಮಗಳೂರು ಸೇರಿದ್ದರು.

ಪುಟ 2

### ಹೆಂಡ್ತಿಯ ರೀಲ್ಸ್ ಹುಚ್ಚಾಟದಿಂದ ಗಂಡನಿಗೆ ಶುರುವಾಗಿತ್ತು ಅನುಮಾನ!
## ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಕಿರಾತಕ!

**ಬೆಂಗಳೂರು:** ಇತ್ತೀಚೆಗೆ ರೀಲ್ಸ್ ಹುಚ್ಚಿನಿಂದ ಎಷ್ಟೋ ಸಂಸಾರಗಳು ಹಾಳಾಗುತ್ತಿರುವುದರನ್ನು ಕೇಳಿರುತ್ತೀರಿ, ಅದೇ ರೀತಿ ಇಲ್ಲೊಂದು ಜೋಡಿ ಮಧ್ಯೆ ರೀಲ್ಸ್ ಪ್ರೀತಿ ಬಿರುಗಾಳಿ ಎಬ್ಬಿಸಿದೆ. ಹೌದು, 2 ವರ್ಷದ ಹಿಂದೆ ಮದ್ವೆ ಆಗಿದ್ದ ಜೋಡಿ ಮಧ್ಯೆ ಇದೀಗ ರೀಲ್ಸ್ ನಿಂದ ಅನಾಹುತವೇ ಸಂಭವಿಸಿದೆ. ಹೆಂಡ್ತಿ ರೀಲ್ಸ್ ಹುಚ್ಚಿನಿಂದಾಗಿ, ಗಂಡನಿಗೆ ಪತ್ನಿಯ ಮೇಲೆ ಸಂಶಯ ಶುರುವಾಗಿದೆ. ಇದರಿಂದ ಇಬ್ಬರ ನಡಿವೆ ವಿರಸ, ಜಗಳಗಳು ಶುರುವಾಗಿವೆ. ಕೊನೆಗೆ ಈ ವ್ಯಕ್ತಿ ಹೆಂಡ್ತಿಯ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಈ ಭಯಾನಕ ಘಟನೆ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ನಡೆದಿದೆ.

ಎರಡು ವರ್ಷಗಳ ಹಿಂದೆ ಪ್ರೀತಿಸಿ ಮದುವೆ: ಪ್ರಭು ಹಾಗೂ ಪ್ರಿಯಾಂಕಾ ಎರಡು ವರ್ಷಗಳ ಹಿಂದೆ ಪ್ರೀತಿಸಿ ಮದುವೆಯಾಗಿದ್ದರು. ಆತ ಬೆಳಗಾವಿಯವನಾಗಿದ್ದರೆ, ಈಕೆ ಬೆಂಗಳೂರಿನವಳು.. ಬೆಂಗಳೂರಲ್ಲೇ ಇಬ್ಬರ ಮಧ್ಯೆ ಪ್ರೇಮಾಂಕುರವಾಗಿತ್ತು.. ಹೀಗಾಗಿ ಎರಡು ವರ್ಷದ ಹಿಂದೆ ಇಬ್ರೂ ಸಹ ಮದ್ವೆಯನ್ನೂ ಆಗಿದ್ರು.. ನನಗೆ ನೀನು.. ನಿನಗೆ ನಾನು.. ದೈವ ತಂದ ವರವು ನೀನು ಅಂತಾ ಡ್ಯೂಯಟ್ ಶುರು ಮಾಡಿದ್ರು. ಪತ್ನಿ ಮೇಲೆ ಇಲ್ಲ ಸಲ್ಲದ ಅನುಮಾನ: ಈ ಪ್ರೇಮರಾಗ ಬಹಳ ದಿನ ಉಳಿಯಲೇ ಇಲ್ಲ. ಹೆಂಡ್ತಿಯ ಇನ್‌ಸ್ಟಾಗ್ರಾಂ ಹುಚ್ಚೋ, ಬೇರೆ ಕಾರಣಾನೋ ಗೊತ್ತಿಲ್ಲ. ಆದ್ರೆ, ಪ್ರಭುಗೆ ಪತ್ನಿ ಮೇಲೆ ಇಲ್ಲ ಸಲ್ಲದ ಅನುಮಾನ. ಹೆಂಡ್ತಿ ಕುಂತ್ರೂ ನಿಂತ್ರೂ ಅನುಮಾನ ಪಡ್ತಿದ್ದ.. ಇದೇ ವಿಷ್ಯವಾಗಿ ಗಂಡ ಹೆಂಡ್ತಿ ಮಧ್ಯೆ ನಿತ್ಯ ಗಲಾಟೆ ನಡೀತಾನೇ ಇತ್ತು.



ಎರಡು ವರ್ಷ ಸಂಸಾರ ಮಾಡಿದವ್ರ ಮಧ್ಯೆ ಅನುಮಾನದ ಬಿರುಗಾಳಿ ಎದ್ದಿತ್ತು. ಈ ಅನುಮಾನಕ್ಕೆ ಕಾರಣವೆಂದರೆ ಪ್ರಿಯಾಂಕಾ ಹೋದಲ್ಲೆಲ್ಲಾ ವಿಡಿಯೋ ಮಾಡೋದು, ಅದಕ್ಕೊಂದಿಷ್ಟು ಹಾಡು ಸಿಂಕ್ ಮಾಡ್ಕೊಂಡು ಇನ್‌ಸ್ಟಾಗ್ರಾಂನಲ್ಲಿ ಅಪ್‌ಲೋಡ್ ಮಾಡೋದು. ಬಸ್‌ಸ್ಟಾಂಡ್‌ನಲ್ಲೂ ವಿಡಿಯೋ.. ಮೆಟ್ರೋ ಸ್ಟೇಷನ್‌ನಲ್ಲೂ ವಿಡಿಯೋ.. ಮನೆಯ ಯಾವ ಮೂಲೆಯನ್ನೂ ಬಿಟ್ಟಿರ್ಲಿಲ್ಲ ಅನಿಸುತ್ತೆ. ಹೋದಲ್ಲೆಲ್ಲಾ ವಿಡಿಯೋ ಮಾಡ್ಕೊಂಡು, ಇನ್‌ಸ್ಟಾಗ್ರಾಂನಲ್ಲಿ ಮಿರಮಿರ ಅಂತಾ ಮಿಂಚ್ತಿದ್ದಳು. ಇದಕ್ಕೆ ಒಂದಿಷ್ಟು ಜನ ಲೈಕ್ಸು ಕಮೆಂಟ್ಸು ಬೇರೆ ಮಾಡ್ತಿದ್ರು. ಯಾವಾಗ ಹೆಂಡ್ತಿ ವಿಡಿಯೋ ಮಾಡೋದ್ರಲ್ಲಿ ಬ್ಯುಸಿಯಾದ್ಲೋ ಗಂಡ ಅನಿಸಿಕೊಂಡವ್ನಿಗೆ ಪಿತ್ತ ನೆತ್ತಿಗೇರಿದೆ. ಯಾಕೋ ಹೆಂಡ್ತಿ ಹಾದಿ ತಪ್ಪಿದ್ದಾಳಲ್ಲಾ ಅಂತಾ ಅನುಮಾನ ಪಡೋದಕ್ಕೆ ಶುರು ಮಾಡಿದ್ದಾನೆ.

ಪುಟ 2

# ಕನ್ನಡ ಭವನಕ್ಕೆ ನಿವೇಶನ ನೀಡುವಂತೆ ಮನವಿ ಸಲ್ಲಿಕೆ

**ರಾಮನಗರ:** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತುನ ಕನ್ನಡ ಭವನಕ್ಕೆ ನಿವೇಶನ ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸತೀಶ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಸ್ವಂತ ಕಟ್ಟಡಕ್ಕೆ ನಿರ್ಮಾಣಕ್ಕೆ ಹಲವು ದಿನಗಳಿಂದ ನಿವೇಶನಕ್ಕಾಗಿ ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸುತ್ತಾ ಬಂದಿದ್ದು, ಆದರೆ ಇದುವರವಿಗೂ ಕಸಾಪಕ್ಕೆ ನಿವೇಶನ ನೀಡಿಲ್ಲ. ಈ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಗಮನಹರಿಸಿ ನಿವೇಶನ ಕೊಡಿಸುವಲ್ಲಿ ಕ್ರಮವಹಿಸಬೇಕು ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಬಿ.ಟಿ.ನಾಗೇಶ್ ಮತ್ತು ರಾಮನಗರ ತಾಲ್ಲೂಕು ಅಧ್ಯಕ್ಷ ಬಿ.ಟಿ.ದಿನೇಶ್, ಡಾ.ಬೈರೇಗೌಡ ಹಾಗೂ ಪದಾಧಿಕಾರಿಗಳು ಮನವಿ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸತೀಶ್ ಮನವಿ ಸ್ವೀಕರಿಸಿ ಮಾತನಾಡಿ, ನಮ್ಮ ಇಲಾಖೆಯಿಂದ ಕಸಾಪ ಮನವಿ ಮೇರೆಗೆ ವರದಿ ತಯಾರಿಸಿ, ನಿವೇಶನ ನೀಡುವಂತೆ ಜಿಲ್ಲಾಡಳಿತದ ಗಮನಕ್ಕೆ ತರಲಾಗುತ್ತದೆ ಎಂದರು. ಈ ವೇಳೆ ರಾಮನಗರ ತಹಶೀಲ್ದಾರ್ ತೇಜಶ್ವೇನಿ ಮಾತನಾಡಿ. ನಿವೇಶನ ನೀಡುವ ಅಧಿಕಾರ ನಮ್ಮ ತಾಲ್ಲೂಕು ಆಡಳಿತಕ್ಕೆ ಇಲ್ಲ. ನಗರ ವ್ಯಾಪ್ತಿಯಲ್ಲಿ ಸರಕಾರಿ ಜಾಗ ಇದ್ದರೆ ಗುರುತಿಸಿ, ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ವರದಿ ನೀಡಿಲಾಗುತ್ತದೆ. ಅವರಿಂದ ನೀವೇಶನಕ್ಕೆ ಮಂಜೂರು ಪಡೆದುಕೊಳ್ಳಬೇಕು ಎಂದರು.



ಸಾಹಿತಿ ಡಾ,ಬೈರೇಗೌಡ ಮಾತನಾಡಿ, ಜಿಲ್ಲೆಯ ಐದು ತಾಲ್ಲೂಕುಗಳಲ್ಲಿಯೂ ಸ್ವಂತ ಕಟ್ಟಡ ಅಥವಾ ಕಚೇರಿಗಾಗಿ ಒಂದು ಕೊಠಡಿಯೂ ಇಲ್ಲದಿರುವುದು ಶೋಚನೀಯ. ನಾಲ್ವಡಿ ಕೃಷ್ಣರಾಜೇಂದ್ರ ಒಡೆಯರ್ ಅವರ ಕನಸಿನ ಕೂಸು ಕನ್ನಡ ಸಾಹಿತ್ಯ ಪರಿಷತ್ತು ಆರಂಭವಾಗಿ ಶತಮಾನ ಕಳೆದಿದೆ. ಆರುಕೋಟಿ ಕನ್ನಡಿಗರ ಸಾರ್ವಭೌಮ ಸಂಸ್ಥೆ ನಾಡು ನುಡಿಯ ಏಳಿಗೆಗಾಗಿ ಸದಾ ದುಡಿಯುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿಗೆ ತನ್ನದೇ ಆದ ಸಾಂಸ್ಕೃತಿಕ ಸಮುಚ್ಚಯವಿರಲಿ ಎಂದರು.

ರಾಮನಗರ ಜಿಲ್ಲೆಯಾಗಿ ಹದಿನಾರು ವರ್ಷಗಳು ಕಳೆದಿವೆ. ಕರ್ನಾಟಕದಲ್ಲಿಯೇ ಹೆಚ್ಚು ಕಲೆಗಳು, ಕಲಾವಿದರು, ಕಲಾವೈಶಿಷ್ಟ್ಯತೆ, ವಿಭಿನ್ನ ಸಂಸ್ಕೃತಿಗಳನ್ನು ಮೈಗೂಡಿಸಿಕೊಂಡಿರುವ, ವಿಶಿಷ್ಟ ಬೆಟ್ಟಗುಡ್ಡಗಳಿಂದ ಜಗತ್ತಿನ ಗಮನ ಸೆಳೆದಿರುವ ರಾಮನಗರ ಜಿಲ್ಲಾ ಕೇಂದ್ರದಲ್ಲಿ ವ್ಯವಸ್ಥಿತ ಸಾಂಸ್ಕೃತಿಕ ಸಮುಚ್ಚಯವಿಲ್ಲದಿರುವುದು ಎಲ್ಲರೂ ತಲೆತಗ್ಗಿಸುವ ವಿಚಾರವೇ ಸರಿ. ಸಾಂಸ್ಕೃತಿಕ ಸಮುಚ್ಚಯವಿರಲಿ, ಇಲ್ಲಿಯ ತನಕ ಒಂದು ಬಾಡಿಗೆ ಕೊಠಡಿಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿಯಿರುವುದನ್ನು ತಿಳಿಸಲು ವಿಷಾದವೆನಿಸುತ್ತದೆ.

ಕಸಾಪ ಜಿಲ್ಲಾಧ್ಯಕ್ಷ ಬಿ.ಟಿ.ನಾಗೇಶ್ ಮಾತನಾಡಿ, ಕನ್ನಡ ಪರವಿವಿಧ ಸಂಘ ಸಂಸ್ಥೆಗಳು, ಕನ್ನಡಪರ ಚಟುವಟಿಕೆಗಳಿಗೆ, ಸಾಂಸ್ಕೃತಿಕ ವೈವಿಧ್ಯತೆಗಳನ್ನು ಅಭಿವ್ಯಕ್ತಿಸಲು ಅಗತ್ಯವಾದ ಒಂದು ವೇದಿಕೆ ಬೇಡವೇ? ಕನ್ನಡ ಪರವಾದ ಯಾವುದೇ ಉತ್ಸವಗಳು ನಡೆಯಬೇಕಾದರೂ ಕನ್ನಡ ಸಾಹಿತ್ಯ ಪರಿಷತ್ತು ಮುಂಚೂಣಿಯಲ್ಲಿ ನಿಲ್ಲುತ್ತದೆ. ಇಂತಹ ಸ್ವಾಯುತ್ತ ಸಂಸ್ಥೆಗೆ ಅಗತ್ಯವಾದ ಒಂದೆರಡು ಎಕರೆ ಭೂಪ್ರದೇಶದಲ್ಲಿ ಸಾಂಸ್ಕೃತಿಕ ಸಮುಚ್ಚಯದ ಅಗತ್ಯವೆದೆಯೆಂದು ಯಾರಿಗೂ ಅನಿಸುತ್ತಿಲ್ಲವೇ? ಈಗಲಾದರೂ ಈ ದಿಸೆಯಲ್ಲಿ ಕಾರ್ಯಮಗ್ನರಾಗಿ ಕನ್ನಡ ಸಾಹಿತ್ಯ ಪರಿಷತ್ತಿಗೆ ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಸಾಂಸ್ಕೃತಿಕ ಸಮುಚ್ಚಯಕ್ಕೆ ಅಗತ್ಯ ಭೂಮಿ ಮತ್ತು ಕಟ್ಟಡಗಳನ್ನು ನಿರ್ಮಿಸಿಕೊಡುವ ನಿಟ್ಟಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಿಲ್ಲಾಡಳಿತ ಕಾರ್ಯೋನ್ಮುಖರಾಗಬೇಕೆಂದು ಈ ಮೂಲಕ ಮನವಿಯಲ್ಲಿ ಕೋರಲಾಗಿದೆ. ಈ ವೇಳೆ ರಾಮನಗರ ತಾ.ಪಂ. ಇಒ ಪ್ರದೀಪ್, ಮಾಗಡಿ ತಾಲ್ಲೂಕಿನ ಇಒ ಡಿ.ಜೈಪಾಲ್,ಕಸಾಪ ಪದಾಧಿಕಾರಿ ಸಮದ್, ಯುವ ಕರ್ನಾಟಕ ಸಂಘಟನೆಯ ಸಿ.ಕುಮಾರ್, ರಾಮಣ್ಣ, ತುಂಬೇನಹಳ್ಳಿ ಪುನೀತ್ ಇನ್ನೂ ಮುಂತಾದವರು ಹಾಜರಿದ್ದರು.

# ಗುರು ಬೋಧಾಮೃತದಿಂದ ಸುಖ ಶಾಂತಿ ಪ್ರಾಪ್ತಿ

**ಕಲಘಟಗಿ:** ಯೋಗಿಗೆ ಯೋಗದ ಚಿಂತೆ ಯೋಧನಿಗೆ ಕಾದಾಡುವ ಚಿಂತೆ ತಂದೆಗೆ ಮಕ್ಕಳ ಚಿಂತೆ ರೈತರಿಗೆ ಬೆಳೆಯ ಚಿಂತೆ ಇರುವಂತೆ ಶ್ರೀ ಗುರುವಿಗೆ ಶಿಷ್ಯನ ಉದ್ಧಾರದ ಚಿಂತೆ ಇರುತ್ತದೆ. ಶ್ರೀ ಗುರುವಿನ ಬೋಧಾಮೃತದಿಂದ ಜೀವನದಲ್ಲಿ ಸುಖ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ದಾಸ್ತಿಕೊಪ್ಪ ಕಲಘಟಗಿ ನಗರದ ಶ್ರೀಮದ್ರಂಭಾಪುರಿ ಶಾಖಾ ಹನ್ನೆರಡುಮಠದಲ್ಲಿ ಲಿಂ. ಶ್ರೀ ಮಡಿವಾಳ ಶಿವಾಚಾರ್ಯರ 34ನೇ ಪುಣ್ಯಸ್ಮರಣೋತ್ಸವ-ನೂತನ ಶ್ರೀಗಳವರ ಗುರು ಪಟ್ಟಾಧಿಕಾರ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಕಲ ಜೀವಾತ್ಮರಿಗೂ ಲೇಸನ್ನೇ ಬಯಸಿದ ವೀರಶೈವ ಧರ್ಮ ಅತ್ಯಂತ ಪ್ರಾಚೀನವಾದುದು. ಬೆಳೆದುಕೊಂಡು ಬಂದ ಪರಂಪರೆ ಉತ್ಕೃಷ್ಟವಾದುದು. ಬದುಕಿ ಬಾಳುವ ಜನಸಮುದಾಯಕ್ಕೆ ಸಂಸ್ಕಾರ ಸದ್ವಿಚಾರಗಳ ಅವಶ್ಯಕತೆ ಬಹಳಷ್ಟಿದೆ. ಆಧುನಿಕತೆಗೆ ಮಾರು ಹೋಗಿ ಆದರ್ಶ ಮೌಲ್ಯಗಳನ್ನು ಮನುಷ್ಯ ಮರೆಯುತ್ತಿದ್ದಾನೆ. ಹೊನ್ನು ಹಣ ಆಸ್ತಿ ಯಾವುದೂ ಸ್ಥಿರವಲ್ಲ. ನಾವು ಮಾಡಿದ ಸತ್ಕಾರ್ಯಗಳು ಶಾಶ್ವತ. ಹಣ ಗಳಿಕೆಯತ್ತ ಮನುಷ್ಯನ ಗಮನ ಇದೆಯೇ ಹೊರತು ಗುಣ ಗಳಿಕೆಯತ್ತ ಇಲ್ಲ. ಮನೋವಿಲಾಸಕ್ಕೆ ಕೊಟ್ಟಷ್ಟು ಸಮಯ ಮನಸ್ಸಿನ ವಿಕಾಸಕ್ಕೆ ದಾರಿ ಹುಡುಕುತ್ತಿಲ್ಲ. ಹೀಗಾಗಿ ಮಾನವ ಜೀವನ ಅತೃಪ್ತಿಯಿಂದ ಕೂಡಿದೆ. ಜೀವನದಲ್ಲಿ ಗುರಿ ಮತ್ತು ಗುರುವನ್ನು ಆಶ್ರಯಿಸಿ ಜೀವನ ಸಾರ್ಥಕ ಪಡಿಸಿಕೊಳ್ಳಬೇಕಾಗಿದೆ. ಲಿಂ. ಶ್ರೀ ಮಡಿವಾಳ ಶಿವಾಚಾರ್ಯ ಸ್ವಾಮಿಗಳು ಆದರ್ಶ ಗುರು ಪರಂಪರೆಗೆ ಶ್ರಮಿಸಿದರು. ಧರ್ಮಮುಖಿಯಾಗಿ ಸಮಾಜಮುಖಿಯಾಗಿ ನಿರ್ವಹಿಸಿದ ಶ್ರೇಯಸ್ಸು ಅವರದಾಗಿತ್ತು. ಇಂದಿನ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ತಮ್ಮ ಉತ್ತರಾಧಿಕಾರಿಯನ್ನು ಗುರುತಿಸಿ ಇಂದು ಗುರು ಪಟ್ಟಾಧಿಕಾರ ನೆರವೇರಿಸಿದ್ದು ಸಂತೋಷದ ಸಂಗತಿ. ಪಟ್ಟಾಭಿಷಿಕ್ತರಾದ ನೂತನ ಅಭಿನವ ಮಡಿವಾಳ ಶಿವಾಚಾರ್ಯರು ಶ್ರೀ ಮಠದ ಅಭಿವೃದ್ಧಿ ಮತ್ತು ಭಕ್ತರಿಗೆ ಅಮೂಲ್ಯ ಮಾರ್ಗದರ್ಶನ ನೀಡಲೆಂದು ಆಶಿಸಿ ರೇಶ್ಮೆ ಮಡಿ ಸ್ಮರಣಿಕೆ ಫಲವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಪಂಚಮುದ್ರಾ ಸಮೇತ ಆಶೀರ್ವದಿಸಿದರು. ಇದೇ ಸಂದರ್ಭದಲ್ಲಿ ಲಿಂ. ಮಡಿವಾಳ ಶಿವಾಚಾರ್ಯರ 34ನೇ ವರ್ಷದ ಪುಣ್ಯಾರಾಧನೆ ಹಾಗೂ ಇಂದಿನ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳವರ 71ನೇ ವರ್ಷದ ಜನ್ಮ ವರ್ಧಂತಿಯನ್ನು ಆಚರಿಸಲಾಯಿತು. ಪಟ್ಟಾಭಿಷಿಕ್ತರಾದ ನೂತನ ಅಭಿನವ ಮಡಿವಾಳ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಧರ್ಮ ಪರಂಪರೆ?ಗುರುಸ್ಥಾನದ ಹಿರಿಮೆ ಹಾಗೂ ಸಕಲ ಧರ್ಮ ಬಾಂಧವರ ಏಳಿಗೆಗಾಗಿ ಸದಾ ಶ್ರಮಿಸುತ್ತೇವೆ. ಶ್ರೀ ರೇವಣಸಿದ್ಧ ಶಿವಾಚಾರ್ಯರಿಗೆ ಕೊಟ್ಟ ಸಹಕಾರ ಸೇವಾ ಮನೋಭಾವ ನಮ್ಮ ಕಾಲದಲ್ಲಿ ಇರಬೇಕೆಂದು ಬಯಸಿದರು. ಧರ್ಮ ಸಮಾರಂಭವನ್ನು ಅ.ಭಾ. ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಉದ್ಘಾಟಿಸಿ ಮಾತನಾಡಿದರು.

# ನಾಗರಿಕರ ರಕ್ಷಣೆಗಾಗಿ ಸಂವಿಧಾನ ರಚನೆ

**ಚಾಮರಾಜನಗರ:** ದೇಶದ ನಾಗರಿಕರ ರಕ್ಷಣೆಗಾಗಿ ಕಾನೂನುಗಳನ್ನು ರೂಪಿಸಿ ಸಂವಿಧಾನದಲ್ಲಿ ಅಳವಡಿಸಲಾಗಿದ್ದು, ಸಂವಿಧಾನದ ಮಹತ್ವವನ್ನು ಪ್ರತಿಯೊಬ್ಬರು ಅರಿಯಬೇಕು ಎಂದು ಪ್ರಧಾನ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್. ಭಾರತಿ ಅವರು ತಿಳಿಸಿದರು.



ನಗರದ ಚಾಮರಾಜನಗರ ವಿಶ್ವವಿದ್ಯಾನಿಲಯದ ನಿಜಗುಣ ಸಭಾಂಗಣದಲ್ಲಿಂದು ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯದ ಸಾಮಾಜಿಕ ಒಳಗೊಳ್ಳುವಿಕೆ ಅಧ್ಯಯನ ಕೇಂದ್ರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಭಾರತ ಸಂವಿಧಾನ ಸಮರ್ಪಣಾ ದಿನಾಚರಣೆ-75' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯದಿಂದಲೇ ಅನುಭವಿಸಿದ್ದ ಕಷ್ಟಜೀವನ ಮೆಟ್ಟಿನಿಂತ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ದೇಶದ ಎಲ್ಲಾ ನಾಗರಿಕರಿಗೂ ಸಮಾನ ಅವಕಾಶ ಕಲ್ಪಿಸಲು ಆದ್ಯತೆ ನೀಡಿದರು. ಮಹಾರಾಷ್ಟ್ರದಲ್ಲಿ ಸಾಮಾಜಿಕ ಬಹಿಷ್ಕಾರ ನಿಷೇಧ ಕಾನೂನು ಇದೆ. ಸಾಮಾಜಿಕ ಬಹಿಷ್ಕಾರ ಪಿಡುಗು ನಿವಾರಣೆಗೆ ಅದೇ ಮಾದರಿಯ ಪರಿಣಾಮಕಾರಿ ಕಾನೂನು ಇಲ್ಲಿಯೂ ಅಗತ್ಯವಿದೆ ಎಂದು ಜಿಲ್ಲಾ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಅಭಿಪ್ರಾಯಪಟ್ಟರು.

ಮುಖ್ಯಭಾಷಣ ಮಾಡಿದ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ಹೆಚ್ಚುವರಿ ಅಡ್ವೋಕೇಟ್ ಜನರಲ್ ಎಸ್ .ಎ. ಅಹಮದ್ ಅವರು ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವದ ಜೊತೆಗೆ ಸಹೋದರತೆ ಸಂವಿಧಾನದ ಆಶಯವಾಗಿದೆ. ದೇಶದಲ್ಲಿರುವ ನೂರಾರು ಭಾಷೆ, ಧರ್ಮ, ವಿಭಿನ್ನ ಸಂಸ್ಕೃತಿಗಳನ್ನು ಸಹೋದರತ್ವದ ಆಧಾರದಡಿ ಬೆಸೆಯುವ ಕೆಲಸವನ್ನು ಸಂವಿಧಾನ ಮಾಡುತ್ತಿದೆ. ದೇಶದ 140 ಕೋಟಿ ಜನರಿಗೂ ಸಮಾನ ಅವಕಾಶಗಳನ್ನು ಒದಗಿಸಲು ಭದ್ರ ಅಡಿಪಾಯವಾಗಿ ಸಂವಿಧಾನ ನಿಂತಿದೆ. ಸಂವಿಧಾನ ಸಮರ್ಪಣೆಯ 75 ವರ್ಷಗಳ ಸಂಕ್ರಮಣ ಕಾಲದಲ್ಲಿರುವ ನಾವೆಲ್ಲರೂ ಸಂವಿಧಾನದ ಮೌಲ್ಯಗಳನ್ನು ಓದಬೇಕು. ಜವಾಬ್ದಾರಿಯುತ ನಾಗರಿಕರಾಗಿ ಉತ್ತಮ ಸಮಾಜ ಕಟ್ಟಬೇಕು ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ತಮ್ಮ ಪ್ರಖರ ಬೌದ್ಧಿಕ ಸಾಮರ್ಥ್ಯ, ಇಚ್ಛಾಶಕ್ತಿ, ಹಾಗೂ ನಿರಂತರ ಅಧ್ಯಯನ ಶೀಲತೆಯಿಂದ ಜಗತ್ತಿನ ಶ್ರೇಷ್ಠ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ್ದಾರೆ. ಸಂವಿಧಾನ ಜಾರಿಯಾಗಿ ಜನರ ಬದುಕಿಗೆ ಅರ್ಥ ಸಿಕ್ಕಿದೆ. ನಮ್ಮೆಲ್ಲರ ಆಶಯಗಳಿಗೆ ಅಕ್ಷರರೂಪ ದೊರೆತಿದೆ. ಸಾಮಾಜಿಕ, ಆರ್ಥಿಕ, ರಾಜಕೀಯವಾಗಿ ದೇಶ ರಚನಾತ್ಮಕ ಬೆಳವಣಿಗೆ ಹೊಂದಲು ಸಂವಿಧಾನ ನೇರ ಕಾರಣವಾಗಿದೆ ಎಂದು ಅವರು ತಿಳಿಸಿದರು.

ಕಲಾ ವಿಷಯ ಹೊರತುಪಡಿಸಿ ಇನ್ನುಳಿದ ವೈದ್ಯಕೀಯ, ಎಂಜಿನಿಯರಿಂಗ್ ಹಾಗೂ ವಾಣಿಜ್ಯ ವಿದ್ಯಾರ್ಥಿಗಳು ದೇಶದ ಇತಿಹಾಸ, ಸಂವಿಧಾನದ ಬಗ್ಗೆ ಹೆಚ್ಚಿನ ಅರಿವು ಹೊಂದಬೇಕು. ಇಂದಿನ ವಿದ್ಯಾರ್ಥಿಗಳು, ಯುವಕರು ಮೊಬೈಲ್ ಸಂಸ್ಕೃತಿಗೆ ಮಾರುಹೋಗಬಾರದು. ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸಾಂವಿಧಾನಿಕ ಗ್ರಂಥಾಲಯ ರಚನೆಯಾಗಬೇಕು ಎಂದು ಎಸ್.ಎ. ಅಹಮದ್ ಅವರು ಹೇಳಿದರು.

ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಮಾತನಾಡಿ ಸ್ವಾತಂತ್ರ್ಯ ನಂತರ ಪ್ರಬುದ್ಧ ದೇಶ ಕಟ್ಟಲು ಸಂವಿಧಾನ ಅಗತ್ಯವಾಗಿದ್ದ ಸಮಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಬೃಹತ್, ಹಾಗೂ ಲಿಖಿತ ಸಂವಿಧಾನವನ್ನು ನಮಗೆ ನೀಡಿದ್ದಾರೆ. ಪ್ರಪಂಚದ ಯಾವುದೇ ದೇಶದಲ್ಲಿಯೂ ಇಷ್ಟುದೊಡ್ಡ ಸಂವಿಧಾನ ಚಾಲ್ತಿಯಲ್ಲಿಲ್ಲ ಎಂದರೇ ತಪ್ಪಾಗಲಾರದು. ಸಂವಿಧಾನದ ಪ್ರಜಾಸತ್ಯಾತ್ಮಕ ಮೌಲ್ಯ, ಆಶಯಗಳನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ್ ಅವರು ಮಾತನಾಡಿ ಭಾರತದ ಪ್ರಜೆಗಳಾಗಿ ನಾವು ಸಂವಿಧಾನದ ಆಶಯಗಳನ್ನು ಗೌರವಿಸಬೇಕು. ಕಾನೂನುಗಳನ್ನು ಪಾಲಿಸಬೇಕು. ಇಂದಿನ ವಿದ್ಯಾರ್ಥಿಗಳು ಸಂವಿಧಾನದ ಬಗ್ಗೆ ಹೆಚ್ಚು ಹೆಚ್ಚು ವಿಷಯಗಳನ್ನು ತಿಳಿದುಕೊಳ್ಳಬೇಕು. ಆಗಮಾತ್ರ ನಾವೆಲ್ಲರೂ ಜವಾಬ್ದಾರಿಯುವ ನಾಗರಿಕರಾಗಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಚಾಮರಾಜನಗರ ವಿಶ್ವವಿದ್ಯಾನಿಲಯದ ಉಪಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ನಮ್ಮ ಸಂವಿಧಾನ ಇತರೆ ದೇಶಗಳಿಗೂ ಮಾದರಿಯಾಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ವಿದ್ವತ್ತು, ಅಪಾರ ಪರಿಶ್ರಮದಿಂದ ವಿಶ್ವಶ್ರೇಷ್ಠರಾದರು. ಪರಿಶಿಷ್ಟಜಾತಿ ಮತ್ತು ಪಂಗಡ ಸಮುದಾಯಗಳಿಗೆ ಮಾತ್ರ ಕಾನೂನು ರಚಿಸಲಿಲ್ಲ. ದೇಶದ ಎಲ್ಲಾ ವರ್ಗದವರಿಗೂ ಸಮಾನ ಪ್ರಾತಿನಿಧ್ಯ ನೀಡಿದ್ದಾರೆ. ಮಹಾನ್ ಸ್ವಾಭಿಮಾನಿಯಾಗಿದ್ದ ಅಂಬೇಡ್ಕರ್ ಅವರು ಉತ್ತಮ ವಿಚಾರಗಳಲ್ಲಿ ಎಂದಿಗೂ ರಾಜೀಯಾಗುತ್ತಿರಲಿಲ್ಲ. ಅವರ ಅಚಲ ನಿರ್ಧಾರಗಳು ಸಂವಿಧಾನದಲ್ಲಿ ಸಾರ್ವಕಾಲಿಕವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ 'ವಿಕಸಿತ ಭಾರತ ನಿರ್ಮಾಣದಲ್ಲಿ ಸಂವಿಧಾನದ ಪಾತ್ರ' ಕುರಿತು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಭೌತಶಾಸ್ತ್ರ ವಿಭಾಗದ ಮಲ್ಲೇಶ್, ದ್ವಿತೀಯ ಸ್ಥಾನ ಪಡೆದ ಕನ್ನಡ ವಿಭಾಗದ ಅನಿತಾ ಹಾಗೂ ತೃತೀಯ ಸ್ಥಾನ ಪಡೆದ ರಾಜ್ಯಶಾಸ್ತ್ರ ವಿಭಾಗದ ರೋಜಾ ಅವರಿಗೆ ಸ್ಮರಣಿಕೆ, ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

# ಶ್ರೀ ರಂಭಾಪುರಿ ಜಗದ್ಗುರುಗಳ ಪ್ರವಾಸ ವಿವರ

**ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು):** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ 2024ನೇ ಸಾಲಿನ ಡಿಶಂಬರ್ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ.

ದಿನಾಂಕ 2ರಂದು ಹಾಸನ ಜಿಲ್ಲೆ ಅರಸೀಕೆರೆಯಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭ, 3 ಮತ್ತು 4ರಂದು ಹರಪನಹಳ್ಳಿ ತಾಲೂಕ ಚಿಕ್ಕಮೇಗಳಗೇರಿಯಲ್ಲಿ ಶ್ರೀ ಜಗದ್ಗುರು ರೇವಣಸಿದ್ದೇಶ್ವರ-ಶ್ರೀ ಆಂಜನೇಯ ದೇವಸ್ಥಾನ ಕಳಸಾರೋಹಣ ಧರ್ಮ ಸಮಾರಂಭ, 6 ಮತ್ತು 7ರಂದು ವಿಜಯಪುರ ಜಿಲ್ಲೆ ಕನ್ನೂರಿನಲ್ಲಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸುವರು. 12ರಂದು ಬೆಂಗಳೂರಿನಲ್ಲಿ ಇಷ್ಟಲಿಂಗ ಪೂಜೆ ನಡೆಸುವರು. 13ರಂದು ಹರಪನಹಳ್ಳಿಯಲ್ಲಿ ಲಿಂ. ಶ್ರೀ ಚಂದ್ರಮೌಳೀಶ್ವರ ಶಿವಾಚಾರ್ಯರ 10ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ದಿನಾಂಕ 15ರಂದು ಬಾಳೆಹೊನ್ನೂರು ಶ್ರೀ ಪೀಠದಲ್ಲಿ ಶ್ರೀಮದ್ರಂಭಾಪುರಿ



ವೀರರುದ್ರಮುನಿದೇವ ಜಗದ್ಗುರುಗಳ ಜನ್ಮ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 17ರಂದು ಕುಷ್ಟಗಿಯಲ್ಲಿ ಲಿಂ. ಬಸವರಾಜ ಕುಡತಿನಿ ಅವರ 2ನೇ ವರ್ಷದ ಪುಣ್ಯ ಸ್ಮರಣೋತ್ಸವ, 19ರಂದು ಲಿಂಗಸುಗೂರು ತಾಲೂಕ ಸರ್ಜಾಪುರದಲ್ಲಿ ಅನುಷ್ಠಾನ ಮಂಗಲ ಸಮಾರಂಭ, 20ರಂದು ಆಲೂರು ತಾಲೂಕ ಕಾರ್ಜುವಳ್ಳಿಯಲ್ಲಿ ಶ್ರೀ ಸದಾಶಿವ ಶ್ರೀಗಳ ಪಟ್ಟಾಧಿಕಾರದ ವರ್ಧಂತಿ ಸಮಾರಂಭ, 21ರಂದು ದಾವಣಗೆರೆಯಲ್ಲಿ ಇಷ್ಟಲಿಂಗ ಮಹಾಪೂಜಾ, 22ರಂದು ಜಮಖಂಡಿ ತಾಲೂಕ ಮುಧೋಳದಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭ, 24ರಂದು ಬೆಳಗಾವಿ ಜಿಲ್ಲೆ ಮುತ್ನಾಳದಲ್ಲಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 26ರಿಂದ 30ರ ವರೆಗೆ ತುಮಕೂರಿನಲ್ಲಿ ಧನುರ್ಮಾಸ ಇಷ್ಟಲಿಂಗ ಮಹಾಪೂಜಾ, ಧರ್ಮ ಜಾಗೃತಿ ಸಮಾರಂಭ, 30 ಮತ್ತು 31ರಂದು ಬೆಂಗಳೂರಿನಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭ ನಡೆಸುವರು.

ಶ್ರೀ ರಂಭಾಪುರಿ ಜಗದ್ಗುರುಗಳವರ ಧಾರ್ಮಿಕ ಕಾರ್ಯಕ್ರಮಗಳ ಲಾಭವನ್ನು ಸಮಸ್ತ ಜನತೆ ಪಡೆದುಕೊಳ್ಳಬೇಕೆಂದು ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್.ಬಾಳನಗೌಡ್ರ ವಿನಂತಿಸಿದ್ದಾರೆ.

# 3ರಂದು ಚಾಮರಾಜನಗರ ಜಿಲ್ಲಾಮಟ್ಟದ ಯುವಜನೋತ್ಸವ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರ, ಇವರ ಸಂಯುಕ್ತಾಶ್ರಯದಲ್ಲಿ ಚಾಮರಾಜನಗರ ಜಿಲ್ಲಾಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಡಿಸೆಂಬರ್ 3ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಎಂಎಸ್ಐಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಘನ ಉಪಸ್ಥಿತಿ ವಹಿಸುವರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್‌ಪ್ರಸಾದ್, ಎಂ.ಆರ್. ಮಂಜುನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ಮೈಸೂರು ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ ಮತ್ತು ರಾಮಸಮುದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ನಗರಸಭಾ ಸದಸ್ಯರಾದ ಮಹೇಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಸಂದರ್ಶಕ ವೈದ್ಯಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ರಾಜ್ಯ ಪಾನೀಯ ನಿಗಮವು ಸಂದರ್ಶಕ ವೈದ್ಯಾಧಿಕಾರಿ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ರಿಟೈನರ್-ಶಿಪ್ ಆಧಾರದ ಮೇಲೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಹುದ್ದೆಯ ಕಾರ್ಯಾವಧಿಯು ಒಂದು ವರ್ಷ ಆಗಿದ್ದು, ಅಭ್ಯರ್ಥಿಯ ಕಾರ್ಯಕ್ಷಮತೆಯನ್ನು ಅವಲಂಬಿಸಿ ಸೇವೆಯನ್ನು ವಿಸ್ತರಿಸಬಹುದಾಗಿದೆ. ಹುದ್ದೆಯ ಅರ್ಹತಾ ಮಾನದಂಡದ ವಿವರಗಳನ್ನು ನಿಗಮದ ವೆಬ್ ಸೈಟ್ ತಿತಿತಿ.ಇಥಭಿಟ.ಛಿಠಟ ನಿಂದ ಪಡೆಯಬಹುದಾಗಿದೆ. ಅರ್ಹ ಅಭ್ಯರ್ಥಿಗಳು ತಾಂತ್ರಿಕ ಮತ್ತು ವಾಣಿಜ್ಯ ಪ್ರಸ್ತಾವನೆಯನ್ನು ಒಳಗೊಂಡಿರುವ ಅರ್ಜಿಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು (ಹಣಕಾಸು ಮತ್ತು ಆಡಳಿತ) ಇವರಿಗೆ ಮೊಹರು ಮಾಡಿದ ಮುಚ್ಚಿದ ಲಕೋಟೆಯಲ್ಲಿ ಪ್ರತ್ಯೇಕವಾಗಿ ಡಿಸೆಂಬರ್ 4 ರ ಸಂಜೆ 5.30 ರೊಳಗಾಗಿ ಸಲ್ಲಿಸುವಂತೆ ನಿಗಮದ ಹಣಕಾಸು ಮತ್ತು ಆಡಳಿತ ವಿಭಾಗದ ಕಾರ್ಯನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ.ಪುರುಷೋತ್ತಮ ಬಿಳಿಮಲೆ ಅವರು ಡಿಸೆಂಬರ್ 03 ರಂದು ಮಂಡ್ಯ ಮತ್ತು ಡಿಸೆಂಬರ್ 4 ರಿಂದ 8 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಡಿಸೆಂಬರ್ 9 ರಂದು ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

## ವಿವಿಧ ತರಬೇತಿಗಾಗಿ ಆಹ್ವಾನ

**ಚಾಮರಾಜನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿನ ಪರಿಶಿಷ್ಟಜಾತಿ ಉಪಯೋಜನೆಯಡಿ ಪರಿಶಿಷ್ಟ ಜಾತಿಯ ಯುವಕ, ಯುವತಿಯಂದ ಹೊಲಿಗೆ ತರಬೇತಿ, ವೀಡಿಯೋಗ್ರಾಫಿ ಹಾಗೂ ಜಿಮ್ ಫಿಟ್ನೆಸ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ದ್ವಿತೀಯ ಪಿ.ಯು.ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ 18 ರಿಂದ 40 ವರ್ಷದ ಅಭ್ಯರ್ಥಿಗಳಿಗೆ ವೀಡಿಯೋಗ್ರಾಫಿ ತರಬೇತಿ ಶಿಬಿರವನ್ನು ಡಿಸೆಂಬರ್ 6 ರಿಂದ 17 ರವರೆಗೆ 12 ದಿನಗಳ ಕಾಲ ಬೆಂಗಳೂರಿನ ಕುಂಬಳಗೋಡು ತರಬೇತಿ ಕೇಂದ್ರದಲ್ಲಿ ಹಾಗೂ ಜಿಮ್ ಫಿಟ್ನೆಸ್ ತರಬೇತಿಯನ್ನು ಡಿಸೆಂಬರ್ 3 ರಿಂದ 17ರವರೆಗೆ 15 ದಿನಗಳ ಅವಧಿಗೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳು ನಗರದ ಜಿಲ್ಲಾಡಳಿತ ಭವನದಲ್ಲಿರುವ ಮೊದಲನೇ ಮಹಡಿ ಕೊಠಡಿ ಸಂ. 118 ರಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಅರ್ಜಿ ಪಡೆದು ಡಿಸೆಂಬರ್ 2ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ದೂ.ಸಂ 08226-224932 ಅಥವಾ ಮೊ.ಸಂ 9916466659 ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಪಂಗಡದವರಿಂದ ಅರ್ಜಿ

**ಚಾಮರಾಜನಗರ:** ಡ್ರೋನ್ ಆಧಾರಿತ ಫೋಟೊಗ್ರಾಫಿ ಮತ್ತು ವೀಡಿಯೋಗ್ರಾಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಅನುಕೂಲವಾಗುವ ಡ್ರೋನ್ ತರಬೇತಿಗಾಗಿ ಪರಿಶಿಷ್ಟಪಂಗಡದ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಯು ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. 18 ವರ್ಷ ಮೇಲ್ಪಟ್ಟು ಪುರು?ರಿಗೆ 35 ವರ್ಷ ಹಾಗೂ ಮಹಿಳೆಯರಿಗೆ 40 ವರ್ಷ ಮೀರುವಂತಿಲ್ಲ. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ರೂ.ಗಳನ್ನು ಮೀರಬಾರದು. ಅಭ್ಯರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿರಬೇಕು. ಮೂಲನಿವಾಸಿ ಮತ್ತು ಅಲೆಮಾರಿ, ಅರೆ ಅಲೆಮಾರಿ ಮತ್ತು ಸೂಕ್ಷ್ಮ ಅತೀಸೂಕ್ಷ್ಮ ಪರಿಶಿಷ್ಟ ಪಂಗಡದ ಸಮುದಾಯದ ಯುವಕ, ಯುವತಿಯರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಅಭ್ಯರ್ಥಿಯು ತರಬೇತಿಯ ನೋಂದಣೆ ಸಮಯದಲ್ಲಿ ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಂಕಪಟ್ಟಿ ಹಾಗೂ ಆಧಾರ್ ಕಾರ್ಡ್ ಸಲ್ಲಿಸಬೇಕು. ಅಭ್ಯರ್ಥಿಗಳಿಗೆ ಇಲಾಖೆಯಿಂದ ಪ್ರಯಾಣ ವೆಚ್ಚವನ್ನು ಭರಿಸುವುದಿಲ್ಲ ಹಾಗೂ ತರಬೇತಿ ಅವಧಿಯಲ್ಲಿ ಯಾವುದೇ ಶಿಷ್ಯವೇತನ ನೀಡುವುದಿಲ್ಲ. ಅಗತ್ಯ ದಾಖಲಾತಿಗಳೊಂದಿಗೆ ಡಿಸೆಂಬರ್ 10ರೊಳಗೆ ಸಲ್ಲಿಸಬೇಕು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಹೆಚ್. ಎಸ್. ಬಿಂದ್ಯಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಹೈನುಗಾರಿಕೆ ತರಬೇತಿಗೆ

**ಚಾಮರಾಜನಗರ:** ಎಸ್.ಬಿ.ಐ. ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯು ಊಟ ವಸತಿಯೊಂದಿಗೆ ಉಚಿತವಾಗಿ ಹೈನುಗಾರಿಕೆ ತರಬೇತಿ ನೀಡಲಿದ್ದು, ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗೆ ನೀಡಲು ಅರ್ಜಿ ಆಹ್ವಾನಿಸಿದೆ. ಅಭ್ಯರ್ಥಿಗಳು 18 ರಿಂದ 45 ವರ್ಷದೊಳಗಿರಬೇಕು. ಡಿಸೆಂಬರ್ ಮೊದಲ ವಾರದಲ್ಲಿ ತರಬೇತಿ ಪ್ರಾರಂಭವಾಗಲಿದೆ. ಆಸಕ್ತರು ಕೂಡಲೇ ಅರ್ಜಿ ಸಲ್ಲಿಸಬೇಕು. ತರಬೇತಿಗೆ ಬರುವಾಗ ಆಧಾರ್ ಕಾರ್ಡ್, ಪಡಿತರ ಚೀಟಿಯ ನಕಲು ಪ್ರತಿ ಹಾಗೂ 4 ಭಾವಚಿತ್ರ ತರಬೇಕು. ಸಂತೇಮರಹಳ್ಳಿಯ ರಸ್ತೆಯಲ್ಲಿರುವ ಮಾದಪುರ ಬಳಿಯ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡದಲ್ಲಿರುವ ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ತರಬೇತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 9606098878, 8722483393, 9739067155 ಸಂಪರ್ಕಿಸಿ.

# ಸಂವಿಧಾನದ ಬಗ್ಗೆ ಎಚ್ಚೆತ್ತುಕೊಳ್ಳುವುದು ಅಗತ್ಯ

**ಚಾಮರಾಜನಗರ:** ಸಮಾನತೆ,ಸ್ವಾತಂತ್ರ್ಯ ಭ್ರಾತೃತ್ವ ಜಾತ್ಯಾತೀತತೆ ಪರಿಕಲ್ಪನೆಯುಳ್ಳ ಸಂವಿಧಾನಕ್ಕೆಇಂದುದೊಡ್ಡಗಂಡಾಂತರಎದುರಾಗಿದ್ದು, ಅದರ ಅಳಿವು, ಉಳಿವಿನ ಬಗ್ಗೆ ಭಾರತೀಯರು ಆಲೋಚನೆ ಮಾಡಬೇಕಿದೆಎಂದುರಾಜ್ಯೋತ್ಸವ ಪುರಸ್ಕೃತ ಸಾಹಿತಿ ಮಹದೇವಶಂಕನಪುರಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಪ್ರಥಮದರ್ಜೆಕಾಲೇಜಿನಲಿ ಚಾಮರಾಜನಗರ ರಂಗತರಂಗಟ್ರಸ್ಟ್, ಗಾಂಧೀಅಧ್ಯಯನಕೇಂದ್ರ ಹಾಗೂ ಸರ್ಕಾರಿ ಪ್ರಥಮದರ್ಜೆಕಾಲೇಜು ಸಹಯೋಗದಲ್ಲಿ ಭಾರತದ ಸಂವಿಧಾನಸಮರ್ಪಣಾ ದಿನಾಚರಣೆ- 75 ಕಾರ್ಯಕ್ರಮವನ್ನುಗಿಡಕ್ಕೇ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸ್ವಾತಂತ್ರ ನಂತರ ಭಾರತಕ್ಕೆಒಂದು ಸುಭದ್ರ ಸಂವಿಧಾನದಅವಶ್ಯಕತೆಯಿತ್ತು. ಆಸಂದರ್ಭದಲ್ಲಿಅಂಬೇಡ್ಕರ್ ಸೇರಿದಂತೆ 7 ಜನರ ಸಂವಿಧಾನಕರಡುರಚನಾ ಸಮಿತಿ ರಚಿಸಿ ಸದಸ್ಯರನ್ನು ನೇಮಕಮಾಡಲಾಗಿತ್ತು.ಅಂಬೇಡ್ಕರ್

ಅವರು ಸದಸ್ಯರಜತೆಗೆಅಧ್ಯಕ್ಷರಾಗಿಯೂ ನೇಮಕವಾದರು. ಸಂವಿಧಾನರಚನಾಸಮಿತಿ ಸದಸ್ಯರಾಗಿದ್ದವರು ಕೆಲವರುತೀರಿಕೊಂಡರು, ಇನ್ನು ಕೆಲವರುದೆಹಲಿದೂರ, ಬರುವುದಕ್ಕಾಗುವುದಿಲ್ಲ ಎಂದು ದೂರಉಳಿದರು.ಅಂತಿಮವಾಗಿ ಸಂವಿಧಾನರಚಿಸುವಕಾರ್ಯಅಂಬೇಡ್ಕರ್‌ಅವರ ಹೆಗಲಿಗೆಬಿತ್ತು. ಸ್ವಲ್ಪವೂಎದೆಗುಂದದಅಂಬೇಡ್ಕರ್ ವಿವಿಧದೇಶಗಳಸಂವಿಧಾನಗಳನ್ನುಅಧ್ಯಯನಮಾಡಿ, 2ವರ್ಷ, 11ತಿಂಗಳು, 17ದಿನಗಳ ಅವಧಿಯಲ್ಲಿ ಪರಿಪೂರ್ಣ ಸಂವಿಧಾನಬರೆದು 1949,ನ.26 ರಂದು ಅಂದಿನ ಪ್ರಧಾನಿಯಾಗಿದ್ದಜವಾಹರಲಾಲ್ ನೆಹರೂಅವರಿಗೆ ಸಮರ್ಪಿಸಿದರು. 1950 ಜ.26ರಂದು ಅಂಗೀಕಾರವಾಗಿಜಾರಿಗೆ ಬಂತುಎಂದರು. ಸಂತರಸಮಾವೇಶದಲ್ಲಿ ಪೇಜಾವರಶ್ರೀಗಳು ನಮ್ಮನ್ನುಗೌರವಿಸುವ ಸಂವಿಧಾನ ಬೇಕು ಎಂದುರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದಾರೆ.ಇನ್ನೊಂದೆಡೆ ಮಾಜಿರಾಜ್ಯಸಭೆಸದಸ್ಯರು, ಸುಬ್ರಹ್ಮಣ್ಯಸ್ವಾಮಿ ಸೇರಿದಂತೆಇತರೇರಾಜಕೀಯಪಕ್ಷದ ಮುಖಂಡರು ಸಂವಿಧಾನದ ಪ್ರಸ್ತಾವನೆಯಲ್ಲಿರುವ ಸ್ವಾತಂತ್ರ್ಯ,ಸಮಾನತೆ, ಭ್ರಾತೃತ್ವ ಪದಗಳನ್ನು ತೆಗೆದುಹಾಕುವಂತೆಕೋರಿ, ನ್ಯಾಯಾಲಯದ ಮೊರೆಹೋಗಿದ್ದಾರೆ, ಇದು ಸಂವಿಧಾನದ ವಿರುದ್ಧ ಷಡ್ಯಂತ್ರ, ಜತೆಗೆಇದು ಸಂವಿಧಾನ ಬಾಹಿರ ಹೇಳಿಕೆಯಾಗಿದೆ. ಈಗಲೇ ನಾವು ಸಂವಿಧಾನದ ಉಳಿವಿಗೆ ಎಚ್ಚೆತ್ತುಕೊಳ್ಳಬೇಕಿದೆ ಎಂದರು.



ಪ್ರಧಾನಭಾಷಣ ನೆರವೇರಿಸಿದ ವಕೀಲರು, ಮೈಸೂರುಪೀಪಲ್ ಲೀಗಲ್ ಫೋರಂ ನಿರ್ದೇಶಕ ಬಾಬುರಾಜ್ ಪಲ್ಲದನ್' ಸಂವಿಧಾನ ಎಂದರೆ ಅದುಬರೀಗ್ರಂಥವಲ್ಲ, ಅದರರಚನೆಹಿಂದೆ ಹಲವರಕಠಿಣಶ್ರಮ, ತ್ಯಾಗಬಲಿದಾನವಿದೆ. ಭ್ರಾತೃತ್ವ, ಸಮಾನತೆ, ಸ್ವಾತಂತ್ರಆಕಾಶದಿಂದಉದುರಿಲ್ಲ. ಸಂವಿಧಾನ ಉಳಿಯಬೇಕಾದರೆ ಎಲ್ಲರಲ್ಲೂ ಹೋರಾಟದ ಮನೋಭಾವ ಬೆಳೆಯಬೇಕು ಎಂದು ಸಲಹೆ ನೀಡಿದರು ಕನ್ನಡವಿಭಾಗದ ಮುಖ್ಯಸ್ಥ ಎ.ಎಂ. ಶಿವಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾಲೇಜಿನ ಪ್ರಾಂಶುಪಾಲ ಪಿ.ಎಸ್. ಗುರುಪ್ರಸಾದ್‌ಅಧ್ಯಕ್ಷತೆ ವಹಿಸಿದ್ದರು. ರಂಗತರಂಗಟ್ರಸ್ಟ್‌ಅಧ್ಯಕ್ಷ ಸೋಮಶೇಖರ್ ಬಿಸಲ್ವಾಡಿ, ಗಾಂಧಿಅಧ್ಯಯನಕೇಂದ್ರದಗೆಜೆಟೆಡ್ ಮ್ಯಾನೇಜರ್ ಪೂರ್ಣಿಮಾ, ಇತಿಹಾಸವಿಭಾಗದ ಮುಖ್ಯಸ್ಥ ನೀಲಕಂಠಸ್ವಾಮಿ ಹಾಜರಿದ್ದರು.

# ಸೋಲು ಗೆಲುವು ಸಮಾನವಾಗಿ ಸ್ವೀಕರಿಸಿ

**ಚಾಮರಾಜನಗರ:** ಕ್ರೀಡಾ ಸ್ಪರ್ಧೆಯಲ್ಲಿ ಸೋಲು-ಗೆಲುವನ್ನು ಸಮಚಿತ್ತ ಮನೋಭಾವದಿಂದ ಸ್ವೀಕರಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್ ಅವರು ತಿಳಿಸಿದರು. ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಸ್ಥಳಿಯ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವಿಕಲಚೇತನರ ಜಿಲ್ಲಾಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಶೇ?ಚೇತನರು ಉತ್ಸಾಹದಿಂದ ಭಾಗವಹಿಸಬೇಕು. ಸೋಲು ಗೆಲುವು ಸಹಜ. ಇದರಿಂದ ಯಾವುದೇ ಬೇಸರ ಮಾಡಿಕೊಳ್ಳದೆ ಆತ್ಮವಿಶ್ವಾಸದಿಂದ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಬೇಕು. ಗೆದ್ದವರನ್ನು ಪ್ರೋತ್ಸಾಹಿಸಿ ಸೋತವರು ಮುಂದಿನ ಸ್ಪರ್ಧೆಗೆ ಉತ್ತಮವಾಗಿ ತಯಾರಾಗಬೇಕು. ಪ್ರತಿಯೊಬ್ಬರೂ

ಪರಸ್ಪರ ಸಹಕಾರ ಗುಣ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮವನ್ನು ವಿಶೇಷಚೇತನರ ದೈಹಿಕ ಮಾನಸಿಕ ಆರೋಗ್ಯದ ದೃಷ್ಟಿಯಿಂದ ಹಮ್ಮಿಕೊಳ್ಳಲಾಗಿದೆ. ಕ್ರೀಡಾಕೂಟದಲ್ಲಿ 6 ರಿಂದ 60 ವರ್ಷದೊಳಗಿನ ಎಲ್ಲರಿಗೂ ಅವಕಾಶ ಕಲ್ಪಿಸಲಾಗಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಿ ಎಲ್ಲರಂತೆ ನೀವು ಸಮರ್ಥರು ಎಂಬುದನ್ನ ಸಾಬೀತುಪಡಿಸಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ್ ಅವರು ತಿಳಿಸಿದರು.



ಜಿಲ್ಲಾ ವಿಕಲಚೇತನ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಮೇಶ್ ಅವರು ಮಾತನಾಡಿ ವಿಶೇಷಚೇತನರ ದಿನಾಚರಣೆ ಅಂಗವಾಗಿ ಅಚ್ಚುಕಟ್ಟಾಗಿ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ವಿವಿಧ ಕ್ರೀಡಾ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಶೇಷಚೇತನರು ಭಾಗವಹಿಸಿ ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿ ಯಶಸ್ವಿಯಾಗಬೇಕು ಎಂದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಆರ್. ಶಂಕರ್ ಅವರು ಮಾತನಾಡಿ ವಿಶೇ?ಚೇತನ ಮಕ್ಕಳಲ್ಲಿ ಕ್ರೀಡೆ, ವಿದ್ಯಾಭ್ಯಾಸದ ಬಗ್ಗೆ ಆಸಕ್ತಿ ಮೂಡಿಸುವುದು ಎಲ್ಲರ ಜವಾಬ್ದಾರಿ. ಕಠಿಣ ಪರಿಶ್ರಮದಿಂದ ಮಾತ್ರ ಜೀವನದಲ್ಲಿ ಗುರಿ ಮುಟ್ಟಲು ಸಾಧ್ಯ. ವಿಶೇ?ಚೇತನರಿಗೆ ಅವಕಾಶಗಳು ಬೇಕೆ ಹೊರತು ಅನುಕಂಪವಲ್ಲ. ದೈಹಿಕ ಹಾಗೂ ಮಾನಸಿಕವಾಗಿ ಸದೃಢವಾಗಿರಲು ಕ್ರೀಡೆ ಉಪಯೋಗವಾಗುತ್ತದೆ ಎಂದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಕ್ರೀಡಾಜ್ಯೋತಿಗೆ ಚಾಲನೆ ನೀಡಿದರು.

## ಹಿರಿಯರಿಗೆ ಆರೋಗ್ಯ ಯೋಜನೆ

**ಚಿಕ್ಕಬಳ್ಳಾಪುರ:** ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ - ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಹಿರಿಯ ನಾಗರಿಕರಿಗೆ ವಿಶೇಷ ಕಾಳಜಿ, ದೀರ್ಘಕಾಲದ ಕಾಯಿಲೆಗಳು, ವಯಸ್ಸಿಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳು ಹಾಗೂ ಸೀಮಿತ ಆದಾಯ ಮತ್ತು ಹೆಚ್ಚಿನ ವೈದ್ಯಕೀಯ ವೆಚ್ಚಗಳಿಂದ ಹಣಕಾಸಿನ ಅಸ್ಥಿರತೆಗೆ ಹಿರಿಯ ನಾಗರಿಕರು ಹೆಚ್ಚು ಗುರಿಯಾಗುತ್ತಾರೆ. ಆದ್ದರಿಂದ ಭಾರತ ಸರ್ಕಾರ 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಎಲ್ಲಾ ಹಿರಿಯ ನಾಗರೀಕರಿಗೆ ಆರ್ಥಿಕ ಸ್ಥಿತಿಯನ್ನು ಲೆಕ್ಕಿಸದೆ, ಹಿರಿಯ ನಾಗರಿಕ ಯೋಜನೆಯಡಿ 5 ಲಕ್ಷದವರೆಗೆ ಉಚಿತ ವೈದ್ಯಕೀಯ ಚಿಕಿತ್ಸೆಗೆ ಅರ್ಹರಾಗಿರುತ್ತಾರೆ. 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಎಲ್ಲಾ ಅರ್ಹ ಹಿರಿಯ ನಾಗರೀಕರಿಗೆ ವಿಶಿಷ್ಟ ಆಯುಷ್ಮಾನ್ ಕಾರ್ಡ್ ನೀಡಲಾಗುತ್ತದೆ. ಫಲಾನುಭವಿಗಳು ದಾಖಲಾತಿಯ ಮೊದಲ ದಿನದಿಂದ ಚಿಕಿತ್ಸೆಯನ್ನು ಪ್ರಾರಂಭಿಸಬಹುದು ಹಾಗೂ ಯಾವುದೇ ರೋಗ ಅಥವಾ ಚಿಕಿತ್ಸೆಗಾಗಿ ಕಾಯುವ ಅವಶ್ಯಕತೆ ಇರುವುದಿಲ್ಲ, 70 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನ ಕುಟುಂಬದ ಸದಸ್ಯರಿಗೆ ಮಾತ್ರ ಹೆಚ್ಚುವರಿ 5 ಲಕ್ಷ ಮತ್ತು ಕುಟುಂಬದ ಉಳಿದ ಸದಸ್ಯರಿಗೆ ಈಗಿರುವ 5 ಲಕ್ಷದ ಮೊತ್ತದ ಚಿಕಿತ್ಸೆ ಪಡೆಯುವ ಸೌಲಭ್ಯವನ್ನು ಪಡೆದುಕೊಳ್ಳಬಹುದು. ಅರ್ಹ ಹಿರಿಯ ನಾಗರಿಕರಿಗೆ ಆಯುಷ್ಮಾನ್ ಕಾರ್ಡ್ಗಳ ನೋಂದಣಿ ಮತ್ತು ವಿತರಣೆಗೆ ಆಧಾರ್ ಆಧಾರಿತ ಇ-ಕೆವೈಸಿ ಕಡ್ಡಾಯವಾಗಿದೆ. ಫಲಾನುಭವಿಯು AB PMJAY - CM'S ArK ಹಿರಿಯ ನಾಗರಿಕ ಯೋಜನೆಗಾಗಿ ಹತ್ತಿರದ ಗ್ರಾಮ ಒನ್ ಸೆಂಟರ್ ಅಥವಾ ಧರ್ಮಸ್ಥಳ ಸಂಘಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ವಿಶಿಷ್ಟ ಆಯುಷ್ಮಾನ್ ಕಾರ್ಡ್ ಪಡೆಯಬಹುದು. ಸ್ವಯಂ ನೋಂದಣಿ ಮಾಡಿಕೊಳ್ಳಲು ವೆಬ್ಸೈಟ್ ಪೋರ್ಟಲ್ - www.beneficiary.nha.gov.in ಮತ್ತು ಆಯುಷ್ಮಾನ್ ಅಪ್ಲಿಕೇಶನ್ (ಗೂಗಲ್ ಪ್ಲೇ ಸ್ಟೋರ್‌ನಲ್ಲಿ ಂಟಿಜಡಿಔಜ ಗಾಗಿ ಲಭ್ಯವಿದೆ) ಮೂಲಕ ಅರ್ಜಿ ಸಲ್ಲಿಸಬಹುದು. ಹಿರಿಯ ನಾಗರೀಕರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕೆಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತ್ರೈಮಾಸಿಕ ಕೆಡಿಪಿ ಸಭೆ

**ಚಿಕ್ಕಬಳ್ಳಾಪುರ:** ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಡಿಸೆಂಬರ್ 6 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಸಭೆಯನ್ನು ಡಿಸೆಂಬರ್ 5 ರಂದು ಬೆಳಿಗ್ಗೆ 11 ಗಂಟೆಗೆ ಹಿಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್ ಜೆ.ಟಿ. ನಿಟ್ಟಾಲಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಗಿ ಕಟಾವು ಯಂತ್ರಕ್ಕೆ ಪರಿಷ್ಕೃತ ಬಾಡಿಗೆ ದರ ನಿಗದಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ರಾಗಿ ಬೆಳೆ 42673 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿರುತ್ತದೆ. ಜಿಲ್ಲೆಯ ಬಹುತೇಕ ರೈತರು ರಾಗಿ ಬೆಳೆಯನ್ನು ಕಟಾವು ಯಂತ್ರಗಳ (ಅಠಟಭಟಜಜ ಊಚಿಡಿತಜಜಜಡಿ) ಮೂಲಕ ಕಟಾವು ಮಾಡುತ್ತಿದ್ದು, ಖಾಸಗಿ ರಾಗಿ ಕಟಾವು ಯಂತ್ರಗಳ ಮಾಲೀಕರು ರೈತರಿಂದ ಪ್ರತಿ ಘಂಟೆಗೆ ರೂ.3500/- ರಿಂದ ರೂ.4000/- ಗಳ ವರೆಗೆ ಬಾಡಿಗೆ ದರ ನಿಗದಿಪಡಿಸುತ್ತಿರುವುದು ಗಮನಕ್ಕೆ ಬಂದಿದ್ದು, ಇದರಿಂದ ರೈತರಿಗೆ ಹೆಚ್ಚಿನ ಆರ್ಥಿಕ ಹೊರೆಯಾಗಲಿದೆ. ರಾಗಿ ಕಟಾವು ಮಾಡಲು ಯಂತ್ರಕ್ಕೆ ಪ್ರತಿ ಘಂಟೆಗೆ ರೂ.2700/- ಮೀರದಂತೆ ಬಾಡಿಗೆಯನ್ನು ನಿಗದಿ ಪಡಿಸಿದೆ. ತಪ್ಪಿದಲ್ಲಿ ರಾಗಿ ಕಟಾವು ಯಂತ್ರದ ಮಾಲೀಕರ ವಿರುದ್ಧ ವಿಪತ್ತು ನಿರ್ವಹಣೆ ಕಾಯ್ದೆ 2005ರ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಪಿ.ಎನ್. ರವೀಂದ್ರ, ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ವಿಕಲಚೇತನರ ದಿನಾಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಪತ್ರಕರ್ತರ ಭವನದಲ್ಲಿ ಆಯೋಜಿಸಲಾಗಿದೆ.ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರು ನೆರವೇರಿಸಲಿದ್ದಾರೆ.ಕಾರ್ಯಕ್ರಮ ಉಪಸ್ಥಿತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ರವರು ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ಶಾಕರಾದ ಪಿ.ಇ ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ ಭಾಗವಹಿಸಲಿದ್ದಾರೆ.

# ಮಕ್ಕಳ ಸಾಧನೆ ವಿಶ್ವಮಟ್ಟದಲ್ಲಿ ಪ್ರಜ್ವಲಿಸಿ ದೇಶಕ್ಕೆ ಕೀರ್ತಿ ತರಲಿ

**ಬೆಂಗಳೂರು:** ಮಕ್ಕಳ ಸಾಧನೆಯು ವಿಶ್ವಮಟ್ಟದಲ್ಲಿ ಪ್ರಜ್ವಲಿಸಿ ದೇಶಕ್ಕೆ ಕೀರ್ತಿ ತರುವಂತರಾಗಲಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀಮತಿ ಲಕ್ಷ್ಮೀ ಆರ್ ಹೆಬ್ಬಾಳ್ ಕರ್ ಅವರು ತಿಳಿಸಿದರು.

ಇಂದು ಜವಾಹರ ಬಾಲಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾದ ಮಕ್ಕಳ ದಿನಾಚರಣೆ 2024 ಕಾರ್ಯಕ್ರಮ ಉದ್ಘಟಿಸಿ ಮಾತನಾಡಿದ ಸಚಿವರು ಜೀವನದಲ್ಲಿ ಗುರಿ ಮುಖ್ಯ. ಗುರಿಯಿಂದ ಸಾಧನೆ ಮಾಡಬಹುದು. ತಂದೆ ತಾಯಿಗೆ ಆದರ್ಶ ಮಕ್ಕಳಾಗಬೇಕು ಎಂದು ತಿಳಿಸಿದರು. ಭಾರತದಲ್ಲಿ 14ನೇ ನವೆಂಬರ್‌ನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಆ ದಿನ ಭಾರತದ ಸ್ವಾತಂತ್ರ್ಯ ಹೋರಾಟಗಾರ ಮತ್ತು ಭಾರತದ ಪ್ರಥಮ ಪ್ರಧಾನ ಮಂತ್ರಿ ಜವಹರ ಲಾಲ್ ನೆಹರು ಅವರು ಜನ್ಮದಿನವಾಗಿದೆ. ಅವರಿಗೆ ಮಕ್ಕಳೆಂದರೆ ವಿಶೇಷವಾದ ಪ್ರೀತಿ. ಇಂದಿನ ಮಕ್ಕಳೆ ನಾಳಿನ ಪ್ರಜೆಗಳು. ಅವರಿಂದ ದೇಶದ ಪ್ರಗತಿ ಸಾಧ್ಯ ಎಂದು ನಂಬಿದ್ದರು. ಅವರ ಜನ್ಮ ದಿನಾಚರಣೆಯನ್ನು, ಮಕ್ಕಳಿಗಾಗಿ ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ ಎಂದರು.

ಭವ್ಯವಾದ ಭಾರತ ದೇಶದಲ್ಲಿ ಹುಟ್ಟಿರುವುದು ನಮ್ಮೆಲ್ಲರ ಪುಣ್ಯ. 75 ವರ್ಷಗಳ ಹಿಂದೆ ನಮ್ಮ ದೇಶದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ, ಬಡತನದ ಪರಿಸ್ಥಿತಿ ಇತ್ತು. ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಜೈ ಜವಾನ್ ಜೈ ಕಿಸಾನ್ ಘೋಷಣೆ ಮಾಡಿದ್ದರು. 35 ಕೋಟಿ ಜನಸಂಖ್ಯೆ ಇತ್ತು. ಈಗ 135 ಕೋಟಿಗೂ ಹೆಚ್ಚು ಜನಸಂಖ್ಯೆ ಇದೆ. ಬಡತನದ ಪರಿಸ್ಥಿತಿಯಲ್ಲೂ ಛಲಬಿಡದೆ ಓದಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕಾನೂನು ಸಚಿವರಾದರು. ಸಂವಿಧಾನ ರಚಿಸಿದರು ಎಂದು ತಿಳಿಸಿದರು.

ಇಂದು ನಮ್ಮಲ್ಲಿ ಎಲ್ಲಾ ರೀತಿಯಾದ ಮೂಲಭೂತ ಸೌಕರ್ಯ ಇದೆ. ಬಸ್ಸು, ರೈಲು, ಕಂಪ್ಯೂಟರ್, ಟಿ.ವಿ. ಮೊಬೈಲ್, ಆರ್ಟಿಫಿಷಿಯಲ್ ಇಂಟೆಲಿಜೆನ್ಸಿ ಮುಂತಾದ ಸೌಕರ್ಯಗಳೂ ಇವೆ. ಇವೆಲ್ಲವನ್ನು ಸಮರ್ಪಕ ರೀತಿಯಲ್ಲಿ ಬಳಸಿಕೊಂಡು ಮಕ್ಕಳು ಜೀವನದಲ್ಲಿ ಮುಂದೆ ಬರಬೇಕು. ಸಾಧನೆ ಮಾಡಬೇಕು. ಜೀವನದಲ್ಲಿ ಗುರಿ ಅತಿ ಮುಖ್ಯ. ಪ್ರಜಾಪ್ರಭುತ್ವ ಹೊಂದಿರುವ ನಮ್ಮ ದೇಶದಲ್ಲಿ ಮಕ್ಕಳು ಮುಂದಿನ ಜವಾಬ್ದಾರಿ ಪ್ರಜೆಗಳಾಗಿ ಬೆಳೆಯಬೇಕು. ಹಾಗೆಯೇ ಆದರ್ಶ ತಂದೆ ತಾಯಿಯಾಗುವ ಜವಾಬ್ದಾರಿ ಪೋಷಕರಿಗಿದೆ. ಮಕ್ಕಳನ್ನು ಪೋಷಕರು ಕುಟುಂಬಕ್ಕೆ ಮಾತ್ರ ಸೀಮಿತಗೊಳಿಸಿಕೊಳ್ಳದೇ, ಸಮಾಜದಲ್ಲಿ ಸತ್ಪ್ರಜೆಗಳನ್ನಾಗಿ ಬೆಳಸಬೇಕು. ದೇಶಕ್ಕೆ ಒಳಿತುಂಟು ಮಾಡುವ ದಿಸೆಯಲ್ಲಿ ಅವರನ್ನು ಬೆಳೆಸಬೇಕು ಎಂದು ಕಿವಿಮಾತು ಹೇಳಿದರು. ಮಕ್ಕಳ ಮನಸ್ಸು ಚಂಚಲವಾಗಿರುತ್ತದೆ. ತಪ್ಪು ಮಾಡುವುದು ಸಹಜ. ಇದನ್ನು ಅರಿತು ಪ್ರಾಧ್ಯಾಪಕರು/ಶಿಕ್ಷಕರು ಮಕ್ಕಳು ತಪ್ಪು ಮಾಡಿದಾಗ ಅವರ ತಪ್ಪನ್ನು ತಿಳಿ ಹೇಳಿ ಅವರನ್ನು ತಿದ್ದಿ, ಒಳ್ಳೆಯ ಮಾರ್ಗದಲ್ಲಿ ನಡೆಯಲು ಮಾರ್ಗದರ್ಶಕರಾಗಿ ಕೆಲಸ ನಿರ್ವಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಶಿವಮೊಗ್ಗ ಜಿಲ್ಲೆಯ ಮಾಸ್ಟರ್ ಮಣಿಕಂಠ ಆರ್ , ಮಾಸ್ಟರ್ ನಿಶಾಂತ ಎಲ್, ಅಶ್ವಿನ್ ಎ.ಎನ್.ದಕ್ಷಿಣ ಕನ್ನಡ ಜಿಲ್ಲೆಯ ವೈಭವಿ, ಉಡುಪಿ ಜಿಲ್ಲೆಯ ಬಿ.ಧೀರಜ್ ಐತಾಳ, ಧಾರವಾಡ ಜಿಲ್ಲೆಯ ಮಹಮ್ಮದ್ ಸಮೀರ ಬುಕ್ಕಿಟಗಾರ ,ಬೆಳಗಾವಿ ಜಿಲ್ಲೆಯ ಸ್ಫೂರ್ತಿ ವಿಶ್ವನಾಥ ರವರಿಗೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ನಗದು ಬಹುಮಾನ 10,000/-, ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ ವಿತರಿಸಲಾಯಿತು.

ಬೆಂಗಳೂರು ನಗರ ಜಿಲ್ಲೆಯ ಉತ್ತರಳ್ಳಿ ಗ್ರಾಮದ ಪ್ರತಿಭಾವಂತ ಕಲಾವಿದೆ ಹಾಗೂ ಕ್ರೀಡಾಪಟು ಕುಮಾರಿ ಆರುಣಿ ವಿ ಇವರು ತಮ್ಮ 3ನೇ ವಯಸ್ಸಿನಲ್ಲಿಯೇ ರಂಗ ಪ್ರವೇಶ ಮಾಡಿ 100ಕ್ಕೂ ಹೆಚ್ಚು ಪ್ರದರ್ಶನಗಳನ್ನು ನೀಡಿರುತ್ತಾರೆ. ಭರತನಾಟ್ಯ, ಶಾಸ್ತ್ರೀಯ ಸಂಗೀತ, ನಾಟಕ, ಚಿತ್ರಕಲೆ ಹಾಗೂ ಇತರೆ ಕಲಾ ಪ್ರಕಾರಗಳಲ್ಲಿ ಪಾರಂಗತರಾಗಿರುವುದಲ್ಲದೇ, ಕ್ರೀಡಾ ಕ್ಷೇತ್ರದಲ್ಲಿ ಚಿನ್ನದ ಪದಕ ಮತ್ತು ಬೆಳ್ಳಿಯ ಪದಕಗಳನ್ನು ಗಳಿಸಿರುತ್ತಾರೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮ ಅಂಕ ಗಳಿಸಿ ವಿಶೇಷ ಸಾಧನೆ ಮಾಡಿದ್ದು, ಇವರಿಗೆ ವಿಶೇಷ ಸಾಧನೆ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ತುಮಕೂರು ಜಿಲ್ಲೆಯಸಂತ ಗ್ರಿಗೋರಿಯಸ್ ದಯಾಭವನ, ಧಾರವಾಡ ಜಿಲ್ಲೆಯ ಹೊಂಬೆಳಕು ಪ್ರತಿ?ನ, ಕೊಪ್ಪಳ ಜಿಲ್ಲೆಯ ಅಕ್ಕಪಮಹಾದೇವಿ ಮಹಿಳಾ ಮಂಡಳಿ, ಕೋಲಾರ ಜಿಲ್ಲೆಯ ಕರ್ನಾಟಕ ರಾಜ್ಯ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೌಕರರ ಸಂಘ(ರಿ) ಸಂಸ್ಥೆ ವಿಭಾಗದಲ್ಲಿ 2024-25ನೇ ಸಾಲಿನ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಸಂಸ್ಥೆಯ ಪ್ರತಿನಿಧಿಗಳಿಗೆ ಒಂದು ಲಕ್ಷ ರೂಪಾಯಿ ನಗದು ಬಹುಮಾನ, ನೆನಪಿನ ಕಾಣಿಕೆ ಮತ್ತು ಪ್ರಶಸ್ತಿ ಪತ್ರವನ್ನು ವಿತರಿಸಲಾಯಿತು.

ಶಿವಮೊಗ್ಗ ಜಿಲ್ಲೆಯ ಸುದರ್ಶನ್ ಹೆಚ್.ಪಿ, ಧಾರವಾಡ ಜಿಲ್ಲೆಯ ಸುನೀಲ ಮ ಕಮ್ಮಾರ್, ಬೀದರ್ ಜಿಲ್ಲೆಯ ಸಂಗಮೇಶ , ಗದಗ ಜಿಲ್ಲೆಯ ಗವಿಶಿದ್ದಯ್ಯ ಜ ಹಳ್ಳಿಕೇರಿಮಠ ವ್ಯಕ್ತಿ ವಿಭಾಗದಲ್ಲಿ 2024-25ನೇ ಸಾಲಿನ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವೈಯಕ್ತಿಕ ಪ್ರಶಸ್ತಿಯು ರೂ25000/- ನಗದು ಬಹುಮಾನ, ನೆನಪಿನ ಕಾಣಿಕೆ ಮತ್ತು ಪ್ರಶಸ್ತಿ ಪತ್ರವನ್ನು ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಇಲಾಖಾ ಯೋಜನೆಗಳ ಕೈಪಿಡಿ ''ಮಾತೃಲಕ್ಷ್ಮಿ'' ಪುಸ್ತಕ ಬಿಡುಗಡೆ ಮಾಡಲಾಯಿತು. ಭಾಗ್ಯಲಕ್ಷ್ಮೀ ಯೋಜನೆಯಡಿ ಸಾಂಕೇತಿಕವಾಗಿ ಪರಿಪಕ್ವ ಮೊತ್ತ ಮಂಜೂರಾತಿ ಪತ್ರವನ್ನು 3 ಜನರಿಗೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಬಾಲಭವನ ಸೊಸೈಟಿ ಅಧ್ಯಕ್ಷ ಬಿ.ಆರ್. ನಾಯ್ಡು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ ನಾಗಣ್ಣ ಗೌಡ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಅಧ್ಯಕ್ಷರು ಶ್ರೀಮತಿ ಪದ್ಮಾವತಿ, ಧಾರವಾಡ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅ. ಬಬಲೇಶ್ವರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಡಾ. ಶಮ್ಲಾ ಇಕ್ಬಾಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕ ಎನ್ ಸಿದ್ದೇಶ್ವರ, ಶಿವಾಜಿನಗರ ವಿಧಾನಸಭಾ ಕ್ಷೇತ್ರ ಶಾಸಕ ರಿಜ್ವಾನ್ ಅರ್ಷದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಹಾಗೂ ನವಲಗುಂದ ವಿಧಾನಸಭಾ ಕ್ಷೇತ್ರ ಶಾಸಕ ಎನ್.ಎಚ್. ಕೋನರೆಡ್ಡಿ, ಮಹದೇವಪುರ ವಿಧಾನಸಭಾ ಕ್ಷೇತ್ರ ಶಾಸಕರಾದ ಶ್ರೀಮತಿ ಮಂಜುಳಾ ಎಸ್ ಸೇರಿದಂತೆ ಹಿರಿಯ ಗಣ್ಯರು ಉಪಸ್ಥಿತರಿದ್ದರು.

# ಸಿದ್ದರಾಮಯ್ಯ ಇಂದಾಗಿ ಕನಕ ಜಯಂತಿ ಸರ್ಕಾರಿ ಕಾರ್ಯಕ್ರಮ



**ಹುಳಿಯಾರು:** ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದಾಗಿ ಕನಕ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿಸಿ ಇಂದು ಬೆಂಗಳೂರಿನಂತಹ ಮಹಾನಗರದಿಂದ ಹಿಡಿದು ಹೋಬಳಿ ಮಟ್ಟದಲ್ಲೂ ಆಚರಿಸಲು ಸಾಧ್ಯವಾಗಿದೆ ಹಾಗೂ ಕುರುಬರ ಸಂಸ್ಕೃತಿಯ ಪರಿಷತ್ತಿನ ಮೂಲಕ ಕನಕರ 15 ಸಂಪುಟಗಳನ್ನು ಹೊರತರಲಾಗಿದೆ ಎಂದು ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್. ಎಂ.ರೇವಣ್ಣ ತಿಳಿಸಿದರು.

ಹುಳಿಯಾರಿನ ಕನಕದಾಸ ವೃತದಲ್ಲಿ ಹರಗುರುಗಳ ದಿವ್ಯ ಸಾನಿಧ್ಯದಲ್ಲಿ ಕನಕದಾಸರ ಕಂಚಿನ ಪುತ್ಥಳಿ ಲೋಕಾರ್ಪಣೆ ಹಾಗೂ ದಾಸ ಶ್ರೇಷ್ಠ ಕನಕದಾಸ ಜಯಂತಿ ಆಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹಿಳಾ ಆಯೋಗದ ಅಧ್ಯಕ್ಷೆ ಡಾ॥ನಾಗಲಕ್ಷ್ಮಿ ಚೌಧರಿ ಮಾತನಾಡಿ ರಾಜ್ಯದ ಮಹಿಳಾ ಆಯೋಗವು ಮಹಿಳೆಯರ ಶಕ್ತಿಯಾಗಿ, ಮಹಿಳೆಯರ ಧ್ವನಿಯಾಗಿ, ಮಹಿಳೆಯರ ಹಕ್ಕಿನ ಒತ್ತಾಸೆಯಾಗಿ ನಿಂತಿದೆ. ಹೆಣ್ಣು ಮಕ್ಕಳು ಮುಂದುವರಿದಲ್ಲಿ ಸಮಾಜ ಮುಂದುವರಿಯುತ್ತದೆ. ಕನಕ ಸಮುದಾಯದಲ್ಲಿ ಹುಟ್ಟಿರುವುದು ಹೆಮ್ಮೆಯ ವಿಚಾರವಾಗಿದೆ ಎಂದರು.

ಶಾಸಕ ಸಿ.ಬಿ.ಸುರೇಶ್ ಬಾಬು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಹುಳಿಯಾರು ಹೋಬಳಿಯಲ್ಲಿ ಎಲ್ಲಾ ಸಮಾಜದವರ 18 ಕುಲದವರ ಒಗ್ಗಟ್ಟಿನಿಂದಾಗಿ ಹಾಗೂ ಕುರುಬ ಸಮಾಜದವರಿಗೆ ಬೆನ್ನೆಲುಬಾಗಿ ನಿಂತ ಪರಿಣಾಮವಾಗಿ ಹುಳಿಯಾರು ಪಟ್ಟಣದಲ್ಲಿ ಕನಕ ಪುತ್ಥಳಿ ಸ್ಥಾಪಿಸಲು ಸಾಧ್ಯವಾಯಿತು, ಇದರ ಶ್ರೇಯಸ್ಸು ಎಲ್ಲರಿಗೂ ಸಲ್ಲುತ್ತದೆ ಎಂದರು.

ಕನಕದಾಸರ ಬಗ್ಗೆ ಉಪನ್ಯಾಸ ನೀಡಿದ ನಿಕೇತ್ ರಾಜ್ ಮೌರ್ಯ ಎಲ್ಲಾ ದಾರ್ಶನಿಕರು ಕೊಟ್ಟ ಸಂದೇಶ ಒಂದೇ ಆಗಿದ್ದು,ಜಾತಿಗಿಂತ ಪ್ರೀತಿ ದೊಡ್ಡದು, ಎಲ್ಲರೂ ವೈಚಾರಿಕ ಪ್ರಜ್ಞೆ ಮೂಡಿಸಿಕೊಳ್ಳಿ ಎಂದರು. 15 ವರ್ಷಗಳ ಕಾಲದ ಸುಧೀರ್ಘ ಹೋರಾಟದ ಫಲವಾಗಿ ಇದೀಗ ಕನಕ ಪುತ್ಥಳಿ ಸ್ಥಾಪನೆಯಾಗಿದ್ದು ಶೀಘ್ರದಲ್ಲಿ ಚಿಕ್ಕನಾಯಕನಹಳ್ಳಿಯಲ್ಲಿ ಕೂಡ ಸಂಗೊಳ್ಳಿ ರಾಯಣ್ಣನ ಪುತ್ಥಳಿ ಸ್ಥಾಪಿಸಲಾಗುವುದು ಎಂದರು.

ಹೊಸದುರ್ಗ ಕನಕ ಗುರುಪೀಠ ಶಾಖ ಮಠದ ಶ್ರೀ ಈಶ್ವರನಂದಪುರಿ ಸ್ವಾಮೀಜಿ, ಚಿತ್ರದುರ್ಗ ಮಾದರ ಚನ್ನಯ್ಯ ಸ್ವಾಮೀಜಿ, ಶ್ರೀ ಬಸವ ಮಡಿವಾಳ ಮಾಚಿದೇವ ಸ್ವಾಮೀಜಿ, ಸರ್ದಾರ್ ಶ್ರೀ ಸೇವಾಲಾಲ್ ಮಹಾರಾಜ ಸ್ವಾಮಿಗಳು ಉಪಸ್ಥಿತರಿದ್ದು ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಉತ್ತಮ ವೈದ್ಯ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಕಣಕಟ್ಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ಡಾ.ಸಿ.ಎಸ್. ರಂಗನಾಥ್, ರಾಜ್ಯ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಸಿ.ಆರ್.ಮುರುಡಯ್ಯನವರನ್ನು ಸನ್ಮಾನಿಸಲಾಯಿತು. ಖ್ಯಾತ ಗಾಯಕರಾದ ಕಡಬಗೆರೆ ಮುನಿರಾಜು ತಂಡದಿಂದ ಕನಕದಾಸರ ಕೀರ್ತನೆಗಳ ಸಂಗೀತ ಕಾರ್ಯಕ್ರಮ ಜರುಗಿತು.

ವಿಧಾನ ಪರಿಷತ್ ಸದಸ್ಯರಾದ ಸಿ.ಎ.ತಿಪ್ಪೇಸ್ವಾಮಿ, ಹಂದನಕೆರೆ ರಾಮಚಂದ್ರಪ್ಪ, ಮಂಜುಳಾ ಗವಿರಂಗಯ್ಯ, ಸಿ.ಡಿ.ಚಂದ್ರಶೇಖರ್, ಕೃಷ್ಣಮೂರ್ತಿ, ಪಟ್ಟಣ ಪಂಚಾಯಿತಿ ಸದಸ್ಯರುಗಳು ತಾಲೂಕು ಹಾಗೂ ಹೋಬಳಿ ಕುರುಬರ ಸಂಘದ ಪದಾಧಿಕಾರಿಗಳು, ಹುಳಿಯಾರು ಹಾಗೂ ತಾಲೂಕಿನ ಅಷ್ಠ ಮಠಗಳ ಗುರುಗಳು,ಗೌಡರುಗಳು, ಬಳಗ ಬಂಢಾರಿಗಳು,ಹರಿವಾಣದವರು ಸಾವಿರದವರು, ಮತ್ತಿತರರು ಉಪಸ್ಥಿತರಿದ್ದರು.



**ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಳಗೆರೆ ಗ್ರಾಮದ ಸವದತ್ತಿ ಯಲ್ಲಮ್ಮ ದೇವಸ್ಥಾನದ ಹಿಂಭಾಗದ ಸಿಸಿ ರಸ್ತೆ ಕಾಮಗಾರಿಗೆ ಶಾಸಕರಾದ ಸಿ.ಬಿ.ಸುರೇಶ್‌ಬಾಬು ಗುರುವಾರ ಚಾಲನೆ ನೀಡಿದರು. ಪಪಂ ಅಧ್ಯಕ್ಷೆ ರತ್ನಮ್ಮ, ಉಪಾಧ್ಯಕ್ಷೆ ಕಾವ್ಯರಾಣಿ, ಸದಸ್ಯರುಗಳಾದ ಚಂದ್ರಶೇಖರ್, ಎಂಜಿನಿಯರ್ ಮಂಜುನಾಥ್ ಮತ್ತಿತರರು ಇದ್ದರು.**

# ಧರ್ಮಸ್ಥಳ ಸಂಸ್ಥೆಯಿಂದ ವೀಲ್ ಚೇರ್ ವಿತರಣೆ

**ಹುಳಿಯಾರು:** ಹುಳಿಯಾರು ಹೋಬಳಿಯ ಬೆಳ್ಳಾರ ಸಮೀಪದ ಮೇಗಲಗೊಲ್ಲರಟ್ಟಿ ಗ್ರಾಮದ ನಿವಾಸಿಯಾದ ಮಹಾಲಿಂಗಯ್ಯನವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಮಂಜೂರಾದ ವೀಲ್ ಚೇರನ್ನು ಒಕ್ಕೂಟದ ಅಧ್ಯಕ್ಷರಾದ ಕಮಲಮ್ಮನವರು ಗುರುವಾರ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಧರ್ಮಸ್ಥಳ ಸಂಸ್ಥೆಯ ತಾಲೂಕು ಯೋಜನಾಧಿಕಾರಿಗಳಾದ ರಾಮಚಂದ್ರ, ಡಿ ರವರು ಸಂಸ್ಥೆಯಿಂದ ವಿಶೇಷ ಚೇತನರಿಗೆ ಡಾ.ಡಿ.ವೀರೇಂದ್ರ ಹೆಗ್ಗಡೆಯವರು ಜಲಮಂಗಲ ಕಾರ್ಯಕ್ರಮದಡಿಯಲ್ಲಿ ವೀಲ್ ಚೇರ್, ವಾಕಿಂಗ್‌ಸ್ಟಿಕ್, ವಾಟರ್ ಬೆಡ್, ಕಬೋರ್ಡ್ ವಿಥ್ ವೀಲ್ ಚೇರ್, ಯು ಶೇಪ್ ವಾಕರ್ ವಿತರಿಸಲಾಗುತ್ತದೆ. ಇಲ್ಲಿಯವರೆಗೆ ತಾಲೂಕಿನಲ್ಲಿ ಸುಮಾರು 45 ದಕ್ಕೂ ಹೆಚ್ಚು ವಿಶೇಷ ಚೇತನರಿಗೆ ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು.



## ಹಣ, ಸಮಯ ಉಳಿಸಲು ಡಿಜಿಟಲ್ ಬ್ಯಾಂಕಿಂಗ್ ಬಳಸಿ



**ಹುಳಿಯಾರು:** ಜನರು ಪದೇಪದೇ ಬ್ಯಾಂಕಿಗೆ ಅಲೆದಾಡುವುದನ್ನು ತಪ್ಪಿಸಲು ಕೇಂದ್ರ ಸರ್ಕಾರವು ಬ್ಯಾಂಕುಗಳ ಮುಖಾಂತರ ಡಿಜಿಟಲ್ ಬ್ಯಾಂಕಿಂಗ್ ವ್ಯವಸ್ಥೆಯನ್ನು ಅಳವಡಿಸಿದ್ದು ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಚಿಕ್ಕನಾಯಕನಹಳ್ಳಿ ಆರ್ಥಿಕ ಸಾಕ್ಷರತಾ ಸಲಹೆಗಾರರ ಆರ್.ಎಂ.ಕುಮಾರಸ್ವಾಮಿ ತಿಳಿಸಿದರು.

ಹುಳಿಯಾರು ಹೋಬಳಿಯ ಹೊಯ್ಸಳಕಟ್ಟೆ ಕರ್ನಾಟಕ ಗ್ರಾಮೀಣ ಬ್ಯಾಂಕಿನ ಆವರಣದಲ್ಲಿ ಏರ್ಪಡಿಸಿದ್ದ ಜನ ಸುರಕ್ಷಾ ಅಭಿಯಾನ ಶಿಬಿರದಲ್ಲಿ ಮಾತನಾಡಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕಿನ ಅಸಿಸ್ಟೆಂಟ್ ಮ್ಯಾನೇಜರ್ ತಿರುಮಲೇಶ್ ಮಾತನಾಡಿ ಪ್ರಧಾನಮಂತ್ರಿ ಸುರಕ್ಷಾ ಹಾಗೂ ಜೀವನ ಜ್ಯೋತಿ ಯೋಜನೆಗಳನ್ನು ಬ್ಯಾಂಕಿನಿಂದ ಆಯೋಜಿಸಿದ ಬಿಸಿ ಬಿಜಿನೆಸ್ ಕರೆಸ್ಪಾಂಡೆಂಟ್ ಮುಖಾಂತರ ನೀವು ನೋಂದಣಿ ಮಾಡಿಸಬಹುದೆಂದು ತಿಳಿಸಿದರು. ಜನ ಸುರಕ್ಷಾ ಶಿಬಿರದಲ್ಲಿ ಬ್ಯಾಂಕಿನ ಸಿಬ್ಬಂದಿಗಳಾದ ಸುಖಾಂತ್, ಮಧುಸೂದನ್ ಮುಂತಾದವರು ಉಪಸ್ಥಿತರಿದ್ದರು, ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಮಹಿಳೆಯರು, ಹಿರಿಯ ನಾಗರಿಕರು ಭಾಗವಹಿಸಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಕನಕದಾಸರ ಕಂಚಿನ ಪುತ್ಥಳಿ ಲೋಕಾರ್ಪಣೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲ್ಲೂಕು ಕುರುಬರ ಸಂಘ ಹಾಗೂ ಹುಳಿಯಾರು ಹೋಬಳಿ ಕುರುಬರ ಸಂಘದಿಂದ ಹುಳಿಯಾರಿನ ಕನಕದಾಸ ಸರ್ಕಲ್‌ನಲ್ಲಿ ಶ್ರೀ ಭಕ್ತ ಕನಕದಾಸರ ಕಂಚಿನ ಪುತ್ಥಳಿಯನ್ನು ಶುಕ್ರವಾರ ಲೋಕಾರ್ಪಣೆ ಮಾಡಲಾಯಿತು.

ಬೆಳಗ್ಗೆ ಪೂರ್ಣಕುಂಭದೊಂದಿಗೆ ಶ್ರೀ ಈಶ್ವರಾನಂದಪುರಿ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ತಾಲ್ಲೂಕಿನ ಅಷ್ಠ ಮಠಗಳ ಗುರುಗಳು, ಗೌಡರುಗಳ ಸಾನಿಧ್ಯದಲ್ಲಿ ಕಂಚಿನ ಪುತ್ಥಳಿ ಪೂಜಾ ಕಾರ್ಯಗಳು ನಡೆಯಿತು. ನಂತರ ಕನಕ ಸರ್ಕಲ್‌ನಿಂದ ರಾಜಬೀದಿಗಳಲ್ಲಿ ಜನಪದ ಕಲಾತಂಡದೊಂದಿಗೆ ಮೆರವಣಿಗೆ ಮಾಡಲಾಯಿತು.

ಖ್ಯಾತ ಗಾಯಕರಾದ ಕಡಬಗೆರೆ ಮುನಿರಾಜು ತಂಡದಿಂದ ಕನಕದಾಸರ ಕೀರ್ತನೆಗಳ ಸಂಗೀತ ಕಾರ್ಯಕ್ರಮ ನಡೆಯಿತು. ವೀರಗಾಸೆ, ಡೊಳ್ಳುಕುಣಿತ, ಗೊರವಯ್ಯನ ಕುಣಿತ ಕಾರ್ಯಕ್ರಮಕ್ಕೆ ಮೆರಗು ತಂದಿತ್ತು.

ಶಾಸಕ ಸಿ.ಬಿ.ಸುರೇಶ್‌ಬಾಬು, ಚಿ.ನಾ.ಹಳ್ಳಿ ರೇವಣಸಿದ್ದೇಶ್ವರ ಮಠದ ಸಿ.ಎಂ.ಬೀರಲಿಂಗಯ್ಯ, ಸಿದ್ದೇಶ್ವರ ಮಠದ ಸಿ.ಎಂ.ರಂಗಸ್ವಾಮಯ್ಯ, ಆದಿಸಿದ್ದೇಶ್ವರ ಮಠದ



ರಾಜಣ್ಣ, ಸೇರಿದಂತೆ ವಿವಿಧ ಮಠಗಳ ಗುರುಗಳು, ಗೌಡರು ಹಾಗೂ ಕುರುಬ ಬಾಂಧವರು ಭಾಗವಹಿಸಿದ್ದರು.

# ಗೆಲ್ಲಿರಿ ಇಲ್ಲವೇ ಕಲಿಯಿರಿ

**ವಿಜಯಪುರ:** ಕ್ರೀಡೆಯಲ್ಲಿ ಗೆಲ್ಲಬೇಕು ಇಲ್ಲವೇ ಕಲಿಯಬೇಕು ಒಂದು ಗೆಲ್ಲಲು ಸಾಧ್ಯವಾಗದಿದ್ದಲ್ಲಿ ಸೋಲು ಎಂದುಕೊಳ್ಳುವುದಕ್ಕಿಂತ ನಾವು ಸೋಲಲು ಹಾಗೂ ನಮ್ಮ ಎದುರಾಳಿ ಗೆಲ್ಲಲು ನಮ್ಮಲ್ಲಿನ ಕೊರತೆ ಏನು ಎಂಬುದರ ಬಗ್ಗೆ ತಿಳಿದುಕೊಂಡು ಅವರ ಗೆಲುವಿಗಾಗಿ ಏನು ಮಾಡಿದರೂ ಎಂಬುದನ್ನು ಕಲಿಯಬೇಕಾಗಿದೆ ಎಂದು ಕರಾಟೆ ತರಬೇತುದಾರ ಹಾಗೂ ತೀರ್ಪುದಾರರಾದ ಅಲ್ತಾಫ್ ರವರು ತಿಳಿಸಿದರು.

ಅವರು ಇಲ್ಲಿನ ಗಿರಿಜಾ ಶಂಕರ ಕಲ್ಯಾಣ ಮಂಟಪದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಶಿಕ್ಷಣ ಇಲಾಖೆ ವತಿಯಿಂದ 2024-25 ನೇ ಸಾಲಿನ 14 ವರ್ಷದ ವಯೋಮಾನದ ಬಾಲಕ ಮತ್ತು ಬಾಲಕಿಯರ ರಾಜ್ಯಮಟ್ಟದ 2 ದಿನಗಳ ಕರಾಟೆ ಸ್ಪರ್ಧೆಯಲ್ಲಿ ಮುಖ್ಯ ತೀರ್ಪುಗಾರರಾಗಿ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಪಿ ಬೈಲಾಂಜನಪ್ಪ ರವರು ಮಾತನಾಡುತ್ತ ಕ್ರೀಡೆಯಲ್ಲಿ ಸೋಲು ಗೆಲುವು ಎಂಬುದಕ್ಕಿಂತ ಮುಖ್ಯವಾಗಿ ಕರಾಟೆಯನ್ನು ಎಲ್ಲಾ ಮಕ್ಕಳು ಅನುಭವಿಸಿ ಎಂಜಾಯ್ ಮಾಡಿ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪ್ರಗತಿ ಶಿಕ್ಷಣ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಕೃಪಾಶಂಕರ್ ರವರು ಮಾತನಾಡಿ ತೀರ್ಪುಗಾರರು ಉತ್ತಮ ತೀರ್ಪು ನೀಡುವುದರೊಂದಿಗೆ ದೇಶಕ್ಕೆ ಉತ್ತಮ ಕ್ರೀಡಾಪಟುಗಳು ನೀಡುವಂತೆ ಮಾಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣಾಧಿಕಾರಿ ಹನುಮನಾಯಕ್, ಜಿಲ್ಲಾ ಉಪ ನಿರ್ದೇಶಕ ಕಚೇರಿಯ ರಾಷ್ಟ್ರಪತಿ ಪ್ರಶಸ್ತಿ ವಿಜೇತ ದೈಹಿಕ ಶಿಕ್ಷಕ ಡಾ.ರಮೇಶಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಸುಮಾ, ಕ್ರೀಡ ಇಲಾಖೆಯ ಸುಧಾ, ವೆಂಕಟೇಶ್, ಪುಟ್ಟಸ್ವಾಮಿ, ನಾಗರಾಜ್, ಜಗದೀಶ್, ಕಾರ್ಯಕ್ರಮ ಆಯೋಜಕರಾದ ಎಂ ಅಕಾಡೆಮಿ ಸಂಸ್ಥಾಪಕರಾದ ಬಿ ಎಚ್ ಸಾಬೂಲಾಲ್, ಎಂ ಮುರಳಿ, ಮಹಮ್ಮದ್, ಮೌಲಾ, ವಿನೋದ್, ಅಫ್ರೋಜ್, ಮಹಮದ್ ಯೂನಿಸ್, ಎಸ್ ನೂರ್‌ಉಲ್ಲ ಮತ್ತಿತರೆ ರಾಜ್ಯದ ಎಲ್ಲೆಡೆಯಿಂದ ಆಗಮಿಸಿದ್ದ ದೈಹಿಕ ಶಿಕ್ಷಕರುಗಳು ಉಪಸ್ಥಿತರಿದ್ದರು. 33 ಶೈಕ್ಷಣಿಕ ಜಿಲ್ಲೆಗಳ 750 ಮಕ್ಕಳು ಎರಡು ದಿನಗಳ ಕಾಲ ನಡೆಯುತ್ತಿರುವ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.



# ಕನ್ನಡ ನಾಡಿಗೆ ಸಾವಿರಾರು ವರ್ಷಗಳ ಇತಿಹಾಸವಿದೆ




**ತುಮಕೂರು:** ಕನ್ನಡ ಭಾಷೆಯ ಮಹತ್ವ ಮತ್ತು ಕನ್ನಡ ಸಾಹಿತ್ಯದ ಹಿರಿಮೆ ಕನ್ನಡ ನಾಡು, ನುಡಿ ಬಗ್ಗೆ ಮಾತನಾಡುತ್ತಾ ಸಾಹಿತ್ಯಕ್ಕೆ ತುಮಕೂರು ಜಿಲ್ಲೆ ಅಪಾರವಾದ ಕೊಡುಗೆಯನ್ನು ನೀಡಿದೆ. ವಚನ ಸಾಹಿತ್ಯದ ಮೊದಲು ವಚನಗಾರ ತುಮಕೂರು ಜಿಲ್ಲೆಯವರು. ತುಮಕೂರು ಜಿಲ್ಲೆ ಸಾಹಿತ್ಯಕ್ಕೆ ಅಪಾರವಾದ ಕೊಡುಗೆಯನ್ನು ನೀಡಿರುವ ಜಿಲ್ಲೆಯಾಗಿದೆ. ಇಂತಹ ಶೈಕ್ಷಣಿಕ ಜಿಲ್ಲೆಯಲ್ಲಿ ಇಂತಹ ಕಾರ್ಯಕ್ರಮಗಳು ನಡೆಯುವ ಮೂಲಕ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಒಲವು ಮೂಡಿಸುವುದು ಹೆಮ್ಮೆ ಪಡೆಯುವಂತಹ ಕೆಲಸಗಳು ಆಗ ಬೇಕೆಂದರು. ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕ್ರಿ.ಪೂ. ದಿಂದ ಇಲ್ಲಿಯವರೆಗೆ ಉಜ್ವಲವಾದ ಸಾಹಿತ್ಯವನ್ನು ಕನ್ನಡ ನಾಡಿನಲ್ಲಿ ಕಾಣಬಹುದಾಗಿದೆ. ಕನ್ನಡವನ್ನು ಕಟ್ಟಿ ಬೆಳೆಸುವ, ಉಳಿಸುವ ಕೈಂಕರ್ಯ ಆಗಬೇಕಿದೆ ಎಂದು ಹಿರಿಯ ಸಂಶೋಧಕರು ಮತ್ತು ವಿದ್ವಾಂಸರಾದ ಡಿ.ಎ.ಯೋಗೀಶ್ವರಪ್ಪರವರು ತಿಳಿಸಿದರು.

ತುಮಕೂರು ಶೈಕ್ಷಣಿಕ ಜಿಲ್ಲೆ ಕಲ್ಪತರು ನಾಡು, ತುಮಕೂರಿನ ಹೃದಯ ಭಾಗದಲ್ಲಿರುವ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಸುವರ್ಣ ಕನ್ನಡ ಸಂಭ್ರಮ ಮಹೋತ್ಸವದ ಅಂಗವಾಗಿ ತುಮಕೂರು ಹಾಗೂ ಸುತ್ತಮುತ್ತಲಿನ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನನ್ಯ ಅಭಿಜ್ಞಾ ಭಾಷಣ ಸ್ಪರ್ಧೆಯನ್ನು ನ.28ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಅನನ್ಯ ಪದವಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಹಿರಿಯ ಸಂಶೋಧಕರು ವಿದ್ವಾಂಸರು ಡಿ.ಎ.ಯೋಗೀಶ್ವರಪ್ಪರವರು ಕಾರ್ಯಕ್ರಮವನ್ನು ತುಮಕೂರು ಜಿಲ್ಲಾ ಸಾಹಿತ್ಯ ಪರಿಷತ್‌ರವರು ಕಾರ್ಯಕ್ರಮವನ್ನು ಉದ್ವಾಟಿಸಿದ್ದರು, ಸುಮಾರು 20 ಕ್ಕೂ ಹೆಚ್ಚು ಕಾಲೇಜುಗಳಿಂದ 70 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು. ಅನನ್ಯ ಅಭಿಜ್ಞಾ ಭಾಷಣ ಸ್ಪರ್ಧೆದಲ್ಲಿ ಪ್ರಥಮ ಬಹುಮಾನ 5,000 ರೂ ಶ್ರೀಸತ್ಯಸಾಯಿ ಕಾಲೇಜಿನ ಮನ್ವಿತಗೌಡರವರು ಪಡೆದುಕೊಂಡರು. ದ್ವಿತೀಯ ಬಹುಮಾನ 3,000 ರೂ ತುಮಕೂರಿನ ಸಪ್ತಗಿರಿ ಕಾಲೇಜಿನ ಪ್ರದ್ಯಮ್ಮರವರು ಹಾಗೂ ತೃತೀಯ ಬಹುಮಾನ 1,000 ರೂ ನೆಲಮಂಗಲದ ನ್ಯೂ ಎಕ್ಸ್ಪರ್ಟ್ ಕಾಲೇಜಿನ ಶಾಂತಮ್ಮ ರವರು ಬಹುಮಾನವನ್ನು ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ವರಾನ ಗ್ಲೋಬಲ್ ಟ್ರಸ್ಟ್ ಅಧ್ಯಕ್ಷರಾದ ಚಾರ್ಟರ್ಡ್ ಅಕೌಂಟೆಂಟ್‌ನ ಎಸ್.ವಿಶ್ವನಾಥ್, ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಟಿ.ಎನ್.ಚೆನ್ನಬಸವಪ್ರಸಾದ್, ಟ್ರಸ್ಟಿಯಾದ ಡಾ.ಹೆಚ್. ಹರೀಶ್, ತುಮಕೂರಿನ ಖ್ಯಾತ ಮನೋವಿಕಾಸ ತಜ್ಞರಾದ ಸಿ.ಸಿ. ಪಾವಟೆ, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್ ಹಾಗೂ ಕಾಮರ್ಸ್ ವಿಭಾಗದ ಮುಖ್ಯಸ್ಥರಾದ ದೇವಕಿಪ್ರಸಾದ್, ಕಾರ್ಯಕ್ರಮದ ಸಂಯೋಜಕರಾದ ಅನಂತಲಕ್ಷ್ಮಿ.ಆರ್, ಸರ್ವಮಂಗಳ ಹಾಗೂ ತೀರ್ಪುಗಾರರಾದ ಮಾರುತೇಶ್ ಟಿ.ಎಸ್. ಮಾವಿನಹಳ್ಳಿ ಪಿ.ಯು.ಕಾಲೇಜು, ಅನಿತಾಲಕ್ಷ್ಮಿ ನವೋದಯ ಪಿ.ಯು. ಕಾಲೇಜು ಚಿಕ್ಕನಾಯಕನಹಳ್ಳಿ, ಲಕ್ಷ್ಮಿ ಆರ್ಯನ್ ಹೈ-ಸ್ಕೂಲ್ ಲೀನಾ, ಭಾರತ್ ಮಾತಾ ಹೈ ಸ್ಕೂಲ್ ಶಿವರಾಜ್‌ರವರು ಭಾಗವಹಿಸಿದ್ದರು ಕಾರ್ಯಕ್ರಮ ನಿರೂಪಣೆಯನ್ನು ಶ್ರೀಮತಿ ಶ್ವೇತಾರವರು ನಡೆಸಿಕೊಟ್ಟರು. ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಮುಂತಾದವರು ಉಪಸ್ಥಿತರಿದ್ದರು.

# 2024 ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳನ್ನು ನೋಂದಾಯಿಸಿಕೊಳ್ಳುವಂತೆ ಸೂಚನೆ

**ಮೈಸೂರು:** 2024 ರಲ್ಲಿ ಕರ್ನಾಟಕದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ಬೆಂಗಳೂರಿನ ಕಬ್ಬನ್ ಉದ್ಯಾನವನದಲ್ಲಿರುವ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ 01 ಜನವರಿ 2025 ರ ಸಂಜೆ 5.30 ಒಳಗಾಗಿ ನೋಂದಾಯಿಸಿಕೊಳ್ಳಬೇಕಾಗಿದ್ದು, ಸದರಿ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸುತಿಂದ ಆಯ್ಕೆಗಾಗಿ ಪರಿಗಣಿಸಲಾಗುತ್ತದೆ.

2024 ರಲ್ಲಿ ಹೊರ ರಾಜ್ಯಗಳಲ್ಲಿ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ/ ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ. ನೋಂದಣಿ ಪ್ರಮಾಣ ಪತ್ರದ ನಕಲು ಪತ್ರದ ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ ಒಂದು ಪ್ರತಿಯನ್ನು 02 ಜನವರಿ 2025 ರ ಸಂಜೆ 5.30 ರೊಳಗೆ ಆಯ್ಕೆಗಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸಬೇಕಾಗಿದ್ದು, ಸಾತ್ಯ, ಮಕ್ಕಳ ಸಾತ್ಯ, ಕಲೆ ಮತ್ತು ಜ್ಞಾನ ಪ್ರಕಾರಗಳ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸುತಿಗೆ ಸಲ್ಲಿಸಬಹುದು. ಸ್ಪರ್ಧಾತ್ಮಕ. ಪಠ್ಯ, ಪರಾಮರ್ಶನ, ಸಾಂದರ್ಭಿಕ ಮತ್ತು ಅಭಿನಂದನ ಗ್ರಂಥಗಳನ್ನು ಸ್ಥಳೀಯ ಓದುಗರ ಬೇಡಿಕೆಗೆ ಅನುಗುಣವಾಗಿ ಆಯಾ ಪ್ರಾಧಿಕಾರಗಳ ಅಧಿಕಾರಿಗಳ/ಪ್ರಾಧಿಕಾರಗಳ ವೇಚನಾ ಕೋಟಾದಡಿ ನಿಯಮಾನುಸಾರ ಬೆಲೆ ನಿಗದಿಪಡಿಸಿಕೊಂಡು ನೇರವಾಗಿ ಖರೀದಿಸಲು ಆಯ್ಕೆ ಸುತಿ ಸಭೆಯಲ್ಲಿ ನಿರ್ಣಯಸಲಾಗಿರುತ್ತದೆ.

2024ನೇ ವರ್ಷದಲ್ಲಿ ಪ್ರಕಟಗೊಂಡ ಪುಸ್ತಕಗಳ ಆಯ್ಕೆಗೆ ಪ್ರತ್ಯೇಕವಾಗಿ ಆಯುಕ್ತರ ಕಛೇರಿಯಲ್ಲಿ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ. ಆದ್ದರಿಂದ ಆಯ್ಕೆ ಸುತಿಗೆ ಆಯ್ಕೆಗಾಗಿ ಪುಸ್ತಕಗಳನ್ನು ಸಲ್ಲಿಸಲು ಇಚ್ಛಿಸುವ ಲೇಖಕರು, ಲೇಖಕ-ಪ್ರಕಾಶಕರು ಮತ್ತು ಪ್ರಕಾಶಕರು ನಿಗದಿತ ಅವಧಿಯೊಳಗೆ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಪುಸ್ತಕಗಳ ನೋಂದಣಿ ಅಧಿನಿಯಮದಡಿ ನಿಯಮಾನುಸಾರ ಪುಸ್ತಕಗಳನ್ನು ಸಲ್ಲಿಸಬೇಕು.

ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾತಿಗಾಗಿ ಇಲಾಖಾ ಅಂತರ್ಜಾಲ www.dpl.karnataka.gov.in ಮತ್ತು ರಾಜ್ಯದ ಎಲ್ಲಾ ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಪಕರು/ಮುಖ್ಯ ಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು.

ಹೆಚ್ಚಿನ ಮಾತಿಗಾಗಿ ಕಛೇರಿಯ ದೂ.ಸಂ: 080-22864990 ಮತ್ತು 22867358 ನ್ನು ಸಂಪರ್ಕಿಸಬಹುದು ಎಂದು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.04 ರಂದು ಯುವಜನೋತ್ಸವ

**ಮೈಸೂರು:** ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಸೂರು, ನೆಹರು ಯುವ ಕೇಂದ್ರ, ಮೈಸೂರು ರ್ರಾಯ ಸೇವಾ ಯೋಜನೆ, ಮೈಸೂರು ಶ್ವದ್ಯಾನಿಲಯ, ಮಹಾರಾಣಿ ಮಳಾ ಜ್ಞಾನ ಕಾಲೇಜು, ಮೈಸೂರು ಹಾಗೂ ಕರ್ನಾಟಕ ರಾಜ್ಯ ಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಮೈಸೂರು ಇವರುಗಳ ಸಹಯೋಗದಲ್ಲಿ ಡಿಸೆಂಬರ್ 4 ರಂದು ಚಾಮುಂಡಿ ಹಾರ ಕ್ರೀಡಾಂಗಣದಲ್ಲಿ ಮೈಸೂರು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ದ ಅಂಗವಾಗಿ ಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ವಿಷಯಾಧಾರಿತ ಸ್ಪರ್ಧೆಗಳು ಜ್ಞಾನ ಮೇಳ, ಕನ್ನಡ/ಆಂಗ್ಲ/ಹಿಂದಿ ಭಾಷೆಯಲ್ಲಿ ಜಾನಪದ ನೃತ್ಯ (ತಂಡ), ಜಾನಪದ ಗೀತೆ (ತಂಡ), ಜಾನಪದ ನೃತ್ಯ (ವೈಯಕ್ತಿಕ), ಜಾನಪದ ಗೀತೆ (ವೈಯಕ್ತಿಕ), ಕತೆ ಬರೆಯುವುದು (ವೈಯಕ್ತಿಕ) (1000 ಪದಗಳಿಗೆ ಮೀರದಂತೆ) ಕಥೆ ಬರೆಯುವುದು (1000 ಪದಗಳಿಗೆ ಮಿರದಂತೆ), ಚಿತ್ರಕಲೆ ಜಹಿಂದೆ ಮತ್ತು ಆಂಗ್ಲ ಭಾಷೆಯಲ್ಲಿರಬೇಕು. (ರಾಷ್ಟ್ರಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಸಲು) ಕನ್ನಡ ಭಾಷೆಯನ್ನು ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮದವರೆಗೆ ಮಾತ್ರ ಸಿಲತಗೊಳಿಸಿದೆ. ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ಕೆ ಷಯಗಳ ಬಗ್ಗೆ 3 ನಿಷಗಳ ಭಾಷಣ ಮಾಡಬೇಕು. ಗುಡಿ ಕೈಗಾರಿಕೆಯ ಕಲಾ ಪ್ರಕಾರ, ನೇಕಾರಿಕೆ/ಜವಳಿ, ಕೃ ಉತ್ಪನ್ನಗಳುಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಗಳಿಗೆ 15 ರಿಂದ 29 ವರ್ಷದೊಳಗಿನ ಯುವಕ/ಯುವತಿಯರು, ಶಾಲಾ/ಕಾಲೇಜುಗಳ ವಿದ್ಯಾರ್ಥಿ/ದ್ಯಾರ್ಥಿನಿಯರು ಮತ್ತು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ನೊಂದಾವಣೆಯಾದ ಯುವಕ ಸಂಘಗಳು, ಯುವತಿ ಮಂಡಳಿಗಳ ಪದಾಧಿಕಾರಿಗಳು ಭಾಗವಸಬಹುದಾಗಿದ್ದು, ಆಸಕ್ತರು ಡಿಸೆಂಬರ್ 04 ರಂದು ಬೆಳಿಗ್ಗೆ 9 ಗಂಟೆಗೆ ಚಾಮುಂಡಿ ಹಾರ ಕ್ರೀಡಾಂಗಣದಲ್ಲಿ ಸಂಘಟಕರಲ್ಲಿ ವರದಿ ಮಾಡಿಕೊಳ್ಳಬೇಕು. ಜಿಲ್ಲಾಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಸಿ ಪ್ರಥಮ ಸ್ಥಾನ ಪಡೆದವರು 2024-25 ನೇ ಸಾಲಿನ ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಸಲು ಅರ್ಹರಿರುತ್ತಾರೆ. ಜಿಲ್ಲಾಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಸಿ ಜೇತರಾದ ಸ್ಪರ್ಧಾಳುಗಳಿಗೆ ನಗದು ಬಹುಮಾನ ಪ್ರಶಸ್ತಿ ಪತ್ರ ಮತ್ತು ಫಲಕಗಳನ್ನು ನೀಡಲಾಗುತ್ತದೆ. ಹೆಚ್ಚಿನ ಮಾತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ದೂ.ಸಂ: 0821-2564179 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಭಾಸ್ಕರ್ ನಾಯಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡ್ರೋನ್ ತರಬೇತಿಗೆ ಅರ್ಜಿ ಆಹ್ವಾನ

**ರಾಮನಗರ:**2024-25ನೇ ಸಾಲಿಗೆ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣದಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ ಹಾಗೂ ಯುವತಿಯರಿಗೆ ಡ್ರೋನ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ತಾಲ್ಲೂಕು ಕಚೇರಿಯಲ್ಲಿ ಪಡೆದು ಭರ್ತಿಮಾಡಿ ಡಿಸೆಂಬರ್ 11 ರೊಳಗೆ ಅವಶ್ಯಕವಾದ ದಾಖಲಾತಿಗಳೊಂದಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ತಾಲ್ಲೂಕು ಇವರನ್ನು ಸಂಪರ್ಕಿಸುವಂತೆ ರಾಮನಗರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 13ರಂದು ಯೋಜನೆ ಮಾಹಿತಿ ಒದಗಿಸುವ ಕಾರ್ಯಕ್ರಮ

**ರಾಮನಗರ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಹಾಗೂ ಬೆಂಗಳೂರಿನ ಕಾಸಿಯಾ ಸಂಯುಕ್ತಾಶ್ರಯದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮವನ್ನು ಡಿಸೆಂಬರ್ 13 ರಂದು ಬೆಳಿಗ್ಗೆ 11 ಗಂಟೆಗೆ ರಾಮನಗರ ಜಿಲ್ಲಾ ಪಂಚಾಯಿತ್ ಕಟ್ಟಡದ ಮುಖ್ಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಜಡ್ಇಡಿ ಸರ್ಟಿಫಿಕೇಷನ್, ಕ್ಲಸರ್ ಡೆವಲಪ್‌ಮೆಂಟ್ ಪ್ರೋಗ್ರಾಂ ಅಂಡ್ ಎಕ್ಸ್ಪೋರ್ಟ್ ಮ್ಯಾನೇಜ್ ಮೆಂಟ್ ಮುಂತಾದ ಇಲಾಖೆಯ ಹೊಸ ಯೋಜನೆಗಳ ಬಗ್ಗೆ ಉದ್ದಿಮೆದಾರರಿಗೆ ಮಾಹಿತಿ ನೀಡಲಾಗವುದು. ರಾಮನಗರ ಜಿಲ್ಲೆಯ ಉದ್ದಿಮೆದಾರರು ಕಾರ್ಯಕ್ರಮದಲ್ಲಿ ಭಾಗವಹಿಸಿ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ.ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕರಾದ ಎಸ್. ಪ್ರಕಾಶ್ ಮೊ.ನಂ: 8884569687 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಸಮೀಕ್ಷೆ

**ರಾಮನಗರ:** ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಅನೈರ್ಮಲ್ಯ ಶೌಚಾಲಯಗಳು ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳನ್ನು ಗುರುತಿಸಲು ಇದೇ ಡಿಸೆಂಬರ್ 5 ರಿಂದ 11 ರವರೆಗೆ ಸಮೀಕ್ಷೆಯನ್ನು ಆಯೋಜಿಸಲಾಗಿದೆ. ಯಾರಾದರೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿಯಲ್ಲಿ ತೊಡಗಿದರೆ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಮೈಸೂರು:** ಹೂಟಗಳ್ಳಿ ಉಪಭಾಗ ವ್ಯಾಪ್ತಿಯ ಎನ್.ಜೆ.ವೈ ಯಾಚೇಗೌಡನಹಳ್ಳಿ ಮತ್ತು ಎಡ್ಡೆಹಳ್ಳಿ ಲಿಫ್ಟ್ ಇರಿಗೇಷನ್ ದ್ಯುತ್ ಮಾರ್ಗಗಳಲ್ಲಿ ಲಿಂಕ್ ಲೈನ್ ಕೆಲಸದ ನಿತ್ತ ಡಿಸೆಂಬರ್ 01, 03, 05, 07, 09, 11, 13 ಹಾಗೂ 15 ರಂದು ಬೆಳಗ್ಗ 10:00 ಗಂಟೆಂದ ಸಂಜೆ 5:00 ಗಂಟೆಯವರೆಗೆ ದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: ಗುಂಗ್ರಾಲ್‌ಛತ್ರ, ಯಡ್ಡಹಳ್ಳಿ, ಯಾಚೇಗೌಡನಹಳ್ಳಿ, ಹೊಸಕೋಟೆ, ದಡದಕಲ್ಲಹಳ್ಳಿ, ಛತ್ರದಕೊಪ್ಪಲು, ರಾಮೇನಹಳ್ಳಿ, ಕಲ್ಲೂರು ನಾಗನಹಳ್ಳಿ, ಕಲ್ಲೂರು, ೀನಾಕ್ಷಿಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ದ್ಯುತ್ ವ್ಯತ್ಯಯವಾಗುವುದು ಹಾಗೂ ಈ ಮೇಲ್ಕಂಡ ಪ್ರದೇಶಗಳ ವ್ಯಾಪ್ತಿಯಲ್ಲಿನ ಕೃ ಪಂಪ್ ಸೆಟ್‌ಗಳಿಗೆ ಸದರಿ ದಿನಗಳಂದು ರಾತ್ರಿ 10:00 ಗಂಟೆಂದ ಮಾರನೇ ದಿನದ ಬೆಳಿಗ್ಗೆ 10:00 ಗಂಟೆಯವರೆಗೆ 3 ಫೇಸ್ ದ್ಯುತ್ ಸರಬರಾಜು ಮಾಡಲಾಗುತ್ತಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು . ಮೊಹಲ್ಲಾ ಭಾಗದ ಕಾರ್ಯನಿರ್ವಾಹಕ ಇಂಜಿನಿಯರ್() ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

**ಮೈಸೂರು:** ಜಿಲ್ಲಾ ಸರ್ವೆಕ್ಷಣಾಧಿಕಾರಿಗಳ ಕಛೇರಿ, ಜಿಲ್ಲಾ ಎನ್.ಸಿ.ಡಿ ಕೋಶ, ಮೈಸೂರು ವತಿಂದ ಎನ್.ಪಿ-ಎನ್.ಸಿ.ಡಿ ಕಾರ್ಯಕ್ರಮದಡಿಯಲ್ಲಿ ಸಿ.ಹೆಚ್.ಸಿ ಎನ್.ಸಿ.ಡಿ ಕ್ಲಿನಿಕ್‌ಗಳಿಗೆ ಸಾದಿಲ್ವಾರುಗಳನ್ನು ಸರಬರಾಜು ಮಾಡಲು ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಮುಚ್ಚಿದ ಲಕೋಟೆಯನ್ನು ನಜರ್‌ಬಾದ್‌ನ ನಾಗಮ್ಮ ಆಸ್ಪತ್ರೆ ಅವರಣದಲ್ಲಿರುವ ಜಿಲ್ಲಾ ಎನ್.ಸಿ.ಡಿ.ಕೋಶದ ಜಿಲ್ಲಾ ಸರ್ವೆಕ್ಷಣಾಧಿಕಾರಿಗಳಿಗೆ ಡಿಸೆಂಬರ್ 05 ರ ಸಂಜೆ 4 ಗಂಟೆಯೊಳಗೆ ಸಲ್ಲಿಸುವುದು. ಸೀಲಾದ ಲಕೋಟೆಯ ಮೇಲೆ ಎನ್.ಪಿ-ಎನ್.ಸಿ.ಡಿ ಕಾರ್ಯಕ್ರಮಡಿಯಲ್ಲಿ ಸಿ.ಹೆಚ್.ಸಿ ಎನ್.ಸಿ.ಡಿ ಕ್ಲಿನಿಕ್‌ಗಳಿಗೆ ಸಾದಿಲ್ವಾರುಗಳನ್ನು ಸರಬರಾಜು ಮಾಡಲು ದರಪಟ್ಟಿಯನ್ನು ಆಹ್ವಾನಿಸುತ್ತಿರುವ ಬಗ್ಗೆ ಎಂದು ತಪ್ಪದೆ ನಮೂದಿಸುವುದು ಎಂದು ಜಿಲ್ಲಾ ಎನ್.ಸಿ.ಡಿ ಘಟಕದ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಜಿಲ್ಲಾ ಪ್ರವಾಸ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪ ಅವರು ನವೆಂಬರ್ 30 ರಂದು ಮೈಸೂರು ಜಿಲ್ಲಾ ಪ್ರವಾಸವನ್ನು ಕೈಗೊಂಡಿದ್ದು, ಅಂದು ರಾತ್ರಿ 7.30 ಗಂಟೆಗೆ ಕೆ.ಆರ್ ನಗರ ತಾಲೂಕಿನಲ್ಲಿ ನಡೆಯುವ ಚುಂಚನಕಟ್ಟೆ ಜಲಪಾತೋತ್ಸವ ಕಾರ್ಯಕ್ರಮದಲ್ಲಿ ಭಾಗವಸುವರು. ಡಿಸೆಂಬರ್ 1 ರಂದು ಬೆಳಗ್ಗೆ 11 ಗಂಟೆಗೆ ಗುರು ಮಲ್ಲೇಶ್ವರ ಮಠದ ಆವರಣದಲ್ಲಿರುವ ದೇವನೂರು ಸರ್ಕಾರಿ ಆಸ್ಪತ್ರೆಯ ಮುಂಬಾಗದಲ್ಲಿ ಏರ್ಪಡಿಸಲಾಗಿರುವ, ನಂಜನಗೂಡು ಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗುರು ಮಲ್ಲೇಶ್ವರ ಮಠದ ಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಲೋಕೋಪಯೋಗಿ ಇಲಾಖೆ ರ್ರಾಯ ಹೆದ್ದಾರಿ ಕಾಮಗಾರಿ ಎನ್.ಟಿ.ಎನ್ ರಸ್ತೆಂದ ದೊಡ್ಡಕವಲಂದೆ ಗ್ರಾಮಕ್ಕೆ ದೇವನೂರು ಗ್ರಾಮದ ಮಾರ್ಗ ಸೇರುವ ರಸ್ತೆ ಸುಧಾರಣೆ ಕಾಮಗಾರಿಯ ಉದ್ಘಾಟನೆ ಸಮಾರಂಭದಲ್ಲಿ ಭಾಗವಸಲಿದ್ದಾರೆ.

# ಅಪರಾಧಿಗಳಿಗೆ ಕಾನೂನು ಸೇವೆ ಒದಗಿಸಲು ಹೊಸ ವ್ಯವಸ್ಥೆ

**ಬೆಂಗಳೂರು:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದಲ್ಲಿ ಬಾಕಿಯಿರುವ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸಲು ಡಿಸೆಂಬರ್ 14 ರಂದು ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದ ಪ್ರಧಾನ ಸಿವಿಲ್ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಕಾನೂನು ಪ್ರಾಧಿಕಾರದ ಅಧ್ಯಕ್ಷರಾದ ಮುರಳೀಧರ್ ಪೈ ತಿಳಿಸಿದರು.

ಇಂದು ಬೆಂಗಳೂರಿನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ಮೊದಲನೇ ಮಹಡಿಯ ನ್ಯಾಯಾಲಯ ಸಭಾಂಗಣದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ ಬಾರಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದಲ್ಲಿ ಬಾಕಿಯಿದ್ದ 26,353 ಪ್ರಕರಣಗಳು ಹಾಗೂ 3,66,241 ವ್ಯಾಜ್ಯ ಪೂರ್ವ ಪ್ರಕರಣಗಳು, ಒಟ್ಟು 3,92,594 ಪ್ರಕರಣಗಳನ್ನು ತೀರ್ಮಾನ ಮಾಡಲಾಗಿದೆ. ಪ್ರಸ್ತುತ ಬೆಂಗಳೂರು ನಗರ ಜಿಲ್ಲೆಯಲ್ಲಿ 3,89,520 ಪ್ರಕರಣಗಳು ಬಾಕಿಯಿವೆ. ಈ ಬಾರಿ 35 ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ತೀರ್ಮಾನಿಸಲು ಪ್ರಯತ್ನಿಸಲಾಗುವುದು ಎಂದರು.

ಕಾನೂನು ಸೇವೆಗಳ ಪ್ರಾಧಿಕಾರದಿಂದ, ಜೈಲಿನಲ್ಲಿರುವ ಅಪರಾಧಿಗಳಿಗೆ ಕಾನೂನು ಸೇವೆ ಒದಗಿಸಲು ಹೊಸ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಪ್ರಕರಣಗಳನ್ನು ನಡೆಸಲು ತೊಂದರೆ ಅನುಭವಿಸುತ್ತಿರುವ ಅಪರಾಧಿಗಳು ನ್ಯಾಯಾಲಯದ ಗಮನಕ್ಕೆ ತಂದು, ಕಾನೂನು ಪ್ರಾಧಿಕಾರದಿಂದ ವಕೀಲರ ಉಚಿತ ಕಾನೂನು ಸೇವೆ ಪಡೆಯಬಹುದಾಗಿದೆ. ಆದಷ್ಟು ಶೀಘ್ರವಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮವಹಿಸಲಾಗುವುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಾದ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವೈವಾಹಿಕ, ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇದನಗಳನ್ನು ಹೊರತುಪಡಿಸಿ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ಚೆಕ್ಕು ಅಮಾನ್ಯದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು ಮತ್ತು ರಾಜಿಯಾಗಬಲ್ಲ ಸಿವಿಲ್ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಉಚಿತ ಸೇವೆಗಳನ್ನು ಪಡೆಯಲು ಓಂಐಖಂ (ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ) ಅವರು ಸಹಾಯವಾಣಿ ಸಂಖ್ಯೆ ಅಭಿವೃದ್ಧಿಪಡಿಸಿದ್ದು, ಸಹಾಯವಾಣಿ ಸಂಖ್ಯೆ 15100 ಗೆ ಕರೆ ಮಾಡಿ ದೇಶದ ಯಾವುದೇ ಭಾಗದ ಸಾರ್ವಜನಿಕರು ಯಾವುದೇ ಭಾಷೆಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ. ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

# 14ರಂದು ರಾಷ್ಟ್ರೀಯ ಲೋಕ್ ಅದಾಲತ್

**ಬೆಂಗಳೂರು:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದಲ್ಲಿ ಬಾಕಿಯಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಡಿಸೆಂಬರ್ 14 ರಂದು ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗುವುದು ಎಂದು ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದ ಗೌರವಾನಿತ್ವ ಪ್ರಧಾನ ಸಿವಿಲ್ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಕಾನೂನು ಪ್ರಾಧಿಕಾರದ ಅಧ್ಯಕ್ಷರಾದ ಮುರಳೀಧರ್ ಪೈ ತಿಳಿಸಿದರು.




ಇಂದು ಬೆಂಗಳೂರಿನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ಮೊದಲನೇ ಮಹಡಿಯ ನ್ಯಾಯಾಲಯ ಸಭಾಂಗಣದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬೆಂಗಳೂರು ನಗರ ಸಿವಿಲ್ ನ್ಯಾಯಾಲಯದಲ್ಲಿ 26,353 ಬಾಕಿಯಿರುವ ಪ್ರಕರಣಗಳು, 3,66,241 ವ್ಯಾಜ್ಯ ಪೂರ್ವ ಪ್ರಕರಣಗಳು, ಒಟ್ಟು 3,92,594 ಪ್ರಕರಣಗಳನ್ನು ತೀರ್ಮಾನಿಸಲಾಗುವುದು. ಈ ಬಾರಿ 35 ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ಇತ್ಯರ್ಥ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದರು.

ಕಾನೂನು ಸೇವೆಗಳ ಪ್ರಾಧಿಕಾರದಿಂದ, ಜೈಲಿನಲ್ಲಿರುವ ಅಪರಾಧಿಗಳಿಗೆ ಕಾನೂನು ಸೇವೆ ಒದಗಿಸಲು ಹೊಸ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ. ಪ್ರಕರಣಗಳನ್ನು ನಡೆಸಲು ತೊಂದರೆ ಅನುಭವಿಸುತ್ತಿರುವ ಅಪರಾಧಿಗಳು ನ್ಯಾಯಾಲಯದ ಗಮನಕ್ಕೆ ತಂದು, ಕಾನೂನು ಪ್ರಾಧಿಕಾರದಿಂದ ವಕೀಲರ ಉಚಿತ ಕಾನೂನು ಸೇವೆ ಪಡೆಯಬಹುದಾಗಿದೆ. ಆದಷ್ಟು ಶೀಘ್ರವಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮವಹಿಸಲಾಗುವುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಲೋಕ್ ಅದಾಲತ್ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಾದ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ವೈವಾಹಿಕ, ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇದನಗಳನ್ನು ಹೊರತುಪಡಿಸಿ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ಚೆಕ್ಕು ಅಮಾನ್ಯದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು ಮತ್ತು ರಾಜಿಯಾಗಬಲ್ಲ ಸಿವಿಲ್ ಪ್ರಕರಣಗಳನ್ನು ಈ ಲೋಕ್ ಅದಾಲತ್ ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಉಚಿತ ಸೇವೆಗಳನ್ನು ಪಡೆಯಲು ಓಐಖಂ (ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ) ಅವರು ಸಹಾಯವಾಣಿ ಸಂಖ್ಯೆ ಅಭಿವೃದ್ಧಿಪಡಿಸಿದ್ದು, ಸಹಾಯವಾಣಿ ಸಂಖ್ಯೆ 15100 ಗೆ ಕರೆ ಮಾಡಿ ದೇಶದ ಯಾವುದೇ ಭಾಗದ ಸಾರ್ವಜನಿಕರು ಯಾವುದೇ ಭಾಷೆಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ. ಲೋಕ್ ಅದಾಲತ್ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ವರದರಾಜು.ಬಿ. ಉಪಸ್ಥಿತರಿದ್ದರು.

# ಶಾಲಾ ಪರೀಕ್ಷೆ, ಮೌಲ್ಯನಿರ್ಣಯ ಮಂಡಳಿ ಅಧ್ಯಕ್ಷರಿಂದ ಸ್ಪಷ್ಟೀಕರಣ

**ಬೆಂಗಳೂರು:** 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪ್ರಶ್ನೆಪತ್ರಿಕೆಯ ವಿನ್ಯಾಸದಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯು ಮಹತ್ವದ ಬದಲಾವಣೆ ಮಾಡಿರುವುದಾಗಿ ದಿನಪತ್ರಿಕೆಗಳಲ್ಲಿ ಸುದ್ದಿ ಪ್ರಕಟವಾಗಿರುತ್ತದೆ. ಆದರೆ 2024-25ನೇ ಸಾಲಿನ ಪ್ರಶ್ನೆಪತ್ರಿಕೆಯ ವಿನ್ಯಾಸದಲ್ಲಿ ಮಂಡಳಿಯು ಯಾವುದೇ ಬದಲಾವಣೆ ಮಾಡಿರುವುದಿಲ್ಲ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಅಧ್ಯಕ್ಷರು ತಿಳಿಸಿದ್ದಾರೆ.

ಮುಂದಿನ ಶೈಕ್ಷಣಿಕ ವರ್ಷದಲ್ಲಿ ವಿಷಯ ತಜ್ಞರ ಸಮಿತಿ ರಚಿಸಿ, ಸದರಿ ಸಮಿತಿ ನೀಡುವ ವರದಿಯಂತೆ ಕ್ರಮವಹಿಸಲಾಗುವುದು. ಹಾಗಾಗಿ ಈ ಸಾಲಿನ ಪ್ರಶ್ನೆಪತ್ರಿಕೆಯ ವಿನ್ಯಾಸದಲ್ಲಿ ಯಾವುದೇ ಬದಲಾವಣೆ ಇಲ್ಲದೆ ಕಳೆದ ಸಾಲಿನಂತೆಯೇ ಮುಂದುವರಿಸಲಾಗಿದ್ದು, ಸದ್ಯದಲ್ಲೇ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗುವುದು.

ಈ ಕುರಿತು ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು ಯಾವುದೇ ಗೊಂದಲ ಹಾಗೂ ಆತಂಕಕ್ಕೆ ಒಳಗಾಗಬಾರದು ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಅಧ್ಯಕ್ಷರು ಸ್ಪಷ್ಟೀಕರಣ ನೀಡಿದ್ದಾರೆ.

# ಸಂವಿಧಾನ ದಿನಾಚರಣೆ ಸಂಪನ್ನ

**ರಾಮನಗರ:** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ರಾಮನಗರ ಗೌಸಿಯಾ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ನ. 26 ರಂದು ಗೌಸಿಯಾ ಪದವಿ ಪೂರ್ವ ಕಾಲೇಜಿನಲ್ಲಿ ಸಂವಿಧಾನ ದಿನಾಚರಣೆ-2024 ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ. ಪಿ.ಆರ್., ಗೌಸಿಯಾ ಪ್ರಿ ಯೂನಿವರ್ಸಿಟಿ ಕಾಲೇಜಿನ ಪ್ರಾಂಶುಪಾಲರಾದ ನಜರುಲ್ಲಾ ಖಾನ್, ರಾಮನಗರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಬಿ.ಎಂ. ಶ್ರೀವತ್ಸ ಹಾಗೂ ಇತರರು ಉಪಸ್ಥಿತರಿದ್ದರು.



# ಡಿ. 6ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ, ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ

**ರಾಮನಗರ:** ಇಲ್ಲಿನ ಕೃಷಿ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಸಿರಿಧಾನ್ಯ ಮತ್ತು ಸಾವಯವ ವಾಣಿಜ್ಯ ಮೇಳ 2025ರ ಅಂಗವಾಗಿ ರಾಜ್ಯ ಮಟ್ಟದ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಇದೇ ಡಿಸೆಂಬರ್ 6ರ ಶುಕ್ರವಾರ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಸ್ಪರ್ಧೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ. ಭಾಗವಹಿಸಲು ಇಚ್ಛಿಸುವ ಅಭ್ಯರ್ಥಿಗಳು ಜಂಟಿ ಕೃಷಿ ನಿರ್ದೇಶಕರ ಕಚೇರಿ, ನಂ.302, 3ನೇ ಮಹಡಿ, ಜಿಲ್ಲಾ ಪಂಚಾಯತ್ ಭವನ, ರಾಮನಗರ ಇಲ್ಲಿ ತಮ್ಮ ಹೆಸರು, ವಿಳಾಸ, ಆಧಾರ್ ಗುರುತಿನ ಚೀಟಿಯ ಪ್ರತಿ ಮತ್ತು ತಯಾರಿಸುವ ಖಾದ್ಯದ ಬಗ್ಗೆ ಮಾಹಿತಿಯನ್ನು ನೀಡಿ, ಡಿಸೆಂಬರ್ 5ರ ಸಂಜೆ 5.30ರೊಳಗಾಗಿ ತಪ್ಪದೇ ನೋಂದಣಿ ಮಾಡಿಕೊಳ್ಳಲು ಸೂಚಿಸಿದೆ. ನಂತರದಲ್ಲಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರತಿ ಸ್ಪರ್ಧಿಗೆ ಒಂದೇ ಸಸ್ಯಹಾರಿ ತಿನಿಸು (ಸಿಹಿ ಅಥವಾ ಖಾರ ಅಥವಾ ಮರೆತುಹೋದ ಖಾದ್ಯ-ಲ್ಯಾಂಡ್ ರೇಸಸ್ ಪ್ರಾಡಕ್ಟ್) ತಯಾರಿಸಲು ಅವಕಾಶವಿರುತ್ತದೆ. ನೋಂದಣಿಯಲ್ಲಿ ನಮೂದಿಸಿದ ತಿನಿಸನ್ನು ಮನೆಯಲ್ಲಿಯೇ ತಯಾರಿಸಿ ರಾಮನಗರ ಜಿಲ್ಲಾ ಪಂಚಾಯಿತಿ ಭವನ ಆವರಣದ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರದಲ್ಲಿ ಡಿಸೆಂಬರ್ 6ರಂದು ಬೆಳಿಗ್ಗೆ 10 ಗಂಟೆಗೆ ಪ್ರದರ್ಶಿಸಬೇಕು. ಜಿಲ್ಲಾ ಮಟ್ಟದಲ್ಲಿ ಸಿಹಿ ತಿನಿಸು, ಖಾರ ತಿನಿಸು (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಮರೆತುಹೋದ ಖಾದ್ಯಗಳ ತಿನಿಸಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವಾಗಿ ತಲಾ 5,000 ರೂ.ಗಳು, 3,000 ರೂ.ಗಳು ಹಾಗೂ 2,000 ರೂ.ಗಳನ್ನು ನೀಡಲಾಗುತ್ತದೆ. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದವರು, ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಖಾದ್ಯವನ್ನು ತಯಾರಿಸಲು ಬೇಕಾಗುವ ಸಾಮಗ್ರಿಗಳೊಂದಿಗೆ ಕಡ್ಡಾಯವಾಗಿ ಭಾಗವಹಿಸಬೇಕಾಗುತ್ತದೆ. ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಜಂಟಿ ಕೃಷಿ ನಿರ್ದೇಶಕರ ಕಚೇರಿ, ದೂ. ಸಂಖ್ಯೆ: 080-27273779, 9113058988, 8867448527, 8277932413 ಅನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನಪದ ಕಲೆಗಳು ಉಳಿಯಬೇಕಿದೆ: ಅನಿತಾ

**ರಾಮನಗರ:** ಇಂದಿನ ಯುವ ಪೀಳಿಗೆಗೆ ದೇಸಿಯ ಜನಪದ ಕಲೆಗಳ ಬಗ್ಗೆ ಇನ್ನಷ್ಟು ಅರಿವು ಮೂಡಿಸುವುದು ಯುವಜನೋತ್ಸವದ ಉದ್ದೇಶ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ ಅವರು ತಿಳಿಸಿದರು.

ಅವರು ನ. 29ರ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಹಾಗೂ ಎನ್.ಎಸ್.ಎಸ್. ಘಟಕದ ವತಿಯಿಂದ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದ್ದ ರಾಮನಗರ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷವೂ ಯುವಜನೋತ್ಸವವನ್ನು ಆಚರಿಸಲಾಗುತ್ತದೆ, ಆ ಮೂಲಕ ಯುವ ಪೀಳಿಗೆಯಲ್ಲಿ ಅಡಗಿರುವ ಜನಪದ ನೃತ್ಯದಂತಹ ಕಲೆಗಳು, ಹಾಡುಗಾರಿಕೆ, ಚಿತ್ರಕಲೆಯ ಪ್ರತಿಭೆಯನ್ನು ಪ್ರೋತ್ಸಾಹಿಸಿ ಬೆಳೆಸುವುದಾಗಿದೆ ಎಂದರು.

ಮೊಬೈಲ್ ಸಂಸ್ಕೃತಿಯಿಂದಾಗಿ ಯುವಜನತೆಯಲ್ಲಿ ಜನಪದ ಕಲಾಪ್ರಕಾರಗಳಲ್ಲಿ ಭಾಗವಹಿಸುವಿಕೆ ಕಡಿಮೆಯಾಗುತ್ತಿದೆ. ಈ ಕಾರ್ಯಕ್ರಮದ ಪ್ರಯೋಜನವನ್ನು ಪ್ರತಿಯೊಬ್ಬ ಯುವಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ವಿವಿಧ ಶಾಲಾ - ಕಾಲೇಜು ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳ ಭಾಗವಹಿಸಿದರು. ಕಾರ್ಯಕ್ರಮದಲ್ಲಿ ನೆಹರು ಯುವಕೇಂದ್ರದ ಸಹಾಯಕ ನಿರ್ದೇಶಕರಾದ ಶ್ರೀವಾಣಿ, ಜಾನಪದ ಲೋಕದ ಕ್ಯೂರೇಟರ್ ಡಾ. ರವಿ ಯು.ಎಂ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.



# ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ನೌಕರರ ಅಂತರ ನಿಗಮ ವರ್ಗಾವಣೆ ಪಟ್ಟಿ ಪ್ರಕಟ

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ರ 1,308 ನೌಕರರು ಅಂತರ ನಿಗಮ ವರ್ಗಾವಣೆಗೆ ಅವರ ಕೋರಿಕೆ ಮೇರೆಗೆ ಅರ್ಹರಿರುತ್ತಾರೆ. ಈ ಸಂಭವನೀಯ ಅಂತರ ನಿಗಮ ವರ್ಗಾವಣೆ ಪಟ್ಟಿಯನ್ನು ನವೆಂಬರ್ 28 ರಂದು ನಿಗಮದ ವೆಬ್‌ಸೈಟ್ ಇಡಿಣಛಿ.ಇಚಿಡಿಟಿಚಿಣಚಿಞಚಿ. ರಠತ.ಟಿ ನಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಿಬ್ಬಂದಿ ಮತ್ತು ಜಾಗೃತ ವಿಭಾಗದ ನಿರ್ದೇಶಕರು ತಿಳಿಸಿದ್ದಾರೆ. ಈ ಪಟ್ಟಿಗೆ ಸಂಬಂಧಿಸಿದಂತೆ ಡಿಸೆಂಬರ್ 4 ರ ಸಂಜೆ 5.30 ರವರೆಗೆ ಲಿಖಿತ ಆಕ್ಷೇಪಣೆ ಸಲ್ಲಿಸಲು ನೌಕರರಿಗೆ ಅವಕಾಶವನ್ನು ನೀಡಲಾಗಿದೆ. ನೌಕರರು ಆಕ್ಷೇಪಣೆಗಳನ್ನು ಕಡ್ಡಾಯವಾಗಿ ಸಂಬಂಧಪಟ್ಟ ವಿಭಾಗದ ಆಡಳಿತಾಧಿಕಾರಿಗಳಿಗೆ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ನೌಕರರು ವೈಯಕ್ತಿಕವಾಗಿ ಅಥವಾ ಅಂಚೆಯ ಮೂಲಕ ಕೇಂದ್ರಕಛೇರಿಗೆ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಅಂತರ ನಿಗಮ ವರ್ಗಾವಣೆಯಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸಿದ್ದು, ಇದೇ ಪ್ರಥಮ ಬಾರಿಗೆ ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ನೌಕರರು ಹಾಗೂ ತೀವ್ರ ತರಹದ ಅನಾರೋಗ್ಯ (ಹೃದಯ ರೋಗ, ಕ್ಯಾನ್ಸರ್, ಸ್ಪೈನಲ್‌ಕಾರ್ಡ್, ಕಿಡ್ನಿ ವೈಫಲ್ಯ ಹಾಗೂ ಮೆದಳು ಸಂಬಂಧಿಸಿದ ಖಾಯಿಲೆಗಳು) ನೌಕರರ ಪ್ರಕರಣಗಳಿಗೆ ಅಂತರ ನಿಗಮ ವರ್ಗಾವಣೆಯ ಶೇ. 5 ರಷ್ಟು ಹುದ್ದೆಗಳನ್ನು ಮೀಸಲಿರಿಸಲಾಗಿದೆ.

ನೌಕರರ ಪತಿ ಅಥವಾ ಪತ್ನಿಯು ಕೇಂದ್ರ ಸರ್ಕಾರ / ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ / ರಾಜ್ಯ ಸರ್ಕಾರದ ಸ್ವಾಮ್ಯದ ಸಂಸ್ಥೆಯ ಅಧಿಕಾರಿ/ನೌಕರರಾಗಿ ಬೇರೆ ಬೇರೆ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕರಣಗಳಿಗೆ ಅಂತರ ನಿಗಮ ವರ್ಗಾವಣೆಯ ಶೇ.5 ರಷ್ಟು ಹುದ್ದೆಗಳನ್ನು ಮೀಸಲಿರಿಸಿದ್ದು, ಒಟ್ಟು ಶೇಡಕ 10 ರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆ.

ಅಂತರ ನಿಗಮ ಸಾಮಾನ್ಯ ವರ್ಗದಡಿ ವರ್ಗಾವಣೆಗೊಂಡ ನೌಕರರು - 1175, ನೌಕರರ ಪತಿ ಅಥವಾ ಪತ್ನಿಯು ಕೇಂದ್ರ ಸರ್ಕಾರ / ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ / ರಾಜ್ಯ ಸರ್ಕಾರದ ಸ್ವಾಮ್ಯದ ಸಂಸ್ಥೆಯ ಅಧಿಕಾರಿ / ನೌಕರರಾಗಿ ಬೇರೆ ಬೇರೆ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕರಣಗಳನ್ನು ಪರಿಗಣಿಸಿ ವರ್ಗಾವಣೆ ಗೊಂಡಿರುವ ನೌಕರರು - 72, ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ನೌಕರರು ತೀವ್ರ ತರಹದ ಅನಾರೋಗ್ಯ (ಹೃದಯರೋಗ, ಕ್ಯಾನ್ಸರ್, ಸ್ಪೈನಲ್‌ಕಾರ್ಡ್, ಕಿಡ್ನಿ ವೈಫಲ್ಯ ಹಾಗೂ ಮೆದಳು ಸಂಬಂಧಿಸಿದ ಖಾಯಿಲೆಗಳು) ಪ್ರಕರಣದಲ್ಲಿ ನೌಕರರ ಕೋರಿಕೆ ಪರಿಗಣಿಸಿ ವರ್ಗಾವಣೆ ಗೊಂಡಿರುವ ನೌಕರರು 61 ಸೇರಿ ಒಟ್ಟು 1308 ನೌಕರರು ಸಂಭವನೀಯ ಅಂತರ ನಿಗಮ ವರ್ಗಾವಣೆ ಪಟ್ಟಿಯಲ್ಲಿದಾ ಇ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ಬೆಂಗಳೂರಿನ ಮಡಿವಾಳದಲಿ ಪ್ರಯಾಣಿಕರಿಗಾಗಿ ಹೊಸ ಲಾಂಜ್ ಪ್ರಾರಂಭಿಸಿದ ಫ್ಲಿಕ್‌ಬಸ್




ಇಂಟರ್ಸಿಟಿ ಬಸ್ ಪ್ರಯಾಣದಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಫ್ಲಿಕ್ಸ್‌ಬಸ್, ಬೆಂಗಳೂರಿನ ಮಡಿವಾಳದಲ್ಲಿ ತನ್ನ ಹೊಸ ಗ್ರಾಹಕರ ವಿಶ್ರಾಂತಿ ಕೋಣೆಯನ್ನು ತೆರೆಯುವುದಾಗಿ ಘೋಷಿಸಿತು. ಈ ಮೂಲಕ ದಕ್ಷಿಣ ಭಾರತದಲ್ಲಿ ಪ್ರಯಾಣದ ಅನುಭವಗಳನ್ನು ಇನ್ನಷ್ಟು ಸುಖಕರಗೊಳಿಸುವ ತನ್ನ ಬದ್ಧತೆಯನ್ನು ಮತ್ತಷ್ಟು ಹೆಚ್ಚಿಸಿತು. 27ನೇ ನವೆಂಬರ್ 2024 ರಿಂದ, ಈ 30 ಆಸನಗಳ ವಿಶ್ರಾಂತಿ ಕೋಣೆ ತನ್ನ ಕಾರ್ಯಾಚರಣೆಯನ್ನು ಪ್ರಾರಂಭಿಸಿತು. ಈ ಲಾಂಜ್ ಗ್ರಾಹಕರಿಗೆ ಆರಾಮದಾಯಕ ಮತ್ತು ಸುರಕ್ಷಿತ ಕಾಯುವ ಪ್ರದೇಶವನ್ನು ಒದಗಿಸುವ ಗುರಿಯನ್ನು ಹೊಂದಿದ್ದು, ಫ್ಲಿಕ್ಸ್‌ಬಸ್ ಮಾರ್ಗಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಬೋರ್ಡಿಂಗ್ ಅನುಭವವನ್ನು ಆರಾಮದಾಯಕವಾಗಿರಸಲಿದೆ. ಈ ಕುರಿತು ಪ್ರತಿಕ್ರಿಯಿಸಿದ ಫ್ಲಿಕ್ಸ್‌ಬಸ್ ಇಂಡಿಯಾದ, ವ್ಯವಸ್ಥಾಪಕ ನಿರ್ದೇಶಕ, ಸೂರ್ಯ ಖುರಾನಾ, ''ದಕ್ಷಿಣ ಭಾರತ, ಅದರಲ್ಲೂ ವಿಶೇಷವಾಗಿ ಬೆಂಗಳೂರು ಫ್ಲಿಕ್ಸ್‌ಬಸ್‌ಗೆ ದೊಡ್ಡ ಮತ್ತು ಕ್ರಿಯಾತ್ಮಕ ಮಾರುಕಟ್ಟೆಯಾಗಿದೆ. ನಮ್ಮ ಮಡಿವಾಳ ವಿಶ್ರಾಂತಿ ಕೋಣೆಯನ್ನು ಪ್ರಾರಂಭಿಸುವುದರೊಂದಿಗೆ, ಇಂಟರ್ಸಿಟಿ ಪ್ರಯಾಣದಲ್ಲಿ ನಮ್ಮ ಜಾಗತಿಕ ಗುಣಮಟ್ಟವನ್ನು ಕಾಯ್ದುಕೊಳ್ಳುವುದರೊಂದಿಗೆ, ಈ ಪ್ರದೇಶದಲ್ಲಿ ಉತ್ತಮ-ಗುಣಮಟ್ಟದ, ಗ್ರಾಹಕ-ಕೇಂದ್ರಿತ ಪ್ರಯಾಣ ಪರಿಹಾರಗಳನ್ನು ತಲುಪಿಸುವ ನಮ್ಮ ಬದ್ಧತೆಯನ್ನು ನಾವು ಪುನರುಚ್ಚರಿಸುತ್ತಿದ್ದೇವೆ. ಈ ಉಪಕ್ರಮವು ನಮ್ಮ ಪ್ರಯಾಣಿಕರ ಬೋರ್ಡಿಂಗ್ ಅನುಭವವನ್ನು ಮರು-ವ್ಯಾಖ್ಯಾನಿಸುವುದಲ್ಲದೇ, ಅವರು ತಮ್ಮ ಪ್ರಯಾಣವನ್ನು ಪ್ರಾರಂಭಿಸಿದಾಗ ಅವರಿಗೆ ಖಚಿತತೆ ಜೊತೆಗೆ ಭದ್ರತೆಯನ್ನು ನೀಡುತ್ತದೆಂದು ನಾವು ನಂಬುತ್ತೇವೆ.

## ಮಟನ್ ಕೈಮಾ ಉಂಡೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮಟನ್ ಕೈಮಾ ಅರ್ಧ ಕೆಜಿ, ಈರುಳ್ಳಿ-2, ಟಮೋಟೋ-1, ಬೆಳ್ಳುಳ್ಳಿ-1, ಶುಂಠಿ ಸ್ವಲ್ಪ, ಹುರಿಗಡಲೆ-2 ಚಮಚ, ತುರಿದ ತೆಂಗಿನಕಾಯಿ ಅರ್ಧ ಕಪ್, ಹಸಿ ಮೆಣಸಿನಕಾಯಿ-4, ಚಕ್ಕೆ-2, ಲವಂಗ-4, ಕಾಳು ಮೆಣಸು-10, ಧನಿಯಾ ಪುಡಿ- ಅರ್ಧ ಚಮಚ, ಅರಿಶಿಣ-1 ಚಮಚ, ಅಡುಗೆ ಎಣ್ಣೆ ಸ್ವಲ್ಪ, ಮೊಟ್ಟೆ-1

### ಮಾಡುವ ವಿಧಾನ

ಮೇಲೆ ತಿಳಿಸಿರುವ ಎಲ್ಲಾ ಮಸಾಲೆ ಪದಾರ್ಥಗಳನ್ನು ಚೆನ್ನಾಗಿ ರುಬ್ಬಿಕೊಳ್ಳಿ. ಈ ಮಸಾಲೆಯಲ್ಲಿ ಸ್ವಲ್ಪ ತೆಗೆದಿಟ್ಟುಕೊಳ್ಳಿ,

ನಂತರ ಜಾರ್ ಗೆ ಮಟನ್ ಕೈಮಾ ಹಾಕಿ ರುಬ್ಬಿಕೊಳ್ಳಿ, ಮಸಾಲೆ ಮತ್ತು ಕೈಮಾ ಎರಡನ್ನು ಒಟ್ಟಿಗೆ ಹಾಕಿ ರುಬ್ಬಿ, ನಂತರ ಅದಕ್ಕೆ ಮೊಟ್ಟೆ ಒಡೆದು ಕಲೆಸಿ, ಅದಾದ ನಂತರ ಬೇಕಾದ ಗಾತ್ರಕ್ಕೆ ಉಂಡೆ ಮಾಡಿಕೊಳ್ಳಿ,

ಇದಾದ ನಂತರ ಬೇರೊಂದು ಬಾಣಲೆಗೆ ಎಣ್ಣೆ ಹಾಕಿ ಈರುಳ್ಳಿ ಮತ್ತು ಟಮೋಟೋ ಹಾಕಿ ಬಾಡಿಸಿಕೊಳ್ಳಿ, ಅದಕ್ಕೆ ರುಬ್ಬಿದ ಮಿಶ್ರಣ ಸೇರಿಸಿ ಹಸಿ ವಾಸನೆ ಹೋಗುವವರೆಗೂ ಹುರಿಯಿರಿ, ಚೆನ್ನಾಗಿ ಕುದಿ ಬಂದ ನಂತರ, ಅದಕ್ಕೆ ಕೈಮಾ ಉಂಡೆಗಳನ್ನು ಹಾಕಿ ಬೇಯಿಸಿ, ಸುಮಾರು ಅರ್ಧ ಗಂಟೆ ಬೇಯಿಸಿ, ಕೊನೆಯಲ್ಲಿ ಕೊತ್ತಂಬರಿ ಸೊಪ್ಪು ಹಾಕಿ. ಚಪಾತಿ ಮತ್ತು ಅನ್ನದ ಜೊತೆ ಬಡಿಸಿ.

## ವಿರಾಟ್ ಹಾಗೂ ಅನುಷ್ಕಾ ಬೇರೆ ದೇಶದಲ್ಲಿ ನೆಲೆಯೂರುತ್ತಿರುವುದೇಕೆ ಗೊತ್ತೇ?



ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ರಾಬಿನ್ ಉತ್ತಪ್ಪ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿ ವರ್ಷಗಳು ಕಳೆದಿವೆ. 2006ರಲ್ಲಿ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ಪದಾರ್ಪಣೆ ಮಾಡಿದ ಉತ್ತಪ್ಪ 2015ರಲ್ಲಿ ಟೀಂ ಇಂಡಿಯಾ ಪರ ಕೊನೆಯ ಬಾರಿ ಆಡಿದ್ದರು. ಆ ಬಳಿಕ ರಾಷ್ಟ್ರೀಯ ತಂಡದಲ್ಲಿ ಅವಕಾಶ ಸಿಗಲಿಲ್ಲ. ಐಪಿಎಲ್‌ನಲ್ಲಿ ಮುಂದುವರಿದ ಉತ್ತಪ್ಪ, ಸೆಪ್ಟೆಂಬರ್ 2022 ರಲ್ಲಿ ಎಲ್ಲಾ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳಿದರು. ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ ನಂತರ ಉತ್ತಪ್ಪ ಕಾಮೆಂಟೇಟರ್ ಆಗಿ ಕಾಣಿಸಿಕೊಂಡಿದ್ದಾರೆ. ಇದೇ ವೇಳೆ ಪಾಡ್ ಕಾಸ್ಟ್ ನಲ್ಲಿ ಮಾತನಾಡಿದ ಉತ್ತಪ್ಪ.. ಭಾರತ ಬಿಟ್ಟು ದುಬೈನಲ್ಲಿ ನೆಲೆಸಿದ್ದಕ್ಕೆ ಕಾರಣ ಹೇಳಿ ಎಲ್ಲರನ್ನೂ ಅಚ್ಚರಿಗೊಳಿಸಿದರು. ರಾಬಿನ್ ಉತ್ತಪ್ಪ ಕಳೆದ ಒಂದು ವರ್ಷದಿಂದ ದುಬೈನಲ್ಲಿ ಕುಟುಂಬ ಸಮೇತ ಶಾಶ್ವತವಾಗಿ ನೆಲೆಸಿದ್ದಾರೆ. ಆದರೆ, ಉತ್ತಪ್ಪ ಭಾರತವನ್ನು ಸಂಪೂರ್ಣವಾಗಿ ತೊರೆಯಲಿಲ್ಲ. ಉತ್ತಪ್ಪ ಆಗಾಗ್ಗೆ ದೇಶಾದ್ಯಂತ ವಿವಿಧ ಲೀಗ್ ಗಳಲ್ಲಿ ಭಾಗವಹಿಸುತ್ತಿದ್ದಾರೆ. ಇದಲ್ಲದೇ ಕ್ರೀಡಾ ವಾಹಿನಿಗಳಲ್ಲಿ ಕಾಮೆಂಟೇಟರ್ ಆಗಿಯೂ ಕೆಲಸ ಮಾಡುತ್ತಿದ್ದಾರೆ. ಪಾಡ್‌ಕಾಸ್ಟ್‌ನಲ್ಲಿ ಮಾತನಾಡಿದ ಉತ್ತಪ್ಪ ಅವರು ತಮ್ಮ ಕುಟುಂಬದೊಂದಿಗೆ ದುಬೈನಲ್ಲಿ ಉಳಿಯಲು ಕಾರಣವನ್ನು ವಿವರಿಸಿದರು. ಇಲ್ಲಿನ ಟ್ರಾಫಿಕ್‌ನಿಂದ ಮಕ್ಕಳಿಗೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಬೆಂಗಳೂರಿನಿಂದ ದುಬೈನಲ್ಲಿ ನೆಲೆಸಿದ್ದೇನೆ ಎಂದು ರಾಬಿನ್ ಉತ್ತಪ್ಪ ಪಾಡ್‌ಕಾಸ್ಟ್‌ನಲ್ಲಿ ಹೇಳಿದ್ದಾರೆ. ನನ್ನ ಮಕ್ಕಳನ್ನು ಅರ್ಧದಷ್ಟು ಜೀವನವನ್ನು ಟ್ರಾಫಿಕ್‌ನಲ್ಲಿ ಕಳೆಯುವ ಜಾಗಕ್ಕೆ ಹಾಕುವುದು ಸರಿಯಲ್ಲ ಎಂಬ ಕಾರಣಕ್ಕೆ ನಾನು ಬೆಂಗಳೂರು ತೊರೆದಿದ್ದೇನೆ ಎಂದು ಉತ್ತಪ್ಪ ಹೇಳುತ್ತಾರೆ. ಇತ್ತೀಚೆಗೆ ಬೆಂಗಳೂರಿನಲ್ಲಿ ನಾಲ್ಕೈದು ಗಂಟೆಗಳ ಕಾಲ ಟ್ರಾಫಿಕ್ ಜಾಮ್‌ನಲ್ಲಿ ತಾವು ಮತ್ತು ತಮ್ಮ ಕುಟುಂಬ ಸಿಲುಕಿಕೊಂಡಿದ್ದನ್ನು ರಾಬಿನ್ ಉತ್ತಪ್ಪ ಇಲ್ಲಿ ಉಲ್ಲೇಖಿಸಿದ್ದಾರೆ. ''ಮಗಳು ಟ್ರಿನಿಟಿಯಲ್ಲಿ ಹುಟ್ಟಿದಾಗ ಅವಳ ಆರೋಗ್ಯ ಚೆನ್ನಾಗಿರಲಿಲ್ಲ. ಹಾಗಾಗಿ ಅವಳ ಚಿಕಿತ್ಸೆಗಾಗಿ ನಾನು ನಅಮ್ಮ ಮನೆಯಿಂದ 3.5 ಕಿಮೀ ದೂರದಲ್ಲಿರುವ ಹತ್ತಿರದ ಕ್ಲಿನಿಕ್‌ಗೆ ಹೋಗಬೇಕಾಯಿತು. ಆದರೆ ಕೇವಲ 3.5 ಕಿ.ಮೀ ಕ್ರಮಿಸಲು 45 ನಿಮಿಷ ಬೇಕಾಯಿತು. ಅಲ್ಲಿಂದ ಮನೆಗೆ ಮರಳಲು ನಾಲ್ಕೈದು ಗಂಟೆ ಬೇಕಾಗುತ್ತಿತ್ತು. ಈ ಸುದೀರ್ಘ ಪಯಣವನ್ನು ಗಮನದಲ್ಲಿಟ್ಟುಕೊಂಡು ಕಾರಿನಲ್ಲಿ ಮಗಳಿಗೆ ಹಾಲು, ಊಟ ಹಾಕಿದೆ. ಟ್ರಾಫಿಕ್‌ನಲ್ಲಿ ತುಂಬಾ ಸಮಯ ಕಳೆದು ಬೇಸತ್ತು ಕೊನೆಗೆ ಈ ಸಮಸ್ಯೆಯಿಂದ ಮುಕ್ತಿ ಹೊಂದಲು ದೇಶ ತೊರೆಯಲು ನಿರ್ಧರಿಸಿದ್ದೇನೆ ಎಂದು ಉತ್ತಪ್ಪ ಹೇಳಿದ್ದಾರೆ.ವಾಸ್ತವವಾಗಿ, ರಾಬಿನ್ ಉತ್ತಪ್ಪ, ವಿರಾಟ್ ಕೊಹ್ಲಿ ಇದೇ ರೀತಿಯ ವೈಯಕ್ತಿಕ ಕಾರಣಗಳಿಗಾಗಿ ಲಂಡನ್‌ನಲ್ಲಿ ನೆಲೆಸಿದ್ದಾರೆ. ಈ ಬಗ್ಗೆ ಇತ್ತೀಚೆಗಷ್ಟೇ ವಾಸಿಂ ಅಕ್ರಂ ಜೊತೆ ಮಾತನಾಡಿದ ವಿರಾಟ್.. 'ನಾನು ಲಂಡನ್ ನ ಬೀದಿಗಳಲ್ಲಿ ಆರಾಮವಾಗಿ ನಡೆಯಬಲ್ಲೆ. ಆದರೆ ಭಾರತದಲ್ಲಿ ಇದೆಲ್ಲ ಸಾಧ್ಯವಿಲ್ಲ ಎಂದು ಕೊಹ್ಲಿ ಹೇಳಿದ್ದಾರೆ.

## ನಾಲಿಗೆಬಣ್ಣವೇ

### ಬ್ಯೂಟಿ ಟಿಪ್ಸ್



ನಮ್ಮ ನಾಲಿಗೆಗೆ ಚರ್ಮವಿಲ್ಲ. ಬದಲಿಗೆ ಅದು ಪಿಂಕ್ ಆದ ಒದ್ದೆ ಟಿಶ್ಯೂ ಮ್ಯುಕೋಸಾದಿಂದ ಕವರ್ ಆಗಿದೆ. ಅಲ್ಲದೆ ರಕ್ತವು ಇಲ್ಲಿಗೆ ಹೆಚ್ಚಾಗಿ ಹರಿದು ಇದನ್ನು ನಿಭಾಯಿಸುತ್ತದೆ. ಈ ಕೆಂಪು ರಕ್ತ ಹಾಗೂ ಪಿಂಕ್ ಮ್ಯುಕೋಸಾ ಸೇರಿ ನಾಲಿಗೆ ತನ್ನ ಬಣ್ಣ ಪಡೆದುಕೊಂಡಿದೆ. ಆರೋಗ್ಯಯುತ ನಾಲಿಗೆ ಯಾವಾಗಲೂ ಈ ಪಿಂಕ್-ಕೆಂಪು ಮಿಕ್ಸ್ ಬಣ್ಣವನ್ನೇ ಹೊಂದಿರುತ್ತದೆ. ಹಾಗಾಗಿ, ಬಣ್ಣ ಸ್ವಲ್ಪ ಬದಲಾದರೂ ಅದನ್ನು ಅನಾರೋಗ್ಯಕಾರಿ ಎಂದೇ ಪರಿಗಣಿಸಲಾಗುತ್ತದೆ. ಸಾಮಾನ್ಯವಾಗಿ ಇದು ಕಪ್ಪು, ನೀಲಿ, ಕೋರೈಸುವ ಕೆಂಪು, ನೇರಳೆ, ಬಿಳಿ ಹಾಗೂ ಹಳದಿ ಬಣ್ಣಕ್ಕೆ ತಿರುಗಬಹುದು. ಹಾಗಾದರೆ ಈ ಬಣ್ಣಗಳು ಯಾವ ಅನಾರೋಗ್ಯವನ್ನು ಸೂಚಿಸುತ್ತವೆ ನೋಡೋಣ.

ಬಿಳಿಯಾದ ನಾಲಿಗೆ ಬಹಳ ಸಾಮಾನ್ಯವಾಗಿ ಕಂಡುಬರುವಂಥದ್ದು. ಇದು ಸಾಮಾನ್ಯವಾಗಿ ಬಾಯಿಯನ್ನು ಸರಿಯಾಗಿ ಸ್ವಚ್ಛವಾಗಿಟ್ಟುಕೊಳ್ಳುತ್ತಿಲ್ಲ ಎಂದು ತೋರಿಸುತ್ತದೆ. ಅದಲ್ಲದೆಯೂ ಬಿಳಿ ನಾಲಿಗೆಯು,

- ಕ್ಯಾಂಕರ್ ಸೋರ್: ನಾಲಿಗೆ ಮಧ್ಯದಲ್ಲಿ ಬಿಳಿ ಅಥವಾ ಹಳದಿ ಬಣ್ಣ ಕಂಡುಬರುತ್ತಿದ್ದು ಅದು ನೋಯುತ್ತಿದ್ದರೆ ಕ್ಯಾಂಕರ್ ಸೋರ್ ಎನ್ನಲಾಗುತ್ತದೆ. ಇದು ನೋವೊಂದನ್ನು ಬಿಟ್ಟರೆ ಅಪಾಯಕಾರಿಯೇನಲ್ಲ. ಆದರೆ, ಪದೇ ಪದೆ ಬರುತ್ತಿದ್ದರೆ ಮಾತ್ರ ಏಕೆಂದು ಪರೀಕ್ಷೆ ಮಾಡಿಸಿಕೊಳ್ಳಬೇಕು.
- ಲುಕೋಪ್ಲೇಕಿಯಾ: ತಂಬಾಕು ಅಗಿದು ಅಗಿದು ಕಾಣಿಸಿಕೊಳ್ಳುವ ಸಮಸ್ಯೆ ಇದು. ನಾಲಿಗೆಯಲ್ಲಿ ಕಿರಿಕಿರಿ ಕಾಣಿಸಿಕೊಳ್ಳುತ್ತದೆ. ನಾಲಿಗೆ ಹಾಗೂ ಕೆನ್ನೆಯ ಒಳಭಾಗ ಬಿಳಿ ಬಿಳಿಯಾಗುತ್ತದೆ.
- ಓರಲ್ ತ್ರಶ್(ಕ್ಯಾಂಡಿಡಿಯಾಸಿಸ್): ಕ್ಯಾಂಡಿಡಾ ಅಲ್ಬಿಕಾನ್ಸ್ ಎಂಬ ಯೀಸ್ಟ್ ನಾಲಿಗೆಯ ಮೇಲೆ ಬಿಳಿ ಪ್ಯಾಚ್ ಬರಲು ಕಾರಣವಾಗುತ್ತದೆ. ಸಾಮಾನ್ಯವಾಗಿ ರೋಗ ನಿರೋಧಕ ಶಕ್ತಿ ಕಡಿಮೆ ಇರುವ ಮಕ್ಕಳು ಹಾಗೂ ವೃದ್ಧರಲ್ಲಿ ಇದು ಜಾಸ್ತಿಯಾದರೂ ಯಾರಿಗೆ ಬೇಕಾದರೂ ಹೀಗಾಗಬಹುದು.

ಇದೇನು ಅನಾರೋಗ್ಯಕಾರಿ ಕಂಡಿಶನ್ ಅಲ್ಲ. ಆದರೆ ಕಪ್ಪು ನಾಲಿಗೆಯು ಆ?ಯಂಟಿಬಯೋಟಿಕ್ಸ್ ರೀತಿಯ ಒಟಿಸಿ ಮೆಡಿಕೇಶನ್ ತೆಗೆದುಕೊಳ್ಳುವುದರಿಂದ, ಮೌತ್ವಾಶ್ ಉತ್ಪನ್ನಗಳ ಬಳಕೆಯಿಂದ, ಬಾಯಿ ಸ್ವಚ್ಛತೆ ಕೊರತೆಯಿಂದ ಹಾಗೂ ತಂಬಾಕಿನ ಬಳಕೆಯಿಂದಲೂ ಆಗಬಹುದು.

ನಾಲಿಗೆ ನೀಲಿಯಿದ್ದರೆ ಅದನ್ನು ವೈದ್ಯಕೀಯವಾಗಿ ಎಮರ್ಜೆನ್ಸಿ ಎಂದು ತಿಳಿಯಬೇಕು. ದೇಹದ ಇತರ ಭಾಗಗಳಲ್ಲಿ ತೋರುವಂತೆ ನೀಲಿ ನಾಲಿಗೆ ಕೂಡಾ ರಕ್ತ ಸಂಚಾರವಾಗದ್ದನ್ನು ಸೂಚಿಸುತ್ತದೆ. ಇದಲ್ಲದೆ ನೀಲಿ ನಾಲಿಗೆಯು ಆಕ್ಸಿಜನ್ ಸಪ್ಲೈ ಕಳೆದುಕೊಂಡದ್ದನ್ನು ಕೂಡಾ ಸೂಚಿಸುತ್ತಿರಬಹುದು. ಇದನ್ನು ಸೈಯನೋಸಿಸ್ ಎನ್ನಲಾಗುತ್ತದೆ. ಇದು ರಕ್ತ ಸಂಬಂಧಿ ಕಾಯಿಲೆಗಳು, ರಕ್ತನಾಳ ರೋಗಗಳು ಹಾಗೂ ಕಾರ್ಡಿಯಾಕ್ ಸಮಸ್ಯೆಯಿದ್ದಾಗ ಆಗಬಹುದು.

## ಅಮೆಜಾನ್'ನ ಪ್ರತಿಧಿ ವಿದ್ಯಾರ್ಥಿವೇತನವನ್ನು ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿಗೆ ಮಾದರಿ




ಅಮೆಜಾನ್ ಇಂಡಿಯಾ ಇಂದು ತನ್ನ ಮೂರನೇ ವಾರ್ಷಿಕ ಪ್ರತಿಧಿ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳನ್ನು ಸನ್ಮಾನಿಸುವುದಾಗಿ ಘೋಷಿಸಿದೆ. ಈ ಕಾರ್ಯಕ್ರಮವು ಅಮೆಜಾನ್ನ ವಿತರಣಾ ಸಹವರ್ತಿಗಳ ಮಕ್ಕಳನ್ನು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿದೆ. ಈ ವರ್ಷದ ಕಾರ್ಯಕ್ರಮವು ಸುಮಾರು 1200 ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯವನ್ನು ಒದಗಿಸುತ್ತದೆ, ಅವರ ಆರ್ಥಿಕ ಅಡೆತಡೆಗಳನ್ನು ನಿವಾರಿಸಲು ಮತ್ತು ಅವರ ಶೈಕ್ಷಣಿಕ ಆಕಾಂಕ್ಷೆಗಳನ್ನು ಮುಂದುವರಿಸಲು ನೆರವು ಒದಗಿಸುತ್ತದೆ.

ಪ್ರತಿಧಿ ವಿದ್ಯಾರ್ಥಿವೇತನದ ಅಡಿಯಲ್ಲಿ ಬೋಧನಾ ಶುಲ್ಕ, ಶಾಲಾ ಸಾಮಗ್ರಿಗಳು ಮತ್ತು ಇತರ ಶೈಕ್ಷಣಿಕ ವೆಚ್ಚಗಳನ್ನು ಭರಿಸಲು 6000 ರೂ. ಗಳ ಆರ್ಥಿಕ ಸಹಾಯವನ್ನು ಒದಗಿಸಲಾಗುತ್ತದೆ. ಹೆಚ್ಚುವರಿಯಾಗಿ, ಅಂಗವಿಕಲ ವಿದ್ಯಾರ್ಥಿಗಳು ಚಿಕಿತ್ಸಕ ವೆಚ್ಚಗಳು, ಶಾಲಾ ಸಾಮಗ್ರಿಗಳು ಮತ್ತು ಪುಸ್ತಕಗಳಿಗಾಗಿ 10,000 ರೂ.ಗಳ ವಿದ್ಯಾರ್ಥಿವೇತನವನ್ನು ಪಡೆಯುತ್ತಾರೆ. ಅರ್ಹ ಅಭ್ಯರ್ಥಿಗಳನ್ನು ಗುರುತಿಸಲು, ಅಮೆಜಾನ್ ಕಠಿಣ ಮೌಲ್ಯಮಾಪನ ಪ್ರಕ್ರಿಯೆಯನ್ನು ನಡೆಸುತ್ತದೆ. ಇದಕ್ಕಾಗಿ ಬಡ್ಡಿ ಫಾರ್ ಸ್ಟಡಿ ಇಂಡಿಯಾ ಪ್ರತಿಷ್ಠಾನದ ಜೊತೆ ಪಾಲುದಾರಿಕೆ ಹೊಂದಿದೆ. ಶೈಕ್ಷಣಿಕ ಅರ್ಹತೆ, ಹಣಕಾಸಿನ ಅಗತ್ಯ ಮತ್ತು ನಾಯಕತ್ವದ ಸಾಮರ್ಥ್ಯದ ಆಧಾರದ ಮೇಲೆ ವಿದ್ಯಾರ್ಥಿವೇತನಗಳನ್ನು ನೀಡಲಾಗುತ್ತದೆ. ಪ್ರತಿ ಅರ್ಹ ಚಾಲಕ ಸಹಾಯಕರ ಗರಿಷ್ಠ ಇಬ್ಬರು ಮಕ್ಕಳು ವಿದ್ಯಾರ್ಥಿವೇತನವನ್ನು ಪಡೆಯಬಹುದು.

ಇದಲ್ಲದೆ, ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ಮಾರ್ಗದರ್ಶನ ಕಾರ್ಯಕ್ರಮಕ್ಕೂ ಸಹ ಅರ್ಜಿ ಸಲ್ಲಿಸಬಹುದು. 2024 ರಲ್ಲಿ, ನಮ್ಮ ಮಾರ್ಗದರ್ಶನ ಕಾರ್ಯಕ್ರಮವು ಗಮನಾರ್ಹ ಬೆಳವಣಿಗೆಗೆ ಸಾಕ್ಷಿಯಾಗಿದೆ. ಮಾರ್ಗದರ್ಶಕರು ಮತ್ತು ಸಿಬ್ಬಂದಿಗಳಲ್ಲಿ ಶೇಕಡಾ 100 ಕ್ಕಿತಲೂ ಹೆಚ್ಚಳವಾಗಿದೆ. ಸೈಬರ್ ಭದ್ರತೆ ಮತ್ತು ಭಾರತದ ಪ್ರಮುಖ ವ್ಯಕ್ತಿಗಳ ಸ್ಫೂರ್ತಿದಾಯಕ ಪ್ರಯಾಣಗಳಂತಹ ನಿರ್ಣಾಯಕ ವಿಷಯಗಳ ಬಗ್ಗೆ ಒಟ್ಟು 73 ಸಮರ್ಪಿತ ಸ್ವಯಂಸೇವಕರು 175 ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ. ಇದು 2023ಕ್ಕೆ ಹೋಲಿಸಿದರೆ ಗಮನಾರ್ಹ ಮಟ್ಟದಲ್ಲಿ ಹೆಚ್ಚಳವೆನಿಸಿದೆ. ಆಗ 38 ಮಾರ್ಗದರ್ಶಕರು ಇಂಗ್ಲಿಷ್ ಸಂವಹನ ಮತ್ತು ಆರ್ಥಿಕ ಸಾಕ್ಷರತೆಯ ಬಗ್ಗೆ 45 ವಿದ್ಯಾರ್ಥಿಗಳೊಂದಿಗೆ ಕೆಲಸ ಮಾಡಿದರು.

ಅಮೆಜಾನ್ನ ಕೊನೆಯ ಮೈಲಿ ವಿತರಣಾ ಕಾರ್ಯಾಚರಣೆಯ ನಿರ್ಣಾಯಕ ಭಾಗವಾಗಿ, ಚಾಲಕ ಸಹವರ್ತಿಗಳು ಕಂಪನಿಯ ವ್ಯವಹಾರದ ಹೃದಯಭಾಗದಲ್ಲಿದ್ದಾರೆ. ಪ್ರತಿಧಿ ವಿದ್ಯಾರ್ಥಿವೇತನ ಕಾರ್ಯಕ್ರಮವು ಚಾಲಕರ ಕಲ್ಯಾಣಕ್ಕಾಗಿ ಅಮೆಜಾನ್ನ ವಿಸ್ತೃತ ಬದ್ಧತೆಯ ಭಾಗವಾಗಿದೆ. ಈ ಕಾರ್ಯಕ್ರಮದ ಮೂಲಕ ಚಾಲಕ ಸಹವರ್ತಿಗಳ ಕುಟುಂಬಗಳಿಗೆ ಗುಣಮಟ್ಟದ ಶಿಕ್ಷಣ ಲಭ್ಯತೆಯನ್ನು ಅಮೆಜಾನ್ ಖಚಿತಪಡಿಸುತ್ತದೆ,ಎಂದು ಅಮೆಜಾನ್ ಇಂಡಿಯಾದ ಲಾಸ್ಟ್ ಮೈಲ್ ಕಾರ್ಯಾಚರಣೆಗಳ ಉಪಾಧ್ಯಕ್ಷ ಡಾ ಕರುಣಾ ಶಂಕರ್ ಪಾಂಡೆ ಹೇಳಿದರು. ಮುಂದಿನ ಪೀಳಿಗೆಯ ನಾಯಕರನ್ನು ಸಬಲೀಕರಣಗೊಳಿಸಲು ಅಮೆಜಾನ್ ಬದ್ಧವಾಗಿದೆ. ಈ ಪ್ರತಿಭಾನ್ವಿತರ ಸಾಧನೆಗಳನ್ನು ಆಚರಿಸಲು ಮತ್ತು ಉಜ್ವಲ ಭವಿಷ್ಯದತ್ತ ಅವರ ಪ್ರಯಾಣವನ್ನು ಬೆಂಬಲಿಸಲು ನಾವು ಸಂತೋಷಪಡುತ್ತೇವೆ, ಎಂದು ಅವರು ಹೇಳಿದರು.

ಕರ್ನಾಟಕದ ಸರ್ಕಾರದ ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಮತ್ತು ಸಾರಿಗೆ ಇಲಾಖೆಯ ಕಾರ್ಯದರ್ಶಿ ಡಾ. ಎನ್.ವಿ. ಪ್ರಸಾದ್ ಅವರು ಈ ಉಪಕ್ರಮವನ್ನು ಶ್ಲಾಘಿಸಿದರು, ಕಾರ್ಮಿಕರ ಕಲ್ಯಾಣ ಮತ್ತು ಸರ್ವತೋಮುಖ ಬೆಳವಣಿಗೆಗೆ ಬಲವಾದ ಬದ್ಧತೆಯನ್ನು ಪ್ರತಿಬಿಂಬಿಸುವ ಪ್ರತಿಧಿಯಂತಹ ಕಾರ್ಯಕ್ರಮಗಳನ್ನು ನಾವು ಸ್ವಾಗತಿಸುತ್ತೇವೆ. ಗುಣಮಟ್ಟದ ಶಿಕ್ಷಣಕ್ಕೆ ಪ್ರವೇಶ ಒದಗಿಸುವ ಮೂಲಕ ಚಾಲಕ ಸಹವರ್ತಿಗಳ ಕುಟುಂಬಗಳನ್ನು ಸಬಲೀಕರಣಗೊಳಿಸುವ ಅಮೆಜಾನ್, ಕಾರ್ಪೊರೇಟ್ ಜವಾಬ್ದಾರಿಗೆ ಒಂದು ಅತ್ಯುನ್ನತ ಮಾನದಂಡವನ್ನು ನಿಗದಿಪಡಿಸುತ್ತಿದೆ. ಈ ಉಪಕ್ರಮವು ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಮತ್ತು ಉನ್ನತಿಯನ್ನು ಖಚಿತಪಡಿಸಿಕೊಳ್ಳುವ ಸರ್ಕಾರದ ದೃಷ್ಟಿಕೋನದೊಂದಿಗೆ ಅತ್ಯುತ್ತಮವಾಗಿ ಹೊಂದಿಕೆಯಾಗುತ್ತದೆ. ಹೆಚ್ಚು ಸಮಾನ ಮತ್ತು ಸಮೃದ್ಧ ಭವಿಷ್ಯಕ್ಕಾಗಿ ಸಾರ್ವಜನಿಕ ಮತ್ತು ಖಾಸಗಿ ವಲಯಗಳು ಹೇಗೆ ಸಹಕರಿಸಬಹುದು ಎಂಬುದನ್ನು ಇದು ತೋರಿಸುತ್ತದೆ, ಎಂದು ಹೇಳಿದರು.

ಪ್ರತಿಧಿ ವಿದ್ಯಾರ್ಥಿವೇತನವನ್ನು 2022ರಲ್ಲಿ ಪರಿಚಯಿಸಲಾಯಿತು, ಇದು ಚಾಲಕರ ಕುಟುಂಬಗಳನ್ನು ಕೇಂದ್ರೀಕರಿಸಿದ ಪರೋಕ್ಷ ಆರ್ಥಿಕ ಬೆಂಬಲದ ಯೋಜನೆಯಾಗಿದೆ. ಇದರ ಅಡಿಯಲ್ಲಿ ಚಾಲಕರ ಮಕ್ಕಳಿಗೆ ವಿದ್ಯಾರ್ಥಿವೇತನವನ್ನು ಒದಗಿಸುವುದಾಗಿ ಘೋಷಿಸಲಾಯಿತು. ಪ್ರತಿಧಿ ವಿದ್ಯಾರ್ಥಿವೇತನ ಕಾರ್ಯಕ್ರಮವು ಪ್ರತಿಭೆಗಳನ್ನು ಪೋಷಿಸುವ ಮತ್ತು ಭಾರತದಲ್ಲಿ ಶೈಕ್ಷಣಿಕ ಆಕಾಂಕ್ಷೆಗಳನ್ನು ಬೆಂಬಲಿಸುವ ಅಮೆಜಾನ್‌ನ ಸಮರ್ಪಣೆಯನ್ನು ಪ್ರತಿಬಿಂಬಿಸುತ್ತದೆ. ಉನ್ನತ ಶಿಕ್ಷಣವನ್ನು ಮುಂದುವರಿಸಲು ವಿದ್ಯಾರ್ಥಿಗಳನ್ನು ಸಶಕ್ತಗೊಳಿಸುವ ಮೂಲಕ, ಈ ಯುವ ಮನಸ್ಸುಗಳಿಗೆ ಉಜ್ವಲ ಭವಿಷ್ಯವನ್ನು ಸೃಷ್ಟಿಸುವ ಗುರಿಯನ್ನು ಈ ಕಾರ್ಯಕ್ರಮವು ಹೊಂದಿದೆ.

## ಪಾದದ ನೋವು ನಿವಾರಣೆಗೆ ಇಲ್ಲಿದೆ ಸಲಹೆಗಳು..!

### ಹೆಲ್ತ್ ಟಿಪ್ಸ್



ಪಾದದ ನೋವು ಮತ್ತು ಹಿಮ್ಮಡಿ ನೋವಿನಿಂದ ಅನೇಕ ಜನರು ಬಳುತ್ತಿರುತ್ತಾರೆ. ಇದಕ್ಕೆ ಒಂದು ಕಾರಣ ಹೈ ಹೀಲ್ಡ್ ಪಾದರಕ್ಷೆ ಧರಿಸುವುದು ಎಂದರೆ ತಪ್ಪಾಗಲಾರದು. ಇದಲ್ಲದೆ, ಹೊಸ ಮತ್ತು ಕಷ್ಟಕರವಾದ ವ್ಯಾಯಾಮ ಅಥವಾ ದೈಹಿಕ ಚಟುವಟಿಕೆಯಿಂದಾಗಿ ಹಿಮ್ಮಡಿ ನೋವು ಕಾಣಿಸಿಕೊಳ್ಳಬಹುದು. ಕೆಲವೊಮ್ಮೆ, ಪಾದದ ನೋವು ತುಂಬಾ ಹೆಚ್ಚಾಗುತ್ತದೆ. ಇದರಿಂದ ಅಸಹನೀಯ ನೋವು ಮತ್ತು ಪಾದಗಳ ಕೆಳಗಿನ ಭಾಗದಲ್ಲಿ ಉರಿಯುವ ಅನುಭವವಾಗುತ್ತದೆ. ಕ್ಯಾಲ್ಸಿಯಂ ಕೊರತೆಯು ಪಾದದ ನೋವಿಗೆ ಒಂದು ಕಾರಣವಾಗಬಹುದು. ಕ್ಯಾಲ್ಸಿಯಂ ಕೊರತೆಯು ಮೂಳೆಗಳಲ್ಲಿ ನೋವು ಉಂಟುಮಾಡುತ್ತದೆ ಮತ್ತು ಮೂಳೆಗಳನ್ನು ದುರ್ಬಲಗೊಳಿಸುತ್ತದೆ.

ಶುಂಠಿ ಕಷಾಯ: ಶುಂಠಿಯನ್ನು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಪಾದದ ನೋವನ್ನು ನಿವಾರಿಸಲು ಶುಂಠಿ ಸಹಾಯ ಮಾಡುತ್ತದೆ. ಶುಂಠಿ ಕಷಾಯವನ್ನು ಕುಡಿಯುವುದರಿಂದ ಪಾದದ ನೋವು ಮತ್ತು ಉರಿಯೂತವನ್ನು ನಿವಾರಿಸಬಹುದು.

**ಲವಂಗ ಎಣ್ಣೆ:** ಲವಂಗದಲ್ಲಿ ನೋವು ನಿವಾರಕ ಅಂಶಗಳಿವೆ. ಲವಂಗ ಎಣ್ಣೆಯನ್ನು ಪಾದಗಳಿಗೆ ಮಸಾಜ್ ಮಾಡುವುದರಿಂದ ನೋವು ನಿವಾರಣೆಯಾಗುತ್ತದೆ.

**ಅರಿಶಿನ:** ಅರಿಶಿನವನ್ನು ತರಕಾರಿ ರುಚಿಯನ್ನು ಹೆಚ್ಚಿಸಲು ಮಸಾಲೆ ಪದಾರ್ಥವಾಗಿ ಬಳಸಲಾಗುತ್ತದೆ. ಅದೇ ಅರಿಶಿನದಲ್ಲಿ ಉರಿಯೂತವನ್ನು ಕಡಿಮೆಗೊಳಿಸುವ ಗುಣಗಳಿದ್ದು, ಇದರ ಸೇವನೆಯು ಪಾದದ ನೋವು ಕಡಿಮೆ ಮಾಡುತ್ತದೆ. ಇದಕ್ಕಾಗಿ ನೀವು ಅರಿಶಿನ ಹಾಲು ಕುಡಿಯುವ ಮೂಲಕ ಪರಿಹಾರ ಕಾಣಬಹುದು.

**ಸಾಸಿವೆ ಬೀಜಗಳು:** ಸಾಸಿವೆ ಬೀಜಗಳನ್ನು ಎಣ್ಣೆ ತಯಾರಿಸಲು ಮತ್ತು ಟೆಂಪರಿಂಗ್ಗೆ ಮಸಾಲೆಗಳಾಗಿ ಬಳಸಲಾಗುತ್ತದೆ. ಆದರೆ ಸಾಸಿವೆ ಬೀಜಗಳು ಪಾದದ ನೋವನ್ನು ನಿವಾರಿಸುತ್ತದೆ. ಈ ಬೀಜವನ್ನು ಸಣ್ಣ ಬಟ್ಟಲಿನಲ್ಲಿ ಪುಡಿಮಾಡಿ. ಅವುಗಳನ್ನು ಬಕೆಟ್ ಬಿಸಿ ನೀರಿನಲ್ಲಿ ಬೆರೆಸಿ. ನಿಮ್ಮ ಪಾದಗಳನ್ನು ಈ ನೀರಿನಲ್ಲಿ 15 ನಿಮಿಷಗಳ ಕಾಲ ಇರಿಸಿ. ಹೀಗೆ ಮಾಡುವುದರಿಂದ ನೀವು ಪಾದದ ನೋವಿನಿಂದ ಪರಿಹಾರ ಪಡೆಯಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸ್ಥಿರಾಸ್ತಿ ನಷ್ಟ, ಆರೋಗ್ಯ ಸಮಸ್ಯೆ, ದೂರ ಪ್ರದೇಶ ಉದ್ಯೋಗ ಪ್ರಾಪ್ತಿ.

**ವೃಷಭ:** ಸಹೋದರ ಅಥವಾ ಮಿತ್ರರಿಂದ ಆಕಸ್ಮಿಕ ಧನ ನಷ್ಟ, ಗರ್ಭದೋಷ ಸಮಸ್ಯೆ ಅಥವಾ ಮಕ್ಕಳ ಭವಿಷ್ಯದ ಚಿಂತೆ, ಬಂಧು ಬಾಂಧವರಿಂದ ಅನುಕೂಲ.

**ಮಿಥುನ:** ಅನಾರೋಗ್ಯ ಸಮಸ್ಯೆಯಿಂದ ವ್ಯವಹಾರದಲ್ಲಿ ತೊಡಕು. ಆತುರ, ಅಹಂಭಾವದಿಂದ ಅಪಘಾತಗಳು. ವಾಹನ ಚಾಲನೆಯಲ್ಲಿ ಎಚ್ಚರಿಕೆ ಅಗತ್ಯ. ಅತಿಯಾದ ಬುದ್ಧಿವಂತಿಕೆಯಿಂದ ಸಮಸ್ಯೆ.

**ಕಟಕ:** ಪ್ರಯಾಣದಲ್ಲಿ ಅನುಕೂಲಕರ ವಾತಾವರಣ, ಪತ್ರ ವ್ಯವಹಾರಗಳಿಗೆ, ಉದ್ಯೋಗ, ಗೃಹ ಮತ್ತು ಸ್ಥಳ ಬದಲಾವಣೆಗೆ ಅನುಕೂಲಕರ ವಾತಾವರಣ, ಆರೋಗ್ಯದಲ್ಲಿ ವ್ಯತ್ಯಾಸ.

**ಸಿಂಹ:** ಮಕ್ಕಳಿಂದ ಖರ್ಚು, ನಿಮ್ಮ ಪ್ರತಿಷ್ಠೆ ಗೌರವ ಹೆಸರಿಗೆ ಕುಂದು ಬರುವುದು, ಆರ್ಥಿಕ ಮತ್ತು ಕೌಟುಂಬಿಕ ಸಮಸ್ಯೆ ಹೆಚ್ಚು.

**ಕನ್ಯಾ:** ಪಾಲುದಾರಿಕೆಯಲ್ಲಿ ಸಮಸ್ಯೆ ಮತ್ತು ಆರ್ಥಿಕ ಸಮಸ್ಯೆ, ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ಅತಿಯಾದ ಬುದ್ಧಿವಂತಿಕೆ ಪ್ರದರ್ಶನದಿಂದ ಸಮಸ್ಯೆ.

**ತುಲಾ:** ಉದ್ಯೋಗ ಬದಲಾವಣೆಯಿಂದ ಅದೃಷ್ಟ ಕೈ ತಪ್ಪುದು, ಅಧಿಕ ಖರ್ಚು, ಆರೋಗ್ಯದಲ್ಲಿ ಏರುಪೇರು.

**ವೃಶ್ಚಿಕ:** ಮಕ್ಕಳಿಂದ ಆಕಸ್ಮಿಕ ಧನಾಗಮನ, ಉದ್ಯೋಗ ಬದಲಾವಣೆಗೆ ಸೂಕ್ತ ಕಾಲ, ಆರೋಗ್ಯ ಸಮಸ್ಯೆಯಿಂದ ಬಾಧೆ.

**ಧನು:** ಕಲಹ ಮತ್ತು ಮನಸ್ತಾಪಗಳು, ಸಂಗಾತಿ ಆರೋಗ್ಯದಲ್ಲಿ ಏರುಪೇರು, ಅತಿಯಾದ ಉದ್ಯೋಗ ಒತ್ತಡ ಮತ್ತು ಜವಾಬ್ದಾರಿಗಳು.

**ಮಕರ:** ಉದ್ಯೋಗನಿಮಿತ್ತ ದೂರ ಪ್ರಯಾಣ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಸ್ವಯಂಕೃತ ಅಪರಾಧಗಳಿಂದ ಸಂಕಷ್ಟ, ಬುದ್ಧಿಹೀನರಾಗುವಿರಿ.

**ಕುಂಭ:** ಸಾಲಗಾರರಿಂದ ಮುಕ್ತಿ, ಕುಟುಂಬದಲ್ಲಿ ಅಂತಃಕಲಹಗಳು, ಹಿರಿಯರಿಗೆ ನೋವುಂಟು ಮಾಡುವಿರಿ.

**ಮೀನ:** ಪ್ರೀತಿ-ಪ್ರೇಮ ವಿಷಯಗಳಲ್ಲಿ ಮನಸ್ಸು, ಸ್ಥಿರಾಸ್ತಿ ವಿಷಯಗಳು ಮನಸ್ಸಿಗೆ ಹೆಚ್ಚು ಘಾಸಿ, ಮೇಲಾಧಿಕಾರಿಗಳಿಂದ, ರಾಜಕಾರಣಿಗಳಿಂದ, ಸರ್ಕಾರಿ ಅಧಿಕಾರಿಗಳಿಂದ ಅನುಕೂಲ.

## ಗುರು ನಾನಕ್ ಜಯಂತಿ

ಗುರುನಾನಕ್ ಅವರ ಪ್ರಕಾಶ್ ಉತ್ಸವ ಮತ್ತು ಗುರು ನಾನಕ್ ದೇವ್ ಜಿ ಜಯಂತಿ ಎಂದೂ ಕರೆಯಲ್ಪಡುವ ಗುರುನಾನಕ್ ಜಯಂತಿಯು ಮೊದಲ ಸಿಖ್ ಗುರು ಗುರುನಾನಕ್ ಅವರ ಜನ್ಮದಿನವನ್ನು ಆಚರಿಸುತ್ತದೆ ಮತ್ತು ಈ ವರ್ಷ ನವೆಂಬರ್ 30 ರಂದು ಆಚರಿಸಲಾಗುತ್ತದೆ. ಇದು ಸಿಖ್ ಧರ್ಮದ ಅತ್ಯಂತ ಪವಿತ್ರ ಹಬ್ಬಗಳಲ್ಲಿ ಒಂದಾಗಿದೆ. ಸಿಖ್ ನಂಬಿಕೆಯಲ್ಲಿ, ಹಬ್ಬಗಳು 10 ಸಿಖ್ ಗುರುಗಳ ವಾರ್ಷಿಕೋತ್ಸವದ ಸುತ್ತ ಸುತ್ತುತ್ತವೆ. ಈ ಗುರುಗಳು ಸಿಖ್ಖರ ನಂಬಿಕೆಗಳನ್ನು ರೂಪಿಸಲು ಕಾರಣರಾಗಿದ್ದರು. 'ಗುರುಪುರಬ್' ಎಂದು ಕರೆಯಲ್ಪಡುವ ಅವರ ಜನ್ಮದಿನಗಳು ಸಮುದಾಯದಲ್ಲಿ ಆಚರಣೆ ಮತ್ತು ಪ್ರಾರ್ಥನೆಯ ಸಂದರ್ಭಗಳಾಗಿವೆ. ಗುರುನಾನಕ್ ಜಯಂತಿಯನ್ನು ಪ್ರಾರ್ಥನಾ ಮೆರವಣಿಗೆಗಳು, ಸ್ತುತಿಗೀತೆಗಳು, ಉಚಿತ ಸಿಹಿತಿಂಡಿಗಳು, ಸಮರ ಕಲೆಗಳು ('ಗಟ್ಕಾ'), ಮತ್ತು ಸಮುದಾಯಕ್ಕೆ ಸೇವೆಗಳೊಂದಿಗೆ ಗುರುತಿಸಲಾಗಿದೆ. ಈ ಹಬ್ಬವನ್ನು ಕಾರ್ತಿಕ ಪೂರ್ಣಿಮಾ ದಿನದಂದು ಆಚರಿಸಲಾಗುತ್ತದೆ, ಇದು ಹಿಂದೂ ಕ್ಯಾಲೆಂಡರ್ ಪ್ರಕಾರ ಕಾರ್ತಿಕ ಮಾಸದ ಹದಿನೈದನೆಯ ಚಂದ್ರನ ದಿನವಾಗಿದೆ ಮತ್ತು ಸಾಮಾನ್ಯವಾಗಿ ಗ್ರೆಗೋರಿಯನ್ ಕ್ಯಾಲೆಂಡರ್ ಪ್ರಕಾರ ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಬರುತ್ತದೆ. ಗುರುನಾನಕ್ ಜಯಂತಿ ಆಚರಣೆಗಳು ಸಾಮಾನ್ಯವಾಗಿ ಎಲ್ಲಾ ಸಿಖ್ಖರಿಗೆ ಹೋಲುತ್ತವೆ – ಸ್ತೋತ್ರಗಳು ಮಾತ್ರ ವಿಭಿನ್ನವಾಗಿವೆ. ಆಚರಣೆಗಳು ಸಾಮಾನ್ಯವಾಗಿ ಪ್ರಭಾತ್ ಫೆರಿಸ್ನೊಂದಿಗೆ ಪ್ರಾರಂಭವಾಗುತ್ತವೆ. ಪ್ರಭಾತ್ ಫೆರಿಸ್ ಎನ್ನುವುದು ಗುರುದ್ವಾರಗಳಲ್ಲಿ ಪ್ರಾರಂಭವಾಗುವ ಮುಂಜಾನೆ ಮೆರವಣಿಗೆಗಳಾಗಿವೆ ಮತ್ತು ಸ್ತೋತ್ರಗಳನ್ನು ಹಾಡುತ್ತಾ ಸ್ಥಳಗಳ ಸುತ್ತಲೂ ಮುಂದುವರಿಯುತ್ತದೆ. ಸಾಮಾನ್ಯವಾಗಿ, ಜನ್ಮದಿನದ ಎರಡು ದಿನಗಳ ಮೊದಲು, ಅಖಂಡ ಪಥವನ್ನು (ಸಿಖ್ಖರ ಪವಿತ್ರ ಗ್ರಂಥವಾದ ಗುರು ಗ್ರಂಥ ಸಾಹಿಬ್ನ ನಲವತ್ತೆಂಟು ಗಂಟೆಗಳ ನಿರಂತರ ಓದುವಿಕೆ) 'ಗುರುದ್ವಾರಗಳಲ್ಲಿ' ನಡೆಯುತ್ತದೆ. ಹುಟ್ಟುಹಬ್ಬದ ಹಿಂದಿನ ದಿನ, ನಾಗರಕೀರ್ತನ ಎಂದು ಕರೆಯಲ್ಪಡುವ ಮೆರವಣಿಗೆಯನ್ನು ಆಯೋಜಿಸಲಾಗಿದೆ. ಈ ಮೆರವಣಿಗೆಯನ್ನು ಪಂಜ್ ಪ್ಯಾರಸ್ (ಐದು ಪ್ರೀತಿಯವರು) ನೇತೃತ್ವ ವಹಿಸುತ್ತಾರೆ. ಅವರು ನಿಶಾನ್ ಸಾಹಿಬ್ ಮತ್ತು ಗುರು ಗ್ರಂಥ ಸಾಹಿಬ್ನ ಪಾಲ್ಕಿ (ಪಲ್ಲಕ್ಕಿ) ಎಂದು ಕರೆಯಲ್ಪಡುವ ಸಿಖ್ ಧ್ವಜವನ್ನು ಹೊತ್ತ ಮೆರವಣಿಗೆಯ ನೇತೃತ್ವ ವಹಿಸುತ್ತಾರೆ. ಅವರನ್ನು ಹಿಂಬಾಲಿಸುವ ಗಾಯಕರ ತಂಡಗಳು ಸ್ತೋತ್ರಗಳನ್ನು ಪಠಿಸುತ್ತವೆ ಮತ್ತು ಭಕ್ತರು ಕೋರಸ್ ಅನ್ನು ಹಾಡುತ್ತಾರೆ.

# ಕೆನರಾ ಬ್ಯಾಂಕ್ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಣೆ



**ದೆಹಲಿ:** ಕೆನರಾ ಬ್ಯಾಂಕ್ ವತಿಯಿಂದ ಅತ್ಯಂತ ವಿಜೃಂಭಣೆಯಿಂದ ಕನ್ನಡ ರಾಜ್ಯೋತ್ಸವವನ್ನುಬೆಂಗಳೂರಿನ ಜೆಸಿ ರಸ್ತೆಯ ಪ್ರಧಾನ ಕಚೇರಿಯಲ್ಲಿ ಆಚರಿಸಲಾಯಿತು. ಈ ಕಾರ್ಯಕ್ರಮದ ಮೂಲಕ ಕನ್ನಡ ಸಂಸ್ಕೃತಿ, ಭಾಷೆ ಮತ್ತು ಕಲೆಯ ಶ್ರೀಮಂತ ಪರಂಪರೆಯನ್ನು ಎತ್ತಿ ತೋರಿಸುವ ಪ್ರಯತ್ನ ಮಾಡಲಾಯಿತು.

ಚಂದನ ವಾಹಿನಿಯಲ್ಲಿ ಥಟ್ ಅಂತ ಹೇಳಿ ರಸಪ್ರಶ್ನೆ ಕಾರ್ಯಕ್ರಮದ ಮೂಲಕ ನಾಡಿನಾದ್ಯಂತ ಚಿರಪರಿಚಿತರಾದ ಡಾ.ಎನ್.ಸೋಮೇಶ್ವರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಕನ್ನಡ ರಾಜ್ಯೋತ್ಸವ ಸಂಭ್ರಮಕ್ಕೆ ಮೆರುಗು ತಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬ್ಯಾಂಕ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಶ್ರೀ ಕೆ. ಸತ್ಯನಾರಾಯಣ ರಾಜು ವಹಿಸಿದ್ದರು. ಕಾರ್ಯನಿರ್ವಾಹಕ ನಿರ್ದೇಶಕರಾದ ಅಶೋಕ್ ಚಂದ್ರ, ಮುಖ್ಯ ಪ್ರಧಾನ ವ್ಯವಸ್ಥಾಪಕರು, ಪ್ರಧಾನ ವ್ಯವಸ್ಥಾಪಕರು, ಉಪ ಪ್ರಧಾನ ವ್ಯವಸ್ಥಾಪಕರು ಮತ್ತು ಇತರ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಡಾ.ಎನ್.ಸೋಮೇಶ್ವರ್ ಅವರು ಸಮಾರಂಭವನ್ನು ದೀಪ ಬೆಳಗಿಸಿ ಉದ್ಘಾಟಿಸಿ, ಕನ್ನಡದ ಇತಿಹಾಸ, ಕಲೆ, ಸಾಹಿತ್ಯದ ಕುರಿತು ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಭಿಕರೊಂದಿಗೆ ಸಂವಾದ ರೂಪದಲ್ಲಿ ರಸಪ್ರಶ್ನೆ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ವಿಜೇತರಿಗೆ ಕನ್ನಡ ಭಾಷೆ ಮತ್ತು ಸಾಹಿತ್ಯ ಉತ್ತೇಜಿಸುವ ಹಿನ್ನೆಲೆಯಲ್ಲಿ ಕನ್ನಡ ಪುಸ್ತಕವನ್ನು ಬಹುಮಾನವಾಗಿ ನೀಡಲಾಯಿತು. ಕಾರ್ಯನಿರ್ವಾಹಕ ನಿರ್ದೇಶಕ ಶ್ರೀ ಅಶೋಕ್ ಚಂದ್ರ ಮಾತನಾಡಿ ''ಕರ್ನಾಟಕೇತರ ಪ್ರದೇಶಗಳ ಉದ್ಯೋಗಿಗಳಿಗೆ ಕನ್ನಡ ಕಲಿಯಲು ಪ್ರೋತ್ಸಾಹಿಸಲು ಕೆನರಾ ಬ್ಯಾಂಕ್ನ ಕೈಗೊಂಡಿರುವ ಉಪಕ್ರಮವನ್ನು ಒತ್ತಿ ಹೇಳಿದರು. ಪ್ರಾದೇಶಿಕ ಭಾಷೆಯನ್ನು ಅರ್ಥಮಾಡಿಕೊಳ್ಳಲು ಉದ್ಯೋಗಿಗಳಿಗೆ ಕಲಿಕಾ ಮಾರ್ಗದರ್ಶಿಯಾಗಿರುವ 'ನಿಮ್ಮ ಪ್ರಾದೇಶಿಕ ಭಾಷೆ ಕಲಿಯಿರಿ'ಎಂಬ ಬ್ಯಾಂಕ್ನ ಆಂತರಿಕ ಪ್ರಕಟಣೆಯ ಯಶಸ್ವಿ ಅನುಷ್ಠಾನವನ್ನು'' ಅವರು ಪ್ರಸ್ತಾಪಿಸಿದರು. ಜನರಲ್ ಮ್ಯಾನೇಜರ್ ಶ್ರೀ ರಾಮ ನಾಯ್ಕ್ ಕೆ ಅವರ ಸಮಾರೋಪ ಭಾಷಣದೊಂದಿಗೆ ಕಾರ್ಯಕ್ರಮವು ಮುಕ್ತಾಯಗೊಂಡಿತು, ಅವರು ಸಾಂಸ್ಕೃತಿಕ ಪರಂಪರೆಯನ್ನು ಆಚರಿಸುವ ಮಹತ್ವವನ್ನು ಒತ್ತಿ ಹೇಳಿದರು ಮತ್ತು ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.



## ಕ್ರಿಕೆಟ್‌ಗಾಗಿ ಯುವ ಆಟಗಾರರ ಅಭಿವೃದ್ಧಿ: ನೀತಾ ಅಂಬಾನಿ ಭರವಸೆ

**ಮುಂಬೈ:** ಐಪಿಎಲ್ ಹರಾಜಿನಲ್ಲಿ ಮುಂಬೈ ಇಂಡಿಯನ್ಸ್ ಖರೀದಿಸಿದ ಯುವ ಆಟಗಾರರ ಬಗ್ಗೆ ಸಂತಸ ಹಂಚಿಕೊಂಡಿರುವ ತಂಡದ ಒಡತಿ ಶ್ರೀಮತಿ ನೀತಾ ಎಂ. ಅಂಬಾನಿ, 'ಭಾರತೀಯ ಕ್ರಿಕೆಟ್ಗಾಗಿ ಯುವ ಆಟಗಾರರನ್ನು ಅಭಿವೃದ್ಧಿಪಡಿಸುವ ಸಂಪ್ರದಾಯವನ್ನು ಮುಂದುವರಿಸಲು ಬಯಸುತ್ತೇವೆ. ಮೆಗಾ ಹರಾಜು ಎಂದರೆ ಹೊಸ ತಂಡ, ಹೊಸ ಆರಂಭ. ಆದರೆ ಅದೇ ಮುಂಬೈ ಇಂಡಿಯನ್ಸ್ ಉತ್ಸಾಹ ಕಾಯ್ದುಕೊಳ್ಳಲಿದ್ದೇವೆ. ಟ್ರೆಂಟ್ ಬೌಲ್ಟ್, ನಮನ್ ಧೀರ್, ಅಲ್ಲಾ ಘಜನ್ಫರ್, ರಿಯಾನ್ ರಿಕೆಲ್ಟನ್, ದೀಪಕ್ ಚಹರ್, ರಾಬಿನ್ ಮಿಂಜ್,



ಕರ್ಣ್ ಶರ್ಮ, ವಿಲ್ ಜ್ಯಾಕ್ಸ್, ಮಿಚೆಲ್ ಸ್ಯಾಂಟ್ನರ್, ರೀಸ್ ಟೋಪ್ಲೆ, ಅಶ್ವನಿ ಕುಮಾರ್ ಅವರಂಥ ಕೆಲವು ಹೊಸ ಮುಖಗಳನ್ನು ಸ್ವಾಗತಿಸಲು ಸಂತೋಷವಾಗುತ್ತಿದೆ. ಅದೇ ರೀತಿ ನಮ್ಮ ಕೆಲವು ಹಳೆಯ ಆಟಗಾರರನ್ನೂ ಉಳಿಸಿಕೊಂಡ ಖುಷಿ ಇದೆ. ರಾಜ್ ಅಂಗದ್ ಬಾವಾ, ಶ್ರೀಜಿತ್ ಕೃಷ್ಣನ್, ಸತ್ಯನಾರಾಯಣ ರಾಜು, ಬೆವನ್-ಜಾನ್ ಜೇಕಬ್ಸ್, ಅರ್ಜುನ್ ತೆಂಡುಲ್ಕರ್, ಲಿಜಾಡ್ವಿಲಿಯಮ್ಸ್ ಮತ್ತು ವಿಘ್ನೇಶ್ ಪುಥುರು. ಹಾರ್ದಿಕ್, ಜಸ್ಪ್ರೀತ್, ರೋಹಿತ್, ಸೂರ್ಯ ಮತ್ತು ತಿಲಕ್ ಅವರೊಂದಿಗೆ ನಾವು ಬಲಿಷ್ಠವಾದ ತಂಡವನ್ನು ಉಳಿಸಿಕೊಂಡಿದ್ದೇವೆ. ಹರಾಜಿನಲ್ಲಿ ನಾವು ಅವರ ಸುತ್ತ ತಂಡವನ್ನು ಹೇಗೆ ನಿರ್ಮಿಸಬಹುದು ಎಂಬುದನ್ನು ನೋಡುವ ಅವಕಾಶವಾಗಿತ್ತು ಎಂದು ಹೇಳಿದ್ದಾರೆ.

# ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ಪುರಸ್ಕಾರ ಪ್ರದಾನ



**ಬೆಂಗಳೂರು:** ಉಚಿತ ಮತ್ತು ಗುಣಮಟ್ಟದ ಮೌಲ್ಯಾಧಾರಿತ ಉನ್ನತ ಶಿಕ್ಷಣವನ್ನು ನೀಡುವ ಉತ್ಕೃಷ್ಟ ಶಿಕ್ಷಣ ಸಂಸ್ಥೆಯಾಗಿ ಗುರುತಿಸಿಕೊಂಡಿರುವ ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಸಂಸ್ಥಾಪಕರು, ಜಾಗತಿಕ ಮಾನವತಾವಾದಿ ಮತ್ತು ಅಧ್ಯಾತ್ಮ ಗುರುಗಳಾದ ಶ್ರೀ ಮಧುಸೂದನ ಸಾಯಿ ಅವರು, ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ಪುರಸ್ಕಾರದ 8ನೇ ಆವೃತ್ತಿಯ ಅಧ್ಯಕ್ಷತೆಯನ್ನು ವಹಿಸಿದ್ದರು. 'ಅಪ್ರತಿಮ ದಿಗ್ಗಜರು - ದಿ ಲೆಜೆಂಡ್ಸ್' ವಿಷಯಾಧಾರಿತವಾಗಿ ಹಮ್ಮಿಕೊಳ್ಳಲಾದ ಈ ಪುರಸ್ಕಾರ ಸಮಾರಂಭವು ಸಮಾಜ ಕಲ್ಯಾಣದ ನಿತ್ಯಸೇವೆಯಲ್ಲಿ ತಮ್ಮ ಜೀವನವನ್ನು ಸಮರ್ಪಿಸಿಕೊಂಡಿರುವ ಹಿರಿಯ ತಲೆಮಾರಿನ ಸಾಧಕರನ್ನು ಗುರುತಿಸಿ, ಪುರಸ್ಕರಿಸುವ ಧ್ಯೇಯವನ್ನು ಹೊಂದಿದ್ದು, ಇದೇ ಸಮಯದಲ್ಲಿ ಮುಖ್ಯ ಅತಿಥಿಗಳಾಗಿ ಆದಿತ್ಯ ಬಿರ್ಲಾ ಸನ್ ಲೈಫ್ ಎ ಎಂ ಸಿ ಲಿಮಿಟೆಡ್ ನ ಮುಖ್ಯ ನಿರ್ವಹಣಾಧಿಕಾರಿಗಳು ಮತ್ತು ನಿರ್ವಾಹಕ ನಿರ್ದೇಶಕರಾದ ಶ್ರೀ ಎ ಬಾಲಸುಬ್ರಮಣಿಯನ್, ದೆಹಲಿಗೆ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿಗಳು ಮತ್ತು ಶಾಸಕರಾದ ಡಾ ಟಿ ಬಿ ಜಯಚಂದ್ರ, ಮತ್ತು ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

ವಿವಿಧ ಕ್ಷೇತ್ರಗಳ ಹೆಸರಾಂತ ತಜ್ಞರು ರೂಪಿಸಿರುವ ತೀರ್ಪುಗಾರರ ತಂಡವು, ಅತ್ಯಂತ ವಿಶೇಷವಾಗಿ ನಡೆಸಿದ ಅಧ್ಯಯನದ ಮೂಲಕ ಶಿಕ್ಷಣ, ಆರೋಗ್ಯ, ಪರಿಸರ, ಸರ್ವಧರ್ಮ ಸಮನ್ವಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಂಗೀತ ಮತ್ತು ಲಲಿತ ಕಲೆಗಳು ಮತ್ತು ಯೋಗ ಮತ್ತು ಕ್ರೀಡೆಗಳಂತಹ ಕ್ಷೇತ್ರಗಳಲ್ಲಿನ ಈ ಸಾಧಕ ಪುರಸ್ಕೃತರನ್ನು ಆಯ್ಕೆ ಮಾಡಲಾಗಿದೆ. ಈ ಪುರಸ್ಕಾರದ ಪೋಷಕತ್ವವನ್ನು ಭಾರತದ ಪ್ರಸಿದ್ಧ ಸಂಸ್ಥೆಯಾದ ಆದಿತ್ಯ ಬಿರ್ಲಾ ಸಮೂಹ ಸಂಸ್ಥೆಯು ವಹಿಸಿತ್ತು.

**ಡೆಲೋಯ್ಟ್ ಸಂಸ್ಥೆಯ ಸಹಯೋಗದಲ್ಲಿ ಸಾಧಕ ಆಯ್ಕೆ ಸಮಿತಿಯನ್ನು ರಚಿಸಿದ್ದು, ಅದರಲ್ಲಿನ ತೀರ್ಪುಗಾರರ ಪಟ್ಟಿ ಇಂತಿದೆ:** ಶಿಕ್ಷಣತಜ್ಞರು ಮತ್ತು ಮಾಜಿ ನಿರ್ದೇಶಕರಾದ ಪ್ರೊ ಜೆ ಎಸ್ ರಜಪೂತ್, ಮೈಸೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ ಜೆ ಶಶಿಧರ್ ಪ್ರಸಾದ್, ಪದ್ಮ ಭೂಷಣ ಪುರಸ್ಕೃತ ಶ್ರೀ ಶಿವ ಕುಮಾರ್ ಸರಿನ್, ಪದ್ಮ ವಿಭೂಷಣ ಪುರಸ್ಕೃತ ಸಂಗೀತ ಸಾಧಕರಾದ ಶ್ರೀ ಉಸ್ತಾದ್ ಅಮ್ಜದ್ ಅಲಿ ಖಾನ್, ಪದ್ಮಶ್ರೀ ಪುರಸ್ಕೃತ ಶ್ರೀಮತಿ ಸುಧಾ ರಘುನಾಥನ್, ಕ್ರಿಕೆಟ್ ದಿಗ್ಗಜರಾದ ಸುನಿಲ್ ಗವಾಸ್ಕರ್ ಮತ್ತು ಹಲವು ಗಣ್ಯಮಾನ್ಯರು ತೀರ್ಪುಗಾರರ ಸಮಿತಿಯಲ್ಲಿದ್ದಾರೆ.

ವಿಶ್ವವಿದ್ಯಾಲಯದ ಸಂಸ್ಥಾಪಕರಾದ ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ತಮ್ಮ ಭಾಷಣದಲ್ಲಿ ಪ್ರಶಸ್ತಿ ಪುರಸ್ಕೃತರನ್ನು ಶ್ಲಾಘಿಸುತ್ತಾ, ''ಪ್ರತಿಯೊಬ್ಬ ಪ್ರಶಸ್ತಿ ಪುರಸ್ಕೃತರು ಮಾಡಿದ ಮತ್ತು ಈಗಲೂ ಮಾಡುತ್ತಿರುವ ಎಲ್ಲಾ ಸೇವಾಕಾರ್ಯಗಳನ್ನು ನಾವು ಪ್ರಾಮಾಣಿಕವಾಗಿ ಪ್ರಶಂಸಿಸುತ್ತೇವೆ. ಅವರು ಮಾಡುತ್ತಿರುವ ಸೇವೆಯು ಸರಳವಲ್ಲ. ಅಸಾಧ್ಯವಾದುದನ್ನು ಸಾಧ್ಯವಾಗುವಂತೆ ಮಾಡಿರುವ ಕಾರಣ, ಅವರು 'ಅಪ್ರತಿಮ ಸಾಧಕ'ರಾಗಿ ಹೊರಹೊಮ್ಮಿದ್ದಾರೆ.

### ಪುರಸ್ಕಾರಕ್ಕೆ ಭಾಜನರಾದ ಪಟ್ಟಿ

- ಹರಿ ಕಿರಣ್ ವಡ್ಲಮನಿ - ಶಿಕ್ಷಣ ಕ್ಷೇತ್ರ
- ಡಾ ಅಭಯ್ ಬಂಗ್ ಮತ್ತು ಡಾ ರಾಣಿ ಬಂಗ್ - ಆರೋಗ್ಯ ಕ್ಷೇತ್ರ
- ಜಾಧವ್ ಪಾಯೆಂಗ್ - ಪರಿಸರ ಕ್ಷೇತ್ರ
- ಅರುಣಾಚಲಂ ಮುರುಗನಂತಮ್ - ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕ್ಷೇತ್ರ
- ಕೆ ಕೆ ಮೊಹಮದ್ - ಸರ್ವಧರ್ಮ ಸಮನ್ವಯ ಕ್ಷೇತ್ರ
- ಅಂಜೋಲಿ ಎಲಾ ಮೆನನ್ - ಸಂಗೀತ ಮತ್ತು ಲಲಿತ ಕಲೆಗಳು ಕ್ಷೇತ್ರ
- ಶ್ರೀಮತಿ ದೀಪಾ ಮಲಿಕ್ - ಯೋಗ ಮತ್ತು ಕ್ರೀಡೆ

## ವಿವಾದ ಸೃಷ್ಟಿಸಿದ ಕಾಂಗ್ರೆಸ್ ಮುಖಂಡ ಭಾಯ್ ಜಗತಾಪ್ ಹೇಳಿಕೆ

**ಮುಂಬೈ:** ಚುನಾವಣಾ ಆಯೋಗವನ್ನು ಪ್ರಧಾನಿ ನರೇಂದ್ರ ಮೋದಿ ಅವರ ನಾಯಿ ಎಂದಿರುವ ಮಹಾರಾಷ್ಟ್ರ ಕಾಂಗ್ರೆಸ್ ಮುಖಂಡರೊಬ್ಬರ ಹೇಳಿಕೆ ವಿವಾದ ಸೃಷ್ಟಿಸಿದೆ. ಇತ್ತೀಚೆಗೆ ಮುಗಿದ ವಿಧಾನಸಭಾ ಚುನಾವಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಬಗ್ಗೆ ರಾಜ್ಯ ಚುನಾವಣಾ ಆಯೋಗದ ಸಿಇಒಗೆ ಮಹಾರಾಷ್ಟ್ರ ಕಾಂಗ್ರೆಸ್ ಘಟಕವು ಮನವಿ ಸಲ್ಲಿಸಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.ಕಾಂಗ್ರೆಸ್ ಎಂಎಲ್ಸಿ ಮತ್ತು ವಿಧಾನ ಪರಿಷತ್ತಿನ ಪ್ರತಿಪಕ್ಷದ ಉಪನಾಯಕ ಅಶೋಕ್ ಎ. ಜಗತಾಪ್ ಅಲಿಯಾಸ್ ಭಾಯ್ ಜಗತಾಪ್ ಅವರು ಚುನಾವಣಾ ಆಯೋಗವನ್ನು ಪ್ರಧಾನಿ ನಿವಾಸದ ಹೊರಗೆ ಕುಳಿತಿರುವ ನಾಯಿಗೆ ಹೋಲಿಸುವ ಮೂಲಕ ವಿವಾದ ಸೃಷ್ಟಿಸಿದ್ದಾರೆ. ಇದು ಅನಿರೀಕ್ಷಿತ (ಮತದಾನದ) ತೀರ್ಪು. ನಾವು ಅದನ್ನು ಒಪ್ಪಲು ಸಾಧ್ಯವಿಲ್ಲ... ರಾಜ್ಯದ ಜನರು (ಆಡಳಿತಾರೂಢ) ಮಹಾಯುತಿ ಆಡಳಿತವನ್ನು ಸಂಪೂರ್ಣವಾಗಿ ವಿರೋಧಿಸಿದ್ದರು. ಆದರೆ ಅದರ ಜಯದ ಸಂಪೂರ್ಣ ಕ್ರೆಡಿಟ್ ಇವಿಎಂಗಳಿಗೆ ಸಲ್ಲುತ್ತದೆ. ಹೌದು... ಇವಿಎಂಗಳನ್ನು ತಿರುಚಲಾಗಿದೆ... ಕೆಲವು ಸ್ಥಳಗಳಲ್ಲಿ ಹ್ಯಾಕ್ ಮಾಡಲಾಗಿದೆ ಎಂದು ನಾನು ಹೇಳುತ್ತೇನೆ ಎಂದು ಜಗತಾಪ್ ಹೇಳಿದರು. ಏತನ್ಮಧ್ಯೆ, ರಾಜ್ಯ ಕಾಂಗ್ರೆಸ್ ಅಧ್ಯಕ್ಷ ನಾನಾ ಎಫ್ ಪಟೋಲೆ ಅವರು ಎಸ್ಇಸಿ ಸಿಇಒ ಎಸ್ ಚೊಕಲಿಂಗಂ ಅವರಿಗೆ ಪತ್ರ ಬರೆದಿದ್ದು, ನವೆಂಬರ್ 20 ರ ವಿಧಾನಸಭಾ ಚುನಾವಣೆಯ ಫಲಿತಾಂಶದಲ್ಲಿ ಮಹಾಯುತಿಯ ಸ್ಥಾನಗಳು ಹಠಾತ್ತಾಗಿ ಏರಿಕೆಯಾದ ಬಗ್ಗೆ ಹಲವಾರು ಪ್ರಶ್ನೆಗಳನ್ನು ಎತ್ತಿದ್ದಾರೆ. ಮತದಾನದ ಸಮಯ ಮುಗಿದ ನಂತರ ಶೇಕಡಾ 7.83 ರಷ್ಟು ಮತಗಳು ಹೆಚ್ಚಾಗಿರುವ ಬಗ್ಗೆ ವಿವಿಧ ಹಂತಗಳಲ್ಲಿ ಅನುಮಾನಗಳು ಎದ್ದಿವೆ. ಚುನಾವಣಾ ಆಯೋಗದ ಅಂಕಿ - ಅಂಶಗಳನ್ನು ಗಮನಿಸಿದರೆ, ಆ ದಿನ (ನವೆಂಬರ್ 20) ಸಂಜೆ 5 ಗಂಟೆಯ ನಂತರ ಮತದಾನ ಕೇಂದ್ರಗಳ ಹೊರಗೆ ಉದ್ದನೆಯ ಸರತಿ ಸಾಲುಗಳು ಇರಬೇಕಾಗಿತ್ತು. ಆದರೆ, ಇದರಲ್ಲಿ ದೊಡ್ಡ ಹಗರಣ ನಡೆದಿದೆ ಎಂಬ ಬಗ್ಗೆ ಸಾರ್ವಜನಿಕರಲ್ಲಿ ವ್ಯಾಪಕ ಚರ್ಚೆಗಳು ನಡೆದಿವೆ ಎಂದು ಪಟೋಲೆ ಪತ್ರದಲ್ಲಿ ತಿಳಿಸಿದ್ದಾರೆ.

## ನೂತನ ಪಂಬನ್ ಸೇತುವೆ ಆಧುನಿಕ ಎಂಜಿನಿಯರಿಂಗ್ ಅದ್ಭುತ: ಅಶ್ವಿನಿ ವೈಷ್ಣವ್ ಬಣ್ಣನೆ

**ನವದೆಹಲಿ:** ನೂತನ ಪಂಬನ್ ಸೇತುವೆಯು 'ಆಧುನಿಕ ಎಂಜಿನಿಯರಿಂಗ್ನ ಅದ್ಭುತ' ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಬಣ್ಣಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ನಲ್ಲಿ ಸರಣಿ ಪೋಸ್ಟ್ ಮಾಡಿರುವ ಅವರು, ದೇಶದ ಮುಖ್ಯ ಭೂಭಾಗವನ್ನು ರಾಮೇಶ್ವರಂ ದ್ವೀಪಕ್ಕೆ ಸಂಪರ್ಕಿಸುವ ಭಾರತದ ಮೊದಲ ವರ್ಟಿಕಲ್-ಲಿಫ್ಟ್ ಸೇತುವೆ ರೈಲ್ವೆಗೆ, ಯಾಂತ್ರಿಕ ವಿಶಿಷ್ಟತೆ ಮತ್ತು ಪ್ರಕ್ಷುಬ್ಧ ಸಮುದ್ರದ ಸವಾಲಿನ ಹೊರತಾಗಿಯೂ ಎಲ್ಲರ ಗಮನ ಸೆಳೆಯುವ ಕೇಂದ್ರ ಬಿಂದುವಾಗಿದೆ. ನೂತರ ಪಂಬನ್ ಸೇತುವೆ ನವೀಕರಿಸಿದ ರಾಮೇಶ್ವರಂ ರೈಲ್ವೆ ನಿಲ್ದಾಣದೊಂದಿಗೆ (ನಿರ್ಮಾಣ ಹಂತದಲ್ಲಿದೆ) ಐತಿಹಾಸಿಕ ದ್ವೀಪಕ್ಕೆ ಪ್ರವಾಸೋದ್ಯಮ, ವ್ಯಾಪಾರವನ್ನು ಮತ್ತಷ್ಟು ವಿಸ್ತರಿಸುತ್ತದೆ ಮತ್ತು ಸಂಪರ್ಕ ಕಲ್ಪಿಸುತ್ತದೆ ಎಂದರು.ಆಧುನಿಕ ಎಂಜಿನಿಯರಿಂಗ್ನೊಂದಿಗೆ ಜನರು ಮತ್ತು ಸ್ಥಳಗಳಿಗೆ ಸಂಪರ್ಕ ಕಲ್ಪಿಸುವ ಪಂಬನ್ ಸೇತುವೆ ಪ್ರಗತಿಯ ಸಂಕೇತವಾಗಿದೆ. 1914 ರಿಂದ ಕಾರ್ಯನಿರ್ವಹಿಸುತ್ತಿದ್ದ ಹಳೆಯ ಪಂಬನ್ ರೈಲು ಸೇತುವೆಯು ಶಿಥಿಲಾವಸ್ಥೆ ತಲುಪಿದ ಕಾರಣ ಡಿಸೆಂಬರ್ 2022 ರಲ್ಲಿ ಸ್ಥಗಿತಗೊಂಡಿದೆ. ಹಳೆಯ ಪಂಬನ್ ರೈಲು ಸೇತುವೆಯು 105 ವರ್ಷಗಳ ಕಾಲ ದೇಶದ ಮುಖ್ಯ ಭೂಭಾಗವನ್ನು ರಾಮೇಶ್ವರಂಗೆ ಸಂಪರ್ಕ ಕಲ್ಪಿಸಿತ್ತು ಎಂದು ನೆನೆದರು.ಹೀಗಾಗಿ ಆಧುನಿಕ ಪಂಬನ್ ಸೇತುವೆಗೆ ನಿರ್ಮಾಣಕ್ಕೆ ಇದು ದಾರಿ ಮಾಡಿಕೊಟ್ಟಿತು. ಇದು ಸಂಪರ್ಕದ ಹೊಸ ಯುಗವನ್ನು ಗುರುತಿಸುತ್ತದೆ. ನೂತನ ಸಂಪೂರ್ಣ ಸ್ವಯಂಚಾಲಿತ ವರ್ಟಿಕಲ್ ಲಿಫ್ಟ್ ಸ್ಪ್ಯಾನ್ ಸುರಕ್ಷಿತ 22 ಮೀಟರ್ ಕ್ಲಿಯರೆನ್ಸ್ ನೀಡುತ್ತದೆ. ಡಬಲ್ ಟ್ರ್ಯಾಕ್ಗಳು ವಿದ್ಯುದೀಕರಣಗೊಂಡಿವೆ ಮತ್ತು ಹೈಸ್ಪೀಡ್ ರೈಲುಗಳ ಸಂಚಾರಕ್ಕೆ ಅನುಕೂಲವಾಗುವಂತೆ ಇದನ್ನು ವಿನ್ಯಾಸಗೊಳಿಸಲಾಗಿದೆ ಎಂದು ಹೇಳಿದರು.

## ನೈರುತ್ಯ ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ

**ಚೆನ್ನೈ:** ನೈರುತ್ಯ ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದಿಂದ ಉಂಟಾಗಿರುವ ಚಂಡಮಾರುತವೂ ನವೆಂಬರ್ 29 ರ ಶನಿವಾರ ಮಧ್ಯಾಹ್ನ ಪುದುಚೇರಿ ಸಮೀಪದಲ್ಲಿ ಕರೈಕಲ್ ಮತ್ತು ಮಹಾಬಲಿಪುರಂ ನಡುವೆ ಅಪ್ಪಳಿಸಲಿದೆ ಎಂದು ಚೆನ್ನೈ ಹವಾಮಾನ ಕೇಂದ್ರದ ನಿರ್ದೇಶಕರಾದ ಡಾ ಬಾಲಚಂದ್ರನ್ ತಿಳಿಸಿದರು. ಈ ಕುರಿತು ಮಾತನಾಡಿರುವ ಅವರು, ಸದ್ಯ ನೈರುತ್ಯ ಬಂಗಾಳ ಕೊಲ್ಲಿಯಲ್ಲಿ ಕಡಿಮೆ ಒತ್ತಡ ಪ್ರದೇಶ ನಿರ್ಮಾಣವಾಗಿದ್ದು, ಅದು ವಾಯುವ್ಯ ದಿಕ್ಕಿನೆಡೆಗೆ ಸಾಗುವ ನಿರೀಕ್ಷೆ ಇದೆ. ಇದು ಶೀಘ್ರದಲ್ಲೇ ಚಂಡಮಾರುತವಾಗಿ ತೀವ್ರಗೊಳ್ಳಲಿದೆ. ಇದು ನಾಳೆ ಮಧ್ಯಾಹ್ನ ಪುದುಚೇರಿ ಸಮೀಪ ಕರೈಕಲ್ ಮತ್ತು ಮಹಾಬಲಿಪುರಂ ನಡುವೆ ಅಪ್ಪಳಿಸಲಿದೆ. ಇದರ ಫಲಿತಾಂಶವಾಗಿ ತಮಿಳುನಾಡು ಉತ್ತರ ಕರಾವಳಿಯ ಜಿಲ್ಲೆಗಳಲ್ಲಿ ಸಾಧಾರಣದಿಂದ ಭಾರಿ ಮಳೆಯಾಗಲಿದೆ. ಮತ್ತೆ ಕೆಲವು ಪ್ರದೇಶದಲ್ಲಿ ಭಾರಿಯಿಂದ ಕೂಡಿದ ಭಾರಿ ಮಳೆಯಾಗಲಿದೆ ಎಂದರು.ಚಂಡಮಾರುತ ಅಪ್ಪಳಿಸುವ ಸಂದರ್ಭದಲ್ಲಿ ಗಾಳಿಯ ವೇಳೆ ಗಂಟೆಗೆ 70 ರಿಂದ 80 ಕಿ.ಮೀ ಇದ್ದು, ಕೆಲವು ಸಂದರ್ಭದಲ್ಲಿ ತೀವ್ರಗೊಂಡು ಗಂಟೆಗೆ 90 ಕಿ.ಮೀ ಆಗಬಹುದು. ಈ ಮುನ್ಸೂಚನೆ ಹಿನ್ನೆಲೆ ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಸಲಹೆ ನೀಡಿದ್ದೇವೆ. ಚಂಡಮಾರುತ ಮತ್ತು ಮಳೆ ಸಂಬಂಧಿಸಿದ ಅಗತ್ಯ ಮಾಹಿತಿಗಳನ್ನು ವ್ಯವಸ್ಥೆ ಮೂಲಕ ಅಪ್ಡೇಟ್ ಮಾಡಲಾಗುವುದು ಎಂದರು. ಬಂಗಾಳ ಕೊಲ್ಲಿಯಲ್ಲಿನ ನಿನ್ನೆಯ ಹವಾಮಾನ ವ್ಯವಸ್ಥೆ ಅನುಸಾರ ಚೆನ್ನೈ ಸೇರಿದಂತೆ ತಮಿಳುನಾಡಿನ ಕೆಲವು ಪ್ರದೇಶದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಮುಂದಿನ ಎರಡು ದಿನದಲ್ಲಿ ಸೈಕ್ಲೋನ್ ತೀವ್ರಗೊಳ್ಳಲಿದ್ದು, ಭಾರಿ ಮಳೆಯಾಗಲಿದೆ.

# ಮಾಜಿ ಕ್ರಿಕೆಟಿಗ ನವಜೋತ್ ಸಿಂಗ್ ಸಿಧು ಪತ್ನಿಗೆ 850 ಕೋಟಿ ಲೀಗಲ್ ನೋಟಿಸ್!

**ರಾಯಪುರ (ಛತ್ತೀಸ್ಗಢ):** ಹಿರಿಯ ಕಾಂಗ್ರೆಸ್ ಮುಖಂಡ ಮತ್ತು ಮಾಜಿ ಕ್ರಿಕೆಟಿಗ ನವಜೋತ್ ಸಿಂಗ್ ಸಿಧು ಅವರ ಪತ್ನಿಗೆ ಛತ್ತೀಸ್ಗಢ ಸಿವಿಲ್ ಸೊಸೈಟಿ (ಸಿಸಿಎಸ್) 850 ಕೋಟಿ ರೂ.ಗಳ ಲೀಗಲ್ ನೋಟಿಸ್ ನೀಡಿದೆ.

ಕಳೆದ ಸೋಮವಾರ ನವಜೋತ್ ಸಿಂಗ್ ಸಿಧು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿ, ನನ್ನ ಪತ್ನಿ ನವಜೋತ್ ಕೌರ್ ಅವರ ಕ್ಯಾನ್ಸರ್ ಅನ್ನು ವಿಶೇಷ ಡಯಟ್ ಪ್ಲ್ಯಾನ್(ಆಹಾರ ಶೈಲಿ) ಅನುಸರಿಸುವ ಮೂಲಕ ಗುಣಪಡಿಸಲಾಗಿದೆ. ಇದು ಅವರ ಚಿಕಿತ್ಸೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ. ನಿಂಬೆರಸ, ಅರಿಶಿನ ಮತ್ತು ಬೇವನ್ನು ಒಳಗೊಂಡ ಆಹಾರದಿಂದ ಮಾರಣಾಂತಿಕ ಕ್ಯಾನ್ಸರ್ ರೋಗವನ್ನು ಗುಣಪಡಿಸಬಹುದು ಎಂದು ಹೇಳಿದ್ದರು.

ಈ ಕುರಿತು ಸಿಸಿಎಸ್ ಸಂಚಾಲಕ ಡಾ.ಕುಲದೀಪ್ ಸೋಲಂಕಿ ಪ್ರತಿಕ್ರಿಯಿಸಿ, ನವಜೋತ್ ಸಿಂಗ್ ಸಿಧು



ಅವರು ನೀಡಿರುವ ಹೇಳಿಕೆಗಳು ದಾರಿತಪ್ಪಿಸುವ ಮತ್ತು ಗೊಂದಲಮಯವಾದವುಗಳಾಗಿವೆ. ಇದು ಅಲೋಪತಿ ಔಷಧ ಮತ್ತು ಚಿಕಿತ್ಸೆಯ ಬಗ್ಗೆ ಜನರ ಮನಸ್ಸಿನಲ್ಲಿ ನಕಾರಾತ್ಮಕತೆ ಸೃಷ್ಟಿಸುವ ಸಾಧ್ಯತೆ ಇದೆ. ಅವರ ಈ ಹೇಳಿಕೆ ಕ್ಯಾನ್ಸರ್ ರೋಗಿಗಳು ಅಲೋಪತಿ ಔಷಧಗಳನ್ನು ತೆಗೆದುಕೊಳ್ಳುವುದನ್ನು ಮಧ್ಯದಲ್ಲೇ ನಿಲ್ಲಿಸಲು ಒತ್ತಾಯಿಸುತ್ತಿದೆ. ಇದು ಅವರ ಜೀವಕ್ಕೆ ಅಪಾಯವನ್ನು ತಂದೊಡ್ಡುತ್ತದೆ ಎಂದು ಹೇಳಿದ್ದಾರೆ.

ಸಿಸಿಎಸ್, ನವಜೋತ್ ಕೌರ್ ಸಿಧುಗೆ ತನ್ನ ಪತಿಯ ಹೇಳಿಕೆಗಳ ಬಗ್ಗೆ ಸಾರ್ವಜನಿಕ ಸ್ಪಷ್ಟೀಕರಣವನ್ನು ನೀಡುವಂತೆ ಒತ್ತಾಯಿಸಿದೆ ಮತ್ತು ತಪ್ಪು ಮಾಹಿತಿ ಇತರ ರೋಗಿಗಳ ಆರೋಗ್ಯಕ್ಕೆ ಅಪಾಯವನ್ನುಂಟುಮಾಡುತ್ತದೆ ಎಂದು ಹೇಳಿದೆ.

ನವಜೋತ್ ಸಿಂಗ್ ಸಿಧು ಅವರ ಹೇಳಿಕೆಗಳು ವಿವಾದಕ್ಕೆ ಕಾರಣವಾಗಿದೆ ಮತ್ತು ಜನರು, ವಿಶೇಷವಾಗಿ ವೈದ್ಯರು ಸಿಧು ಅವರ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿದ್ದಾರೆ. ಸಿಧು ಅವರ ಹೇಳಿಕೆಗಳನ್ನು ಬೆಂಬಲಿಸುವ ಯಾವುದೇ ವೈಜ್ಞಾನಿಕ ದತ್ತಾಂಶ ಲಭ್ಯವಿಲ್ಲ ಮತ್ತು ಕ್ಯಾನ್ಸರ್ ಚಿಕಿತ್ಸೆಗಾಗಿ ವೃತ್ತಿಪರ ವೈದ್ಯಕೀಯ ಸಹಾಯವನ್ನು ಪಡೆಯುವಂತೆ ಸಾರ್ವಜನಿಕರಿಗೆ ವೈದ್ಯರು ಮನವಿ ಮಾಡಿದ್ದಾರೆ.

## ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಏಕಾಂಗಿ ಸ್ಪರ್ಧೆ

**ನವದೆಹಲಿ:** ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಏಕಾಂಗಿಯಾಗಿ ಸ್ಪರ್ಧಿಸುವ ನಿರ್ಧಾರವನ್ನು ಕಾಂಗ್ರೆಸ್ ಪಕ್ಷವು ಇಂದು ಪ್ರಕಟಿಸಿದೆ. ಆಮ್ ಆದ್ಮಿ ಪಾರ್ಟಿ (ಎಎಪಿ) ಯೊಂದಿಗೆ ಯಾವುದೇ ಮೈತ್ರಿಯನ್ನು ಮಾಡಿಕೊಳ್ಳುವುದಿಲ್ಲ ಎಂದು ಕಾಂಗ್ರೆಸ್ ಘೋಷಿಸಿದೆ. ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಎಲ್ಲಾ 70 ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷವು ಸ್ವಂತವಾಗಿ ಸ್ಪರ್ಧಿಸಲಿದೆ ಎಂದು ದೆಹಲಿ ಕಾಂಗ್ರೆಸ್ ಅಧ್ಯಕ್ಷ ದೇವೇಂದ್ರ ಯಾದವ್ ಹೇಳಿದ್ದಾರೆ.

ದೆಹಲಿ ವಿಧಾನಸಭಾ ಚುನಾವಣೆಗೆ ಯಾವುದೇ ಪಕ್ಷದೊಂದಿಗೆ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ಕಾಂಗ್ರೆಸ್ ನಾಯಕರು ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಅಭ್ಯರ್ಥಿಯನ್ನು ಚುನಾವಣೆಯ ನಂತರ ಕಾಂಗ್ರೆಸ್



ಶಾಸಕಾಂಗ ಪಕ್ಷವು ನಿರ್ಧರಿಸುತ್ತದೆ ಎಂದು ದೇವೇಂದ್ರ ಯಾದವ್ ಹೇಳಿದ್ದಾರೆ. ಈ ತಿಂಗಳ ಆರಂಭದಲ್ಲಿ ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಯನ್ನು ಮಹಾಭಾರತ ದಂತೆಯೇ 'ಧರ್ಮಯುದ್ಧ'ಕ್ಕೆ ಹೋಲಿಸಿದ್ದರು. ''ದೆಹಲಿ ವಿಧಾನಸಭಾ ಚುನಾವಣೆಯು 'ಧರ್ಮಯುದ್ಧ'ದಂತಿದೆ. ಕೌರವರಂತೆ ಅವರಲ್ಲಿ ಅಪಾರ ಹಣ ಮತ್ತು ಬಲವಿದೆ. ಆದರೆ, ಪಾಂಡವರಂತೆ ದೇವರು ಮತ್ತು ಜನರು ನಮ್ಮೊಂದಿಗಿದ್ದಾರೆ'' ಎಂದು ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ.

# ಏಕಾಏಕಿ ಸ್ವಗ್ರಾಮಕ್ಕೆ ತೆರಳಿದ ಏಕನಾಥ್ ಶಿಂಧೆ



**ನವದೆಹಲಿ:** ಮಹಾರಾಷ್ಟ್ರ ರಾಜ್ಯದ ನೂತನ ಮುಖ್ಯಮಂತ್ರಿಯ ಹೆಸರು ಬಹುತೇಕ ಇಂದು ಘೋಷಣೆಯಾಗಬೇಕಿತ್ತು. ಆದರೆ ಏಕಾಏಕಿ ಮಹಾಯುತಿ ಸಭೆ ರದ್ದಾಗಿದೆ. ಇನ್ನು ಈ ಸಭೆಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಗೊಳಿಸಲಾಗಿದ್ದು, ಹಂಗಾಮಿ ಮುಖ್ಯಮಂತ್ರಿ ಏಕನಾಥ್ ಶಿಂಧೆ ಸತಾರಾದಲ್ಲಿರುವ ತಮ್ಮ ದರೆ ಗ್ರಾಮಕ್ಕೆ ತೆರಳಿದ್ದಾರೆ. ಮುಂದಿನ ಎರಡು ದಿನಗಳು ಈ ಸಭೆ ನಡೆಯುವುದಿಲ್ಲ ಎಂದು ತಿಳಿದು ಬಂದಿದೆ. ಸಭೆ ರದ್ದಾದ ಕಾರಣ ಈವರೆಗೂ ಬಹಿರಂಗವಾಗಿಲ್ಲ. ಮೂಲಗಳ ಪ್ರಕಾರ, ಮಹಾರಾಷ್ಟ್ರದಲ್ಲಿ ಬಿಜೆಪಿಯ ಬಣ ಸಿಎಂ ಯಾರೆಂಬುದನ್ನು ನಿರ್ಧರಿಸಬಹುದು, ನಂತರ ಮಹಾಮೈತ್ರಿಕೂಟ ಸಭೆ ಪ್ರಾರಂಭವಾಗಬಹುದು ಎನ್ನಲಾಗಿದೆ. ಇಂದಿನ ಸಭೆಯ ನಾಯಕತ್ವ ವಹಿಸಬೇಕಿದ್ದ ಮಹಾರಾಷ್ಟ್ರದ ಹಂಗಾಮಿ ಮುಖ್ಯಮಂತ್ರಿ ಏಕನಾಥ್ ಶಿಂಧೆ ದಿಢೀರನೆ ಸತಾರಾದಲ್ಲಿರುವ ತಮ್ಮ ಗ್ರಾಮಕ್ಕೆ ತೆರಳಲು ಸಿದ್ಧತೆ ನಡೆಸಿದ್ದಾರೆ. ನಿನ್ನೆ ಮಹಾಯುತಿ ಮೈತ್ರಿಕೂಟದ ದೇವೇಂದ್ರ ಫಡ್ನವಿಸ್, ಏಕನಾಥ್ ಶಿಂಧೆ ಮತ್ತು ಅಜಿತ್ ಪವಾರ್ ಸೇರಿದಂತೆ ಹಲವು ನಾಯಕರು ದೆಹಲಿಯಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದರು. ಗೃಹ ಸಚಿವ ಅಮಿತ್ ಶಾ ಅವರ ನಿವಾಸದಲ್ಲಿ ಸಭೆ ನಡೆದಿತ್ತು. ಈ ಸಭೆಯಲ್ಲಿ ಅಮಿತ್ ಶಾ ಮಹಾಯುತಿಯ ಮುಖ್ಯಮಂತ್ರಿಯನ್ನು ಆಯ್ಕೆ ಮಾಡಿರುವ ಸಾಧ್ಯತೆಯಿದೆ ಎಂಬ ಸುದ್ದಿ ಹೊರ ಬಿದ್ದಿತ್ತು.

ಏಕನಾಥ್ ಶಿಂಧೆ ಮುಂಬೈನಲ್ಲಿ ಮಹಾಯುತಿಯ ನಾಯಕರನ್ನೊಳಗೊಂಡ ಸಭೆ ನಡೆಸಿ ನಂತರ ನೂತನ ಸಿಎಂ ಹೆಸರನ್ನು ಘೋಷಿಸಲಾಗುವುದು ಎಂದಿದ್ದರು. ಆದರೆ, ಈಗ ಈ ಸಭೆ ಇದ್ದಕ್ಕಿದ್ದಂತೆ ರದ್ದಾಗಿದೆ. ಮಹಾರಾಷ್ಟ್ರದ ಮುಂದಿನ ಮುಖ್ಯಮಂತ್ರಿ ಯಾರಾಗಬಹುದು ಎಂಬ ಕುತೂಹಲಕ್ಕೆ ಸದ್ಯ ತೆರೆ ಬೀಳುವಂತೆ ಕಾಣುತ್ತಿಲ್ಲ.ಇನ್ನು ಕೆಲವು ದಿನಗಳು ಕಾಯಬೇಕಾಗಿದೆ.ಮಹಾರಾಷ್ಟ್ರದಲ್ಲಿನ ಚುನಾವಣಾ ಫಲಿತಾಂಶ ಘೋಷಣೆಯಾಗಿ ಸುಮಾರು ಒಂದು ವಾರ ಕಳೆದಿದೆ. ಆದರೆ, ಮುಖ್ಯಮಂತ್ರಿ ಸ್ಥಾನದ ಬಗ್ಗೆ ಬಿಜೆಪಿ, ಶಿವಸೇನೆ ಮತ್ತು ಎನ್ಸಿಪಿ ಈವರೆಗೂ ಅಂತಿಮ ನಿರ್ಧಾರಕ್ಕೆ ಬರಲು ಸಾಧ್ಯವಾಗಿಲ್ಲ. ಶುಕ್ರವಾರ ಸಂಜೆ ಮಹಾಯುತಿ ಸಭೆ ನಡೆಯಬಹುದು ಎಂದು ಹೇಳಲಾಗಿತ್ತು. ಆದರೆ ಸಭೆಯನ್ನು ರದ್ದುಗೊಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

# ಬಾಂಗ್ಲಾದೇಶದಲ್ಲಿ ಚಿನ್ಮಯ್ ದಾಸ್ ಬಂಧನಕ್ಕೆ ಮಾಜಿ ಪ್ರಧಾನಿ ಶೇಖ್ ಹಸೀನಾ ಖಂಡನೆ




ಢಾಕಾ: ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಹಿಂದೂ ಆಧ್ಯಾತ್ಮಿಕ ನಾಯಕ ಚಿನ್ಮಯ್ ಕೃಷ್ಣ ದಾಸ್ ಅವರ ಬಂಧನವನ್ನು ಇಂದು ಖಂಡಿಸಿದ್ದಾರೆ. ಹಿಂದೂ ನಾಯಕ ಚಿನ್ಮಯ್ ದಾಸ್ನನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಅವರು ಹೇಳಿದ್ದಾರೆ. ದೇಶದ್ರೋಹದ ಆರೋಪದ ಮೇಲೆ ಈ ವಾರದ ಆರಂಭದಲ್ಲಿ ಚಿನ್ಮಯ್ ದಾಸ್ ಅವರನ್ನು ಬಂಧಿಸಲಾಯಿತು.

''ಸನಾತನ ಧಾರ್ಮಿಕ ಸಮುದಾಯದ ಹಿರಿಯ ನಾಯಕನನ್ನು ಅನ್ಯಾಯವಾಗಿ ಬಂಧಿಸಲಾಗಿದೆ. ಅವರನ್ನು ತಕ್ಷಣ ಬಿಡುಗಡೆ ಮಾಡಬೇಕು'' ಎಂದು ಶೇಖ್ ಹಸೀನಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಚಿತ್ತಗಾಂಗ್ನಲ್ಲಿ ದೇವಸ್ಥಾನವನ್ನು ಸುಟ್ಟು ಹಾಕಲಾಗಿದೆ. ಈ ಹಿಂದೆ ಅಹ್ಮದೀಯ ಸಮುದಾಯದ ಮಸೀದಿಗಳು, ಮಂದಿರಗಳು, ಚರ್ಚ್ಗಳು, ಮಠಗಳು ಮತ್ತು ಮನೆಗಳ ಮೇಲೆ ದಾಳಿ, ಧ್ವಂಸ, ಲೂಟಿ ಮಾಡಿ ಬೆಂಕಿ ಹಚ್ಚಲಾಗಿತ್ತು. ಧಾರ್ಮಿಕ ಸ್ವಾತಂತ್ರ್ಯ ಮತ್ತು ಎಲ್ಲಾ ಸಮುದಾಯಗಳ ಜನರ ಜೀವನ ಮತ್ತು ಆಸ್ತಿಯ ಸುರಕ್ಷತೆಯನ್ನು ಖಾತ್ರಿ ಪಡಿಸಬೇಕು ಎಂದು ಮಾಜಿ ಪ್ರಧಾನಿ ಶೇಖ್ ಹಸೀನಾ ಅವಾಮಿ ಲೀಗ್ನ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿವಾದಾತ್ಮಕ ಉದ್ಯೋಗ ಕೋಟಾ ವ್ಯವಸ್ಥೆಗೆ ಸಂಬಂಧಿಸಿದಂತೆ ಅವರ ಅವಾಮಿ ಲೀಗ್ ನೇತೃತ್ವದ ಸರ್ಕಾರದ ವಿರುದ್ಧ ವ್ಯಾಪಕ ಪ್ರತಿಭಟನೆಗಳ ನಂತರ ಶೇಖ್ ಹಸೀನಾ ಆಗಸ್ಟ್ 5ರಂದು ಭಾರತಕ್ಕೆ ಪಲಾಯನ ಮಾಡಿದರು. ಅದಾದ ಮೂರು ದಿನಗಳ ನಂತರ, ನೊಬೆಲ್ ಪ್ರಶಸ್ತಿ ವಿಜೇತ ಮಹಮ್ಮದ್ ಯೂನಸ್ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರರಾಗಿ ಅಧಿಕಾರ ವಹಿಸಿಕೊಂಡರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054







# ಮಗಳೊಂದಿಗಿನ ಮುದ್ದಾದ ಫೋಟೋ ಹಂಚಿಕೊಂಡ ಮಿಲನಾ

'ಲವ್ ಮಾಕ್ಟೈಲ್' ಬೆಡಗಿ ಮಿಲನಾ ನಾಗರಾಜ್ ಅವರು ಮತ್ತೆ ಸಿನಿಮಾ ಕೆಲಸಗಳಲ್ಲಿ ಬ್ಯುಸಿಯಾಗಿದ್ದಾರೆ. ಬ್ರೇಕ್ ಸಿಕ್ಕ ಬೆನ್ನಲ್ಲೇ ಮಗಳ ಜೊತೆ ಮುದ್ದಾದ ಫೋಟೋವೊಂದನ್ನು ಮಾಡಿಸಿದ್ದಾರೆ. ಮಗಳು 'ಪರಿ' ಜೊತೆಗಿನ ಚೆಂದದ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮಗಳ ಕೆನ್ನೆ ಮೇಲೆ ಮಿಲನಾ ಮುಖವಿಟ್ಟು ಮುದ್ದಾದ ನಗು ಬೀರಿದ್ದಾರೆ. ಸದ್ಯ ಮಗಳ ಜೊತೆಗಿನ ಹಂಚಿಕೊಂಡಿರುವ ನಟಿಯ ಫೋಟೋ ನೋಡಿ, 'ನಿಮ್ಮ ಮಗಳಿಗೆ ದೃಷ್ಟಿ ತೆಗೆಯಿರಿ' ಎಂದು ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ಸೆಪ್ಟೆಂಬರ್‌ನಲ್ಲಿ ಮುದ್ದಾದ ಹೆಣ್ಣು ಮಗುವಿಗೆ ನಟಿ ಜನ್ಮ ನೀಡಿದರು. ಮಗಳಿಗೆ 'ಪರಿ' ಎಂದು ಮಿಲನಾ ದಂಪತಿ ಹೆಸರಿಟ್ಟಿದ್ದಾರೆ. ಅಂದಹಾಗೆ, ಹಲವು ವರ್ಷಗಳು ಪ್ರೀತಿಸಿ 2021ರಲ್ಲಿ ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಫೆ.14ರಂದು ಮದುವೆಯಾದರು. ಇನ್ನೂ ಚಾರ್ಲಿ, ಮಿಸ್ಟರ್ ಬ್ಯಾಚುಲರ್, ನಮ್ ದುನಿಯಾ ನಮ್ ಸ್ಟೈಲ್, ಲವ್ ಬರ್ಡ್ಸ್, ಕೌಸಲ್ಯ ಸುಪ್ರಜಾ ರಾಮ, 'ಲವ್ ಮಾಕ್ಟೈಲ್', 'ಲವ್ ಮಾಕ್ಟೈಲ್ 2? ಸಿನಿಮಾಗಳಲ್ಲಿ ಮಿಲನಾ ಮತ್ತು ಡಾರ್ಲಿಂಗ್ ಕೃಷ್ಣ ಜೊತೆಯಾಗಿ ನಟಿಸಿದ್ದಾರೆ. ''ಲವ್ ಮಾಕ್ಟೈಲ್ 3' ಸಿನಿಮಾ ಬಗ್ಗೆ ಸದ್ಯದಲ್ಲೇ ಅಪ್‌ಡೇಟ್ ಸಿಗಲಿದೆ.

# ಹಾಟ್ ಅವತಾರ ತಾಳಿದ 'ಟೋಬಿ' ಬೆಡಗಿ ಚೈತ್ರಾ



'ಟೋಬಿ' ಬ್ಯೂಟಿ ಚೈತ್ರಾ, ಆಚಾರ್ ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಮತ್ತೆ ಹಾಟ್ ಅವತಾರ ತಾಳಿರೋದು ಪಡ್ಡೆಹುಡುಗರ ನಿದ್ದೆ ಕೆಡಿಸಿದೆ. ಸಖತ್ ಬೋಲ್ಡ್ ಆಗಿರೋ ಫೋಟೋಶೂಟ್‌ವೊಂದನ್ನು ನಟಿ ಹಂಚಿಕೊಂಡಿದ್ದಾರೆ. ಕಪ್ಪು ಬಣ್ಣದ ಲಾಂಗ್ ಡ್ರೆಸ್‌ನಲ್ಲಿ ನಟಿ ಹಾಟ್ ಆಗಿ ಕ್ಯಾಮೆರಾ ಕಣ್ಣಿಗೆ ಪೋಸ್ ನೀಡಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ನಿಂತಿರುವ ಲುಕ್ ನೋಡಿ ಪಡ್ಡೆಹುಡುಗರು ಸೈಕ್ ಆಗಿದ್ದಾರೆ. ನಟಿಯ ಅವತಾರಕ್ಕೆ ಹಾಟ್, ಸೆಕ್ಸಿ, ಬ್ಯೂಟಿಫುಲ್ ಎಂದೆಲ್ಲಾ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ.

ಈ ಹಿಂದೆ ಕೂಡ ನಟಿ ರವಿಕೆ ಧರಿಸಿದೇ ಸೀರೆಯುಟ್ಟ ಫೋಟೋವೊಂದನ್ನು ಹಂಚಿಕೊಂಡು ಇಂಟರ್‌ನೆಟ್‌ಗೆ ಬೆಂಕಿ ಹಚ್ಚಿದ್ದರು. ಆ ಫೋಟೋಶೂಟ್ ಸೋಶಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡಿತ್ತು. ಇವರನ್ನು ಕನ್ನಡದ ಆಲಿಯಾ ಭಟ್ ಎಂದು ಫ್ಯಾನ್ಸ್ ಬಣ್ಣಿಸಿದ್ದಾರೆ.

ಇನ್ನೂ ಕನ್ನಡತಿ ಚೈತ್ರಾ ತಮಿಳಿನ ಎರಡು ಬಂಪರ್ ಆಫರ್‌ಗಳನ್ನು ಬಾಚಿಕೊಂಡಿದ್ದಾರೆ. ಸ್ಟಾರ್ ನಟ ಸಿದ್ಧಾರ್ಥ್‌ಗೆ ನಾಯಕಿಯಾಗಿ ಚೈತ್ರಾ ನಟಿಸುತ್ತಿದ್ದಾರೆ. ಕನ್ನಡದ ಜೊತೆಗೆ ಪರಭಾಷೆಗಳಿಂದ ನಟಿಗೆ ಅವಕಾಶಗಳು ಅರಸಿ ಬರುತ್ತಿವೆ.

ಸಪ್ತಸಾಗರದಾಚೆ ಎಲ್ಲೋ, 'ಟೋಬಿ' ಸಿನಿಮಾದಲ್ಲಿ ನಟಿಸಿದ ಮೇಲೆ ಚೈತ್ರಾ, ಆಚಾರ್‌ಗೆ ಬೇಡಿಕೆ ಜಾಸ್ತಿಯಾಗಿದೆ. ರಕ್ಷಿತ್ ಶೆಟ್ಟಿ ಮತ್ತು ರಾಜ್ ಬಿ ಶೆಟ್ಟಿಗೆ ನಾಯಕಿಯಾಗಿ ಅದ್ಭುತವಾಗಿ ನಟಿಸಿದರು.

2019ರಲ್ಲಿ 'ಮಹಿರಾ' ಸಿನಿಮಾದ ಮೂಲಕ ಚೈತ್ರಾ ಆಚಾರ್ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು. ಇದಾದ ಬಳಿಕ ಕನ್ನಡದ ಹಲವು ಸಿನಿಮಾಗಳಲ್ಲಿ ನಟಿಸಿದರು.





# ಬಾಲಿವುಡ್‌ಗೆ 'ಕಿಸ್ಸಿಕ್' ಹೀರೋಯಿನ್



ಕನ್ನಡತಿ ಶ್ರೀಲೀಲಾ ಅವರು ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಇದೀಗ ಬಾಲಿವುಡ್‌ಗೆ ಪಾದಾರ್ಪಣೆ ಮಾಡೋಕೆ ನಟಿ ಸಜ್ಜಾಗಿದ್ದಾರೆ ಎನ್ನಲಾದ ವಿಚಾರಕ್ಕೆ ಶ್ರೀಲೀಲಾ ಸ್ಪಷ್ಟನೆ ನೀಡಿದ್ದಾರೆ. ಸಂದರ್ಶನವೊಂದರಲ್ಲಿ ನಟಿ ಮಾತನಾಡಿ, ಹಿಂದಿ ಸಿನಿಮಾದಲ್ಲಿ ಕೆಲಸ ಮಾಡಲಿರುವ ವಿಚಾರ ನಿಜ ಎಂದು ಒಪ್ಪಿಕೊಂಡಿದ್ದಾರೆ.

**ಎಂಟ್ರಿ ಕೊಡ್ತಿರೋದು ನಿಜನಾ? – ಸ್ಪಷ್ಟನೆ ನೀಡಿದ ಶ್ರೀಲೀಲಾ**

ತೆಲುಗು ನಟ ರಾಣಾ ದಗ್ಗುಬಾಟಿ ಶೋಗೆ ಶ್ರೀಲೀಲಾ ಗೆಸ್ಟ್ ಆಗಿ ತೆರಳಿದರು. ಈ ಕುರಿತಾದ ಪ್ರೋಮೋ ಕೂಡ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಬಾಲಿವುಡ್ ಡೆಬ್ಯೂ ಬಗ್ಗೆ ನಟಿಯನ್ನು ರಾಣಾ ಪ್ರಶ್ನಿಸಿದ್ದಾರೆ. ಬಾಲಿವುಡ್‌ಗೆ ಎಂಟ್ರಿ ಕೊಡುತ್ತಿರುವ ವಿಚಾರ ನಿಜ. ಬಾಲಿವುಡ್‌ನಲ್ಲಿ ಮೊದಲ ಬಾರಿಗೆ ಕೆಲಸ ಮಾಡುತ್ತಿದ್ದೇನೆ. ಹೊಸದಾಗಿದೆ ಮತ್ತು ವಿಭಿನ್ನವಾಗಿದೆ ಎಂದು ನಟಿ ಮಾತನಾಡಿದ್ದಾರೆ. ಆದರೆ ಯಾವ ಸಿನಿಮಾ, ಯಾರಿಗೆ ಜೋಡಿಯಾಗಿ ನಟಿಸುತ್ತಾರೆ ಎಂಬ ವಿಚಾರವನ್ನು ಅವರೆಲ್ಲೂ ತಿಳಿಸಿಲ್ಲ. ಇದರ ಎಪಿಸೋಡ್ ಸೆ.30ರಂದು ಒಟಿಟಿಯಲ್ಲಿ ಪ್ರಸಾರವಾಗಿದೆ. ಅಲ್ಲಿ ಇನ್ನಷ್ಟು ಮಾಹಿತಿ ಸಿಗುತ್ತಾ? ಎಂದು ಕಾದುನೋಡಬೇಕಿದೆ. ಇನ್ನೂ ಕೆಲ ತಿಂಗಳುಗಳಿಂದ ಶ್ರೀಲೀಲಾ ಬಾಲಿವುಡ್ ಎಂಟ್ರಿ ಬಗ್ಗೆ ಸಖತ್ ಚರ್ಚೆ ಆಗಿತ್ತು. ಆದರೆ ಎಲ್ಲೂ ಅಧಿಕೃತ ಮಾಹಿತಿ ಸಿಕ್ಕಿರಲಿಲ್ಲ. ಈಗ ನಟಿಯ ಕಡೆಯಿಂದ ಉತ್ತರ ಸಿಕ್ಕಿದೆ. ಅಂದಹಾಗೆ, ಶ್ರೀಲೀಲಾ 'ಪುಷ್ಪ 2' ಸಿನಿಮಾದಲ್ಲಿ ಅಲ್ಲು ಅರ್ಜುನ್ ಜೊತೆ 'ಕಿಸ್ಸಿಕ್' ಹಾಡಿಗೆ ಸೊಂಟ ಬಳುಕಿಸಿದ್ದಾರೆ. ಡಿ.5ಕ್ಕೆ ಸಿನಿಮಾ ರಿಲೀಸ್ ಆಗಲಿದೆ. ಜೊತೆಗೆ ಡಿ.20ರಂದು ಶ್ರೀಲೀಲಾ, ನಿತಿನ್ ನಟನೆಯ 'ರಾಬಿನ್‌ಹುಡ್' ಸಿನಿಮಾ ರಿಲೀಸ್‌ಗೆ ರೆಡಿಯಿದೆ.

# ಟಿ20 ಇನಿಂಗ್ಸ್‌ನಲ್ಲಿ ಅತ್ಯಧಿಕ ಬೌಲರ್‌ಗಳನ್ನು ಬಳಸಿದ ತಂಡ ಯಾವುದು ಗೊತ್ತಾ?




ಟಿ20 ಕ್ರಿಕೆಟ್ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ತಂಡವೊಂದರ 11 ಆಟಗಾರರು ಬೌಲಿಂಗ್ ಮಾಡಿ ದಾಖಲೆ ಬರೆದಿದ್ದಾರೆ. ಇಂತಹದೊಂದು ಅಪರೂಪದ ದಾಖಲೆ ಮೂಡಿಬಂದಿದ್ದು ಭಾರತದ ಅಂಗಳದಲ್ಲಿ ಎಂಬುದು ವಿಶೇಷ. ಇನ್ನು ಈ ದಾಖಲೆ ಬರೆದ ತಂಡ ದೆಹಲಿ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಸೈಯ್ಯದ್ ಮುಷ್ತಾಕ್ ಅಲಿ ಟೂರ್ನಿಯ ಈ ಪಂದ್ಯದಲ್ಲಿ ದೆಹಲಿ ಮತ್ತು ಮಣಿಪುರ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಮಣಿಪುರ ವಿರುದ್ಧ ದೆಹಲಿ ತಂಡದ ನಾಯಕ ಆಯುಷ್ ಬದೋನಿ 11 ಅಸ್ತ್ರಗಳನ್ನು ಪ್ರಯೋಗಿಸಿದ್ದಾರೆ.

ಆಯುಷ್ ಸಿಂಗ್ ಕಡೆಯಿಂದ ಶುರುವಾದ ದೆಹಲಿ ಬೌಲಿಂಗ್ ಆರಂಭ ಆ ಬಳಿಕ ಅಖಿಲ್ ಚೌಧರಿ, ಹರ್ಷ್ ತ್ಯಾಗಿ, ದಿಗ್ವೇಷ್ ರಾಠಿ, ಮಯಾಂಕ್ ರಾವತ್ ಹಾದಿಯಾಗಿ ಮುಂದುವರೆಯಿತು.

ಇನ್ನು ವಿಕೆಟ್ ಕೀಪರ್ ಆಯುಷ್ ಬದೋನಿ ಕೂಡ 2 ಓವರ್ ಎಸೆದರು. ಇದಾದ ಬಳಿಕ ಆರ್ಯನ್ ರಾಣಾ, ಹಿಮ್ಮತ್ ಸಿಂಗ್, ಪ್ರಿಯಾಂಶ್ ಆರ್ಯ, ಯಶ್ ಧುಲ್ ಮತ್ತು ಅನೂಜ್ ರಾವತ್ ತಲಾ ಒಂದೊಂದು ಓವರ್ ಎಸೆದರು. ಈ ಮೂಲಕ ದೆಹಲಿ ತಂಡದ ನಾಯಕ ಆಯುಷ್ ತನ್ನೆಲ್ಲಾ ಆಟಗಾರರಿಂದ ಬೌಲಿಂಗ್ ಮಾಡಿಸಿ ಟಿ20 ಕ್ರಿಕೆಟ್ ನಲ್ಲಿ ಅಪರೂಪದ ದಾಖಲೆ ಬರೆದರು.

ಇನ್ನು ಹನ್ನೊಂದು ಮಂದಿ ಬೌಲಿಂಗ್ ಮಾಡಿದರೂ ಮಣಿಪುರ ತಂಡ ಆಲೌಟ್ ಆಗಿಲ್ಲ ಎಂಬುದು ಮತ್ತೊಂದು ವಿಶೇಷ. ಈ ಪಂದ್ಯದಲ್ಲಿ 20 ಓವರ್‌ಗಳನ್ನು ಎದುರಿಸಿದ ಮಣಿಪುರ ತಂಡ 8 ವಿಕೆಟ್ ಕಳೆದುಕೊಂಡು 120 ರನ್ ಕಲೆಹಾಕಿತು.

121 ರನ್ ಗಳ ಸುಲಭ ಗುರಿ ಬೆನ್ನತ್ತಿದ ದೆಹಲಿ ಪರ ಆರಂಭಿಕ ದಾಂಡಿಗ ಯಶ್ ಧುಲ್ (59) ಅರ್ಧಶತಕ ಬಾರಿಸಿದರು. ಈ ಹಾಫ್ ಸೆಂಚುರಿ ನೆರವಿನಿಂದ ದೆಹಲಿ ತಂಡವು 18.3 ಓವರುಗಳಲ್ಲಿ 6 ವಿಕೆಟ್ ಕಳೆದುಕೊಂಡು 124 ರನ್ ಬಾರಿಸಿ 4 ವಿಕೆಟ್‌ಗಳ ಜಯ ಸಾಧಿಸಿತು.

ವಿಶ್ವ ದಾಖಲೆ: ಟಿ20 ಕ್ರಿಕೆಟ್ ಇತಿಹಾಸದಲ್ಲಿ ಯಾವುದೇ ತಂಡ ಪ್ಲೇಯಿಂಗ್ ಇಲೆವೆನ್ ನ 11 ಆಟಗಾರರಿಂದ ಬೌಲಿಂಗ್ ಮಾಡಿಸಿರಲಿಲ್ಲ. ಇದೀಗ ಅಂತಹದೊಂದು ಪ್ರಯೋಗ ನಡೆಸಿ ದೆಹಲಿ ತಂಡ ಹೊಸ ದಾಖಲೆ ಬರೆದಿದೆ. ಆಸ್ಟ್ರಿಯಾ ವಿರುದ್ಧ ಜೆಕ್ ರಿಪಬ್ಲಿಕ್ ಹಾಗೂ ಮಾಲ್ಟಾ ವಿರುದ್ಧ ಇಟಲಿ ತಂಡ 10 ಬೌಲರ್ ಗಳನ್ನು ಬಳಸಿದ್ದು ಇದುವರೆಗಿನ ದಾಖಲೆಯಾಗಿತ್ತು. ಇದೀಗ ವಿಕೆಟ್ ಕೀಪರ್ ಕೂಡ ಬೌಲಿಂಗ್ ಮಾಡುವ ಮೂಲಕ ಇಟಲಿ ಮತ್ತು ಜೆಕ್ ರಿಪಬ್ಲಿಕ್ ತಂಡಗಳ ಹೆಸರಿನಲ್ಲಿದ್ದ ವಿಶ್ವ ದಾಖಲೆಯನ್ನು ದೆಹಲಿ ತಂಡ ಮುರಿದಿದೆ. ಈ ಮೂಲಕ ಟಿ20 ಇನಿಂಗ್ಸ್ ನಲ್ಲಿ 11 ಬೌಲರ್‌ಗಳಿಂದ ಬೌಲಿಂಗ್ ಮಾಡಿಸಿದ ವಿಶ್ವದ ಮೊದಲ ಮತ್ತು ಏಕೈಕ ತಂಡ ಎನಿಸಿಕೊಂಡಿದೆ.

ಇನ್ನು ಇಂಡಿಯನ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲಿ ಅತ್ಯಧಿಕ ಬೌಲರ್‌ಗಳನ್ನು ಬಳಸಿದ ದಾಖಲೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳ ಹೆಸರಿನಲ್ಲಿದೆ. 2016 ರಲ್ಲಿ ಗುಜರಾತ್ ಲಯನ್ಸ್ ವಿರುದ್ಧದ ಪಂದ್ಯದಲ್ಲಿ ಆರ್‌ಸಿಬಿ 9 ಬೌಲರ್‌ಗಳನ್ನು ಬಳಸಿಕೊಂಡಿತ್ತು. 2023ರ ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ಕೂಡ 9 ಬೌಲರ್‌ಗಳಿಂದ ಬೌಲಿಂಗ್ ಮಾಡಿಸಿ ಈ ದಾಖಲೆ ಸರಿಗಟ್ಟಿದ್ದರು.

ಹಾಗೆಯೇ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಟಿ20 ಇನಿಂಗ್ಸ್‌ನಲ್ಲಿ ಅತ್ಯಧಿಕ ಬೌಲರ್‌ಗಳನ್ನು ಬಳಸಿದ ವಿಶ್ವ ದಾಖಲೆ ಜೆಕ್ ರಿಪಬ್ಲಿಕ್ ಹಾಗೂ ಇಟಲಿ ತಂಡಗಳ ಹೆಸರಿನಲ್ಲಿದೆ. ಈ ತಂಡಗಳು 10 ಬೌಲರ್‌ಗಳನ್ನು ಬಳಸಿ ಈ ದಾಖಲೆ ನಿರ್ಮಿಸಿದ್ದಾರೆ. ಇನ್ನು ಟೀಮ್ ಇಂಡಿಯಾ 2009 ರಲ್ಲಿ ಸೌತ್ ಆಫ್ರಿಕಾ ವಿರುದ್ಧದ ಟಿ20 ಪಂದ್ಯದಲ್ಲಿ 8 ಬೌಲರ್‌ಗಳನ್ನು ಪ್ರಯೋಗಿಸಿದ್ದರು.

# ಟೀಮ್ ಇಂಡಿಯಾಗೆ 'ಶುಭ್' ಸೂಚನೆ



ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ದ್ವಿತೀಯ ಟೆಸ್ಟ್ ಪಂದ್ಯವು ಡಿಸೆಂಬರ್ 6 ರಿಂದ ಶುರುವಾಗಲಿದೆ. ಈ ಪಂದ್ಯಕ್ಕೂ ಮುನ್ನ ಟೀಮ್ ಇಂಡಿಯಾ ಪ್ರೈಮ್ ಮಿನಿಸ್ಟರ್ ಇಲೆವೆನ್ ವಿರುದ್ಧ 2 ದಿನಗಳ ಅಭ್ಯಾಸ ಪಂದ್ಯವಾಡಲಿದೆ. ಕ್ಯಾನ್‌ಬೆರಾದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಟೀಮ್ ಇಂಡಿಯಾದ ಯುವ ದಾಂಡಿಗ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳುವ ಸಾಧ್ಯತೆಯಿದೆ.

ಪರ್ತ್ ಟೆಸ್ಟ್ ಪಂದ್ಯಕ್ಕೂ ಮುನ್ನ ಫೀಲ್ಡಿಂಗ್ ಅಭ್ಯಾಸ ವೇಳೆ ಶುಭ್‌ಮನ್ ಗಿಲ್ ಅವರ ಎಡಗೈ ಹೆಬ್ಬೆರಳಿಗೆ ಗಾಯವಾಗಿತ್ತು. ಹೀಗಾಗಿ ಅವರು ಮೊದಲ ಪಂದ್ಯದಿಂದ ಹೊರಗುಳಿದಿದ್ದರು. ಇನ್ನು ದ್ವಿತೀಯ ಟೆಸ್ಟ್ ಪಂದ್ಯದಲ್ಲೂ ಕಾಣಿಸಿಕೊಳ್ಳುವುದು ಅನುಮಾನ ಎನ್ನಲಾಗಿತ್ತು. ಆದರೆ ಶುಕ್ರವಾರ ನಡೆದ ಬ್ಯಾಟಿಂಗ್ ಅಭ್ಯಾಸದ ವೇಳೆ ಗಿಲ್ ಕಾಣಿಸಿಕೊಂಡಿದ್ದಾರೆ.

ಗಾಯದಿಂದ ಚೇತರಿಸಿಕೊಂಡಿರುವ ಶುಭ್‌ಮನ್ ಗಿಲ್ ಶುಕ್ರವಾರ ನೆಟ್ಸ್‌ನಲ್ಲಿ ಒಂದಷ್ಟು ಹೊತ್ತು ಬ್ಯಾಟಿಂಗ್ ಅಭ್ಯಾಸ ನಡೆಸಿದ್ದು, ಈ ಮೂಲಕ ದ್ವಿತೀಯ ಟೆಸ್ಟ್ ಪಂದ್ಯಕ್ಕಾಗಿ ಸಿದ್ಧತೆಗಳನ್ನು ಆರಂಭಿಸಿದ್ದಾರೆ. ಹೀಗಾಗಿ ಅಡಿಲೇಡ್‌ನಲ್ಲಿ ನಡೆಯಲಿರುವ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳುವುದು ಬಹುತೇಕ ಖಚಿತ ಎನ್ನಬಹುದು. ಇನ್ನು ಶುಭ್‌ಮನ್ ಗಿಲ್ ಆಗಮನದೊಂದಿಗೆ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್‌ನಿಂದ ಕನ್ನಡಿಗ ದೇವದತ್ ಪಡಿಕ್ಕಲ್ ಹೊರಬೀಳಲಿದ್ದಾರೆ. ಪರ್ತ್‌ನಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ ಗಿಲ್ ಸ್ಥಾನದಲ್ಲಿ ಮೂರನೇ ಕ್ರಮಾಂಕದಲ್ಲಿ ಪಡಿಕ್ಕಲ್ ಕಣಕ್ಕಿಳಿದಿದ್ದರು. ಇದೀಗ ಪಿಂಕ್ ಬಾಲ್ ಟೆಸ್ಟ್‌ನಲ್ಲಿ ಗಿಲ್ ಕಣಕ್ಕಿಳಿದರೆ, ಆಡುವ ಬಳಗದಿಂದ ಪಡಿಕ್ಕಲ್ ಹೊರಬೀಳುವುದು ಖಚಿತ.

ಭಾರತ ಟೆಸ್ಟ್ ತಂಡ: ರೋಹಿತ್ ಶರ್ಮಾ (ನಾಯಕ), ಜಸ್?ಪ್ರೀತ್ ಬುಮ್ರಾ (ಉಪನಾಯಕ), ಯಶಸ್ವಿ ಜೈಸ್ವಾಲ್, ಅಭಿಮನ್ಯು ಈಶ್ವರನ್, ಶುಭ್ ಮನ್ ಗಿಲ್, ವಿರಾಟ್ ಕೊಹ್ಲಿ , ಕೆಎಲ್ ರಾಹುಲ್, ರಿಷಭ್ ಪಂತ್ (ವಿಕೆಟ್ ಕೀಪರ್), ಸರ್ಫರಾಝ್ ಖಾನ್, ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಮೊಹಮ್ಮದ್ ಸಿರಾಜ್, ಆಕಾಶ್ ದೀಪ್, ಪ್ರಸಿದ್ಧ್ ಕೃಷ್ಣ, ಹರ್ಷಿತ್ ರಾಣ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್, ದೇವದತ್ ಪಡಿಕ್ಕಲ್.

# ಸಿಎಂ ಮನಸ್ಸಲ್ಲಿ ನಾನಿದ್ದೇನೆ, ಈ ಬಾರಿ ಸಚಿವ ಸ್ಥಾನ ಸಿಗುತ್ತೆ: ಪುಟ್ಟರಂಗಶೆಟ್ಟಿ



**ಚಾಮರಾಜನಗರ:** ಸಿಎಂ ಮನಸ್ಸಿನಲ್ಲಿ ನಾನಿದ್ದೇನೆ, ಈ ಬಾರಿ ಸಚಿವ ಸ್ಥಾನ ಕೊಟ್ಟೆ ಕೊಡ್ತಾರೆಂದು ಚಾಮರಾಜನಗರದಲ್ಲಿ ಶಾಸಕ ಹಾಗೂ ಎಂಎಸ್ ಐಎಲ್ ನಿಗಮದ ಅಧ್ಯಕ್ಷ ಪುಟ್ಟರಂಗಶೆಟ್ಟಿ ಹೇಳಿದರು. 136 ಸೀಟು ಗೆದ್ದು ಸಂಪುಟ ರಚನೆ ವೇಳೆ ನನ್ನ ಹೆಸರಿತ್ತು. ನಂಗೆ ಕಳೆದ ಬಾರಿಯೇ ಸಚಿವ ಸ್ಥಾನ ಕೊಡಬೇಕು ಅಂತಾ ತೀರ್ಮಾನವಾಗಿತ್ತು. ಕಾರಣಾಂತರದಿಂದ ಸಚಿವ ಸ್ಥಾನ ಕೈತಪ್ಪಿ ಹೋಗಿತ್ತು. ಈ ವೇಳೆ ಸಿಎಂ ಸಿದ್ದರಾಮಯ್ಯ ಒಂದು ವರ್ಷ ಉಪ ಸಭಾಪತಿ ಆಗಲೂ ಹೇಳಿದ್ದರು. ಆ ವೇಳೆ ನಾನು ಉಪ ಸಭಾಪತಿ ಸ್ಥಾನ ನಿರಾಕರಿಸಿದ್ದೆ. ಒಂದು ವರ್ಷ ಕಾಲ ಸುಮ್ಮನಿರಲೂ ಸಿಎಂ ಹೇಳಿದ್ದರು ಎಂದು ತಿಳಿಸಿದರು.

ಈ ಬಾರಿ ಸಂಪುಟ ಪುನಾರಚನೆ ಆದ್ರೆ ಸಚಿವ ಸ್ಥಾನ ಕೊಡ್ತಾರೆ. ಜಾತಿವಾರು, ಜಿಲ್ಲಾವಾರು ನೋಡಿದರು ಕೂಡ ನಂಗೆ ಸಚಿವ ಸ್ಥಾನ ಕೊಡಬೇಕು. ನಾನು ಕೂಡ ಕಾಂಗ್ರೆಸ್ ಪಕ್ಷದಲ್ಲಿ ಹಿರಿಯನಿದ್ದೇನೆ. ಮಲ್ಲಿಕಾರ್ಜುನ ಖರ್ಗೆ, ಡಿಕೆಶಿ, ಸಿಎಂ ಎಲ್ಲರ ಮೇಲೆ ನಂಬಿಕೆಯಿದೆ. ಈ ಬಾರಿ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ ಎಂದರು.

# ನಾನು ಸಚಿವ ಸ್ಥಾನದ ಆಕಾಂಕ್ಷಿ : ಶಾಸಕ ರಾಜು ಕಾಗೆ



**ಬೆಳಗಾವಿ:** ಸಚಿವ ಸಂಪುಟ ವಿಸ್ತರಣೆಯಾದರೆ ನಾನು ಸಹ ಸಚಿವ ಸ್ಥಾನದ ಆಕಾಂಕ್ಷಿ ಎಂದು ಕಾಗವಾಡ ಕ್ಷೇತ್ರದ ಕಾಂಗ್ರೆಸ್ ಶಾಸಕ ರಾಜು ಕಾಗೆ ಹೇಳಿದ್ದಾರೆ.

ಬೆಳಗಾವಿ ಜಿಲ್ಲೆಯ ಕಾಗವಾಡ ಮತಕ್ಷೇತ್ರದ ಶಿರೂರ ಗ್ರಾಮದಲ್ಲಿ ಮಾಧ್ಯಮಗಳಿಗೆ ಹೇಳಿಕೆ ನೀಡಿರುವ ಅವರು ಯಾವುದೇ ಖಾತೆ ಕೊಟ್ಟರೂ ಸೂಕ್ತವಾಗಿ ನಿಭಾಯಿಸುವೆ ಎಂದರು.

ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ವಿಚಾರಕ್ಕೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲೆಯ ಎಲ್ಲ ಪಂಚಮಸಾಲಿ ಸಮುದಾಯದ ಶಾಸಕರು, ಸಚಿವರು ಮುಖ್ಯಮಂತ್ರಿಗಳನ್ನು ಭೇಟಿ ಆಗಲಿದ್ದೇವೆ. ಅಧಿವೇಶನದ ಸಮಯದಲ್ಲಿ ಸ್ವಾಮೀಜಿ ನೇತೃತ್ವದಲ್ಲಿ ಸಿಎಂ ಸಿದ್ದರಾಮಯ್ಯರನ್ನು ಭೇಟಿ ಆಗುತ್ತೇವೆ. ಎಲ್ಲಾ ನಾಯಕರು ಒಗ್ಗಟ್ಟಾಗಿದ್ದೇವೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ನಾಯಕರುಗಳು ಚರ್ಚಿಸಿ ಒಂದು ಹಂತಕ್ಕೆ ಬರುತ್ತೇವೆ ಎಂದು ತಿಳಿಸಿದರು.

ಲಕ್ಷ್ಮಣ ಸವದಿ ಸಹ ಹಿರಿಯರಿದ್ದಾರೆ. ಈ ಹಿಂದೆ ಡಿಸಿಎಂ ಸ್ಥಾನವನ್ನು ನಿಭಾಯಿಸಿದ್ದಾರೆ. ಅವರಿಗೆ ಸಚಿವ ಸ್ಥಾನ ನೀಡಿದರೆ ನನಗೂ ಸಂತೋಷವಿದೆ. ಹಾಸನದಲ್ಲಿ ಸಿದ್ರಾಮೋತ್ಸವ ಮಾದರಿಯಲ್ಲಿ ಕಾರ್ಯಕ್ರಮಕ್ಕೆ ಆಯೋಜನೆ ವಿಚಾರ ಇದರ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರು.

# ಪಕ್ಕದ ಮನೆಗೆ ಕನ್ನ ಹಾಕಿ ಪೊಲೀಸರ ಅತಿಥಿಯಾದ ಬೆಂಗ್ಳೂರು ನೆಂಟ!



**ಕಾರವಾರ:** ಸಣ್ಣಪುಟ್ಟ ಕಳ್ಳತನ ಮಾಡಿ ಊರು ಬಿಟ್ಟು ಬೆಂಗಳೂರಿಗೆ ಸೇರಿದ್ದ ಯುವಕನೊಬ್ಬ, ಊರಿಗೆ ಬಂದು ಪಕ್ಕದ ಮನೆಗೆ ಕನ್ನ ಹಾಕಿ ಚಿನ್ನ ಲೂಟಿ ಮಾಡಿ ಪೊಲೀಸರ ಅತಿಥಿಯಾಗಿದ್ದಾನೆ.

ಬಂಧಿತ ಆರೋಪಿಯನ್ನು ಬೇಡ್ಕಣಿಯ ಗಣೇಶ್ ಎಂದು ಗುರುತಿಸಲಾಗಿದೆ. ಈತ ಚಿಕ್ಕಪುಟ್ಟ ಕಳ್ಳತನ ಮಾಡಿ, ಊರು ಬಿಟ್ಟು ಬೆಂಗಳೂರು ಸೇರಿ ಕೂಲಿ ಕೆಲಸ ಮಾಡಿಕೊಂಡಿದ್ದ. ಊರಿಗೆ ಬಂದವನೆ ಪಕ್ಕದ ಮನೆಗೆ ಕನ್ನ ಹಾಕಿ 1.26 ಲಕ್ಷ ರೂ. ಮೌಲ್ಯದ 21 ಗ್ರಾಂ ಚಿನ್ನ ಕದ್ದು, ಪರಾರಿಯಾಗಿದ್ದ. ಈ ಸಂಬಂಧ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಇದೀಗ ಪೊಲೀಸರು ಚಿನ್ನಾಭರಣ ಸಮೇತ ಈತನನ್ನು ಬಂಧಿಸಿದ್ದಾರೆ. ಈ ಹಿಂದೆ ಆರೋಪಿಯ ಚಿಕ್ಕಪುಟ್ಟ ತಪ್ಪುಗಳನ್ನು ಊರಿನ ಜನ ಕ್ಷಮಿಸಿದ್ದರು. ಇದೀಗ ದೊಡ್ಡ ಕಳ್ಳತನ ಮಾಡಿ ಕಂಬಿ ಹಿಂದೆ ಸೇರಿದ್ದಾನೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com